ಸಂಪುಟ: 05 ಸಂಚಿಕೆ: 39 ಪುಟಗಳು: 08 ಬುಧವಾರ 23 ಏಪ್ರಿಲ್ 2025

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

**ಮುಂಜಾನೆ ಮಾತು**

ಸಕ್ರಿಯವಾಗಿರಿ! ಜವಾಬ್ದಾರಿಯನ್ನು ತೆಗೆದುಕೊಳ್ಳಿ! ನೀವು ನಂಬುವ ವಿಷಯಗಳಿಗಾಗಿ ಕೆಲಸ ಮಾಡಿ. ನೀವು ನಂಬದಿದ್ದರೆ, ನೀವು ನಿಮ್ಮ ಅದೃಷ್ಟವನ್ನು ಇತರರಿಗೆ ಒಪ್ಪಿಸುತ್ತಿದ್ದೀರಿ.

ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

## ಟಿಸಿಎಸ್ ವಿಶ್ವ ಟೆನ್ ಕೆ 3.40 ಕೋಟಿ ನಿಧಿ ಸಂಗ್ರಹ

• ಉದಯವಾಹಿನಿ, ಬೆಂಗಳೂರು

ನಗರದಲ್ಲಿ ನಡೆಯಲಿರುವ ಟಿಸಿಎಸ್ ಟೆನ್ ಕೆ ಓಟದ ಅಂಗವಾಗಿ ಸ್ವಯಂ ಸೇವಾ ಸಂಘಟನೆಗಳಿಗೆ ನೀಡಲು 3.40 ಕೋಟಿ ದೇಣಿಗೆ ಸಂಗ್ರಹಿಸಲಾಗಿದೆ. 'ಪ್ರತಿ ವರ್ಷವೂ ಓಟದ ರೋಮಾಂಚನ ಮತ್ತು ಆರೋಗ್ಯಯುತ ಜೀವನದ ಸಂದೇಶ ನೀಡುವಲ್ಲಿ ಟೆನ್ ಕೆ ಯಶಸ್ವಿಯಾಗಿದೆ. ಅದರ ಜೊತೆಗೆ ಸಾಮಾಜಿಕ ಬದ್ಧತೆಯನ್ನೂ ಪ್ರದರ್ಶಿಸುತ್ತಿದೆ. ಈ ಬಾರಿ 35 ಸಾವಿರ ಓಟಗಾರರು ಭಾಗವಹಿಸುತ್ತಿದ್ದಾರೆ. ಅದರಲ್ಲಿ 250 ಮಂದಿ ನಿಧಿಸಂಗ್ರಹಕಾರರು 3.40 ಕೋಟಿಯನ್ನು ಸಂಗ್ರಹಿಸಿದ್ದಾರೆ. ಶಿಕ್ಷಣ, ಮಕ್ಕಳ ಕಲ್ಯಾಣ, ಪರಿಸರ ಸಂರಕ್ಷಣೆ, ಮಹಿಳೆಯರ ಕಲ್ಯಾಣ ಹಾಗೂ ಅಂಧ ಕ್ರಿಕೆಟಿಗರ ಟಿ20 ಟೂರ್ನಿಯನ್ನು ಆಯೋಜಿಸಲು ವಿವಿಧ ಎನ್‌ಜಿಒಗಳಿಗೆ ಈ ಹಣವನ್ನು ನೀಡಲಾಗುವುದು' ಎಂದು ಏಡ್‌ಬೀಸ್ ಸಂಸ್ಥೆಯ ಸಿಇಒ ಝುಮ್ರದಾ ಖಾಂಡೆ ಅವರು ಮಂಗಳವಾರ ನಡೆದ ಸುದ್ದಿಗೋಷ್ಠಿಯಲ್ಲಿ ತಿಳಿಸಿದರು.

''ಓಟದ ಚಟುವಟಿಕೆಯನ್ನು ಉತ್ತೇಜಿಸುವ ಜೊತೆಗೆ ಸಾಮಾಜಿಕ ಕಲ್ಯಾಣದ ಕುರಿತು ಮಹತ್ವದ ಕೆಲಸ ಮಾಡುತ್ತಿರುವ ಟಿಸಿಎಸ್ ಟೆನ್ ಕೆ ಓಟವು ಜಾಗತಿಕ ಮಟ್ಟದಲ್ಲಿ ಖ್ಯಾತವಾಗಿದೆ' ಎಂದು ಪ್ರೊಕ್ಯಾಮ್ ಇಂಟರ್‌ನ್ಯಾಷನಲ್ ಜಂಟಿ ಕಾರ್ಯನಿರ್ವಾಹಕ ನಿರ್ದೇಶಕ ವಿವೇಕ್ ಬಿ ಸಿಂಗ್ ಹೇಳಿದರು.

## ಸಿಂಧುತ್ವ | ಜಾತಿ ದೃಢೀಕರಣ ಪತ್ರ ಕಡ್ಡಾಯ: ಜಿಲ್ಲಾಧಿಕಾರಿ

• ಉದಯವಾಹಿನಿ, ಬೆಂಗಳೂರು

ಪೌರಕಾರ್ಮಿಕರು ಸಿಂಧುತ್ವ ಪ್ರಮಾಣಪತ್ರ ಪಡೆಯಲು ಜಾತಿ ದೃಢೀಕರಣ ಪತ್ರವನ್ನು ಕಡ್ಡಾಯವಾಗಿ ಸಲ್ಲಿಸಬೇಕು ಎಂದು ಬೆಂಗಳೂರು ನಗರ ಜಿಲ್ಲಾಧಿಕಾರಿ ಜಿ.ಜಗದೀಶ ತಿಳಿಸಿದರು.

ಬಿಬಿಎಂಪಿಗೆ ಆಯ್ಕೆಯಾಗಿರುವ ಪೌರಕಾರ್ಮಿಕರಿಗೆ ಜಾತಿ ಸಿಂಧುತ್ವ ಪ್ರಮಾಣಪತ್ರ ವಿತರಿಸಲು ಬೆಂಗಳೂರು ನಗರ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಆಯೋಜಿಸಿದ್ದ ಸಮಿತಿಯ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಪೌರಕಾರ್ಮಿಕರ ಹುದ್ದೆಗೆ ಆಯ್ಕೆಯಾಗುವ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದ ಅಭ್ಯರ್ಥಿಗಳು ಕರ್ನಾಟಕ ರಾಜ್ಯದ ನಿವಾಸಿಯಾಗಿರಬೇಕು, ಅಕ್ಷರದ ಅರಿವು ಹೊಂದಿರಬೇಕು, ಹಾಗೂ ಸರ್ಕಾರದ ನಿಯಮಾನುಸಾರ ಎಲ್ಲಾ ಅಗತ್ಯ ದಾಖಲೆಗಳನ್ನು ಸಲ್ಲಿಸಬೇಕು ಎಂದರು. ಅಭ್ಯರ್ಥಿಗಳು ಸಿಂಧುತ್ವ ಪ್ರಮಾಣಪತ್ರ ನೀಡುವಾಗ ಜಾತಿ ಪ್ರಮಾಣಪತ್ರವನ್ನು ದೃಢೀಕರಿಸುವುದು ಕಡ್ಡಾಯವಾಗಿರುತ್ತದೆ ಎಂದು ಜಿಲ್ಲಾಧಿಕಾರಿ ತಿಳಿಸಿದರು. ಸಿಂಧುತ್ವ ಪ್ರಮಾಣಪತ್ರಕ್ಕಾಗಿ ಅರ್ಜಿಗಳು ಬಂದಿದ್ದು, ಅಭ್ಯರ್ಥಿಗಳ ಸ್ಥಳೀಯ ವಿಚಾರಣೆ ನಡೆಸಿ, ನಕಲಿ ಜಾತಿ ಪ್ರಮಾಣಪತ್ರಗಳನ್ನು ಸಲ್ಲಿಸಿದವರ ವಿರುದ್ಧ ಎಫ್‌ಐಆರ್ ದಾಖಲಿಸಬೇಕು ಎಂದು ಸಂಬಂಧಿಸಿದ ನೋಡಲ್ ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಬಿಬಿಎಂಪಿಯ ವಿಶೇಷ ಆಯುಕ್ತ ಅಖಿಲೇಶ್, ಸಮಾಜ ಕಲ್ಯಾಣ ಇಲಾಖೆಯ ಜಂಟಿ ನಿರ್ದೇಶಕ ಲಕ್ಷ್ಮಣ್ ರೆಡ್ಡಿ, ಬೆಂಗಳೂರು ನಗರ ಜಿಲ್ಲಾ ಪಂಚಾಯತ್ ಉಪ ನಿರ್ದೇಶಕ ಜುಂಜಯ್ಯ, ಬೆಂಗಳೂರು ದಕ್ಷಿಣ ತಾಲ್ಲೂಕು ತಹಶೀಲ್ದಾರ್ ಶ್ರೀನಿವಾಸ್ ಹಾಗೂ ಬೆಂಗಳೂರು ಉತ್ತರ ತಾಲ್ಲೂಕು ತಹಶೀಲ್ದಾರ್ ವಿಜಯ್ ಕುಮಾರ್ ಉಪಸ್ಥಿತರಿದ್ದರು.

## 3 ವರ್ಷದಲ್ಲಿ ಅಂಬೇಡ್ಕರ್ ಪ್ರತಿಮೆ ನಿರ್ಮಾಣ: ಸಚಿವ

• ಉದಯವಾಹಿನಿ, ಬೆಂಗಳೂರು


ಡಾ.ಬಿ.ಆರ್.ಅಂಬೇಡ್ಕರ್ ಅವರ 200 ಮೀಟರ್ ಎತ್ತರದ ಕಂಚಿನ ಪ್ರತಿಮೆ ನಿರ್ಮಾಣಕ್ಕೆ ಒತ್ತಾಯಿಸಿ ಪ್ರಜಾ ಭೀಮ್ ಸಂಘದ ಅಧ್ಯಕ್ಷ ವೈಟ್ ಫೀಲ್ಡ್ ಮುರುಗೇಶ್ ನೇತೃತ್ವದಲ್ಲಿ ಬೀದರ್‌ನಿಂದ ಬೆಂಗಳೂರಿನವರೆಗೆ ನಡೆದ ಪಾದಯಾತ್ರೆ ಯಶಸ್ವಿಯಾಗಿ ಮುಕ್ತಾಯಗೊಂಡಿತು.

ಮಾರ್ಚ್ 6ರಂದು ಬೀದರ್‌ನಿಂದ ಪಾದಯಾತ್ರೆ ಆರಂಭಗೊಂಡಿತ್ತು. ಕಲಬುರಗಿ, ಯಾದಗಿರಿ, ರಾಯಚೂರು, ಕೊಪ್ಪಳ, ಹೊಸಪೇಟೆ, ಚಿತ್ರದುರ್ಗ, ತುಮಕೂರು ಗಡಿ ಜಿಲ್ಲೆಗಳ ಮೂಲಕ ಬೆಂಗಳೂರಿನವರೆಗೆ ಸುಮಾರು 1035 ಕಿ.ಮೀ. ದೂರವನ್ನು 45 ದಿನದಲ್ಲಿ ಕ್ರಮಿಸಿ, ಪೂರ್ಣಗೊಂಡಿತು. ಪಾದಯಾತ್ರೆಯಲ್ಲಿ ಪಾಲ್ಗೊಂಡವರು ಸಮಾಜ ಕಲ್ಯಾಣ ಸಚಿವ ಎಚ್.ಸಿ.ಮಹದೇವಪ್ಪ ಅವರಿಗೆ ಮನವಿ ಸಲ್ಲಿಸಿದರು. ಮನವಿ ಸ್ವೀಕರಿಸಿದ ಸಚಿವರು, ಸರ್ಕಾರದ ವತಿಯಿಂದ ಮೂರು ವರ್ಷದ ಒಳಗೆ ಅತಿ ಎತ್ತರದ ಡಾ.ಬಿ.ಆರ್.ಅಂಬೇಡ್ಕರ್ ಅವರ ಪ್ರತಿಮೆಯನ್ನು ನಿರ್ಮಿಸಿ ಲೋಕಾರ್ಪಣೆಗೊಳಿಸಲಾಗುವುದು ಎಂದು ಭರವಸೆ ನೀಡಿದರು. ಪ್ರಜಾ ಭೀಮ್ ಸಂಘದ ಅಧ್ಯಕ್ಷ ವೈಟ್‌ಫೀಲ್ಡ್ ಮುರುಗೇಶ್ ಮಾತನಾಡಿ, 'ನಮ್ಮ ಹೋರಾಟಕ್ಕೆ ಸ್ಪಂದಿಸಿದ ಸಮಾಜ ಕಲ್ಯಾಣ ಸಚಿವರಿಗೆ, ಸರ್ಕಾರಕ್ಕೆ ಧನ್ಯವಾದ ಅರ್ಪಿಸುವೆ' ಎಂದರು.




# ಗುಂಡಿನ ಅಬ್ಬರ
# ರಕ್ತ ಕಾಶ್ಮೀರ

● ಸಾವಿನ ಸಂಖ್ಯೆ 30ಕ್ಕೆ ಏರಿಕೆಯ ಶಂಕೆ ● ಇಬ್ಬರು ಕನ್ನಡಿಗರು ಬಲಿ, ಪಹಲ್ಗಾಮ್ ಉಗ್ರರ ದಾಳಿ: ಕರ್ನಾಟಕ ಪ್ರವಾಸಿಗ ಬಲಿ, ರಕ್ತಸಿಕ್ತ ಚಿತ್ರಣ..! ● ಜಮ್ಮು ಮತ್ತು ಕಾಶ್ಮೀರ: ಪಹಲ್ಗಾಮ್‌ನಲ್ಲಿ ಉಗ್ರರ ಗುಂಡಿನ ದಾಳಿ ● ಪ್ರವಾಸಿಗರಿಗೆ ಗಾಯ, ಶಿವಮೊಗ್ಗದ ಪ್ರವಾಸಿಗ ಸಾವು ● ಮೇಘಸ್ಫೋಟ: ರಾತ್ರೋರಾತ್ರಿ, ಮಾರುಕಟ್ಟೆಯೇ ಕಣ್ಮರೆ...!



ಜಮ್ಮು ಮತ್ತು ಕಾಶ್ಮೀರದ ಪಹಲ್ಗಾಮ್‌ನಲ್ಲಿ ನಡೆದ ಭಯೋತ್ಪಾದಕ ದಾಳಿಯನ್ನು ನಾನು ಬಲವಾಗಿ ಖಂಡಿಸುತ್ತೇನೆ. ಗಾಯಗೊಂಡವರು ಆದಷ್ಟು ಬೇಗ ಚೇತರಿಸಿಕೊಳ್ಳಲಿ ಎಂದು ಪ್ರಾರ್ಥಿಸುತ್ತೇನೆ. ಬಾಧಿತರಿಗೆ ಸಾಧ್ಯವಿರುವ ಎಲ್ಲಾ ಸಹಕಾರವನ್ನೂ ಒದಗಿಸಲಾಗುತ್ತದೆ.ಈ ಹೇಯ ಕೃತ್ಯದ ಹಿಂದಿರುವವರನ್ನು ನ್ಯಾಯದ ಕಟಕಟೆಗೆ ತಂದು ನಿಲ್ಲಿಸುತ್ತೇವೆ. ಈ ನೀಚ ಕೃತ್ಯ ಎಸಗಿದವರನ್ನು ಬಿಡುವ ಪ್ರಶ್ನೆಯೇ ಇಲ್ಲ. ಅವರ ದುಷ್ಟ ಕಾರ್ಯಸೂಚಿ ಎಂದಿಗೂ ಯಶಸ್ವಿಯಾಗುವುದಿಲ್ಲ. ಭಯೋತ್ಪಾದನೆಯ ವಿರುದ್ಧ ಹೋರಾಡುವ ನಮ್ಮ ಸಂಕಲ್ಪ ಅಚಲವಾಗಿದೆ.

-ನರೇಂದ್ರ ಮೋದಿ, ಪ್ರಧಾನಿ



ಪ್ರವಾಸಿಗರ ಮೇಲಿನ ಉಗ್ರರ ಗುಂಡಿನ ದಾಳಿ ಆಘಾತ, ನೋವು ತಂದಿದೆ. ಇದು ಒಂದು ಹೇಯ ಮತ್ತು ಅಮಾನವೀಯ ಕೃತ್ಯವಾಗಿದ್ದು, ಇದನ್ನು ನಿಸ್ಸಂದೇಹವಾಗಿ ಖಂಡಿಸಬೇಕು. ಪ್ರವಾಸಿಗರ ಮೇಲಿನ ಉಗ್ರ ದಾಳಿ ಕ್ಷಮಿಸಲಾಗದ ಕೃತ್ಯ. ಪ್ರೀತಿಪಾತ್ರರನ್ನು ಕಳೆದುಕೊಂಡ ಕುಟುಂಬಗಳಿಗೆ ಸಂತಾಪಗಳು. ಗಾಯಾಳುಗಳು ಬೇಗ ಚೇತರಿಸಿಕೊಳ್ಳಲೆಂದು ಪ್ರಾರ್ಥಿಸ್ತೇನೆ

-ದ್ರೌಪದಿ ಮುರ್ಮು, ರಾಷ್ಟ್ರಪತಿ

**ಶ್ರೀನಗರ:** ಪ್ರವಾಸಿಗರ ಸ್ವರ್ಗ ಎಂದೇ ಕರೆಸಿಕೊಳ್ಳುವ ಕಾಶ್ಮೀರ ಉಗ್ರರ ಅಟ್ಟಹಾಸಕ್ಕೆ ನಲುಗಿಹೋಗಿದೆ. ಪ್ರವಾಸಿಗರ ಮೇಲೆ ಭಯೋತ್ಪಾದಕರು ಗುಂಡಿನ ದಾಳಿ ಮಾಡಿದ್ದಾರೆ. ಈ ಗುಂಡಿನ ದಾಳಿಯಲ್ಲಿ ಶಿವಮೊಗ್ಗ ಮೂಲದ ನಿವಾಸಿ ಮಂಜುನಾಥ್ ರಾವ್ ಮೃತಪಟ್ಟಿದ್ದರು. ಇದೀಗ ಉಗ್ರರ ಅಟ್ಟಹಾಸಕ್ಕೆ ಮತ್ತೊಬ್ಬ ಕನ್ನಡಿಗ. ಹಾವೇರಿ ಮೂಲದ ಭರತ್ ಭೂಷಣ್ ಮೃತಪಟ್ಟಿದ್ದಾರೆ. ಹಾವೇರಿಯ ರಾಣೆಬೆನ್ನೂರಿನವರಾದ ಭರತ್ ಭೂಷಣ್ ಉಗ್ರರ ದಾಳಿಗೆ ಬಲಿಯಾಗಿದ್ದಾರೆ.



ಭರತ್ ಅವರು ಮಾಜಿ ಸ್ಪೀಕರ್ ಕೆ. ಬಿ. ಕೋಳಿವಾಡ ಅವರ ಅಳಿಯನ ಸ್ನೇಹಿತ ಎಂದು ತಿಳಿದು ಬಂದಿದೆ.

ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಮಂಗಳವಾರ ಸಂಜೆ ಭೀಕರ ಉಗ್ರರ ದಾಳಿ ನಡೆದಿದ್ದು, ಸಾವಿನ ಸಂಖ್ಯೆ 30ಕ್ಕೂ ಹೆಚ್ಚು ಮಂದಿಯನ್ನು ಉಗ್ರರು ಕೊಂದು ಹಾಕಿದ್ದಾರೆ ಎಂದು ಶಂಕೆ ವ್ಯಕ್ತವಾಗಿದೆ. ಈ ವೇಳೆ ಗಂಡನನ್ನು ಕಳೆದುಕೊಂಡ ಮಹಿಳೆಯರು ಕಣ್ಣೀರು ಹಾಕುವ ವಿಡಿಯೋಗಳು ವೈರಲ್ ಆಗಿದೆ. ಘಟನೆ ಸುಮಾರು ಮಧ್ಯಾಹ್ನ 1.30 ವೇಳೆಗೆ ನಡೆದಿದೆ. ಮಹಿಳೆರು ಉಗ್ರರ ದಾಳಿ ಬೆನ್ನಲ್ಲೇ ಭಯಾನಕ ಕ್ಷಣಗಳನ್ನು ವಿಡಿಯೋ ಮೂಲಕ ಹಂಚಿಕೊಂಡಿದ್ದಾರೆ. ನನ್ನ ಗಂಡ ಮುಸ್ಲಿಮ್ ಅಲ್ಲದ್ದಕ್ಕೆ ಉಗ್ರ ಶೂಟ್ ಮಾಡಿದ ಎಂದು ಮಹಿಳೆಯೊಬ್ಬರು ಹೇಳಿದ್ದಾರೆ. ಮತ್ತೊಂದು ವಿಡಿಯೋದಲ್ಲಿ ನನ್ನ ಗಂಡನನ್ನು ಕಾಪಾಡಿ ಕಾಪಾಡಿ ಎನ್ನುತ್ತಾ ಮಹಿಳೆ ಅಳುತ್ತಿರುವುದು ಸೆರೆಯಾಗಿದೆ. ಇನ್ನೊಂದು ವಿಡಿಯೋದಲ್ಲಿ ಕರ್ನಾಟಕ ಮಹಿಳೆಯು ಉಗ್ರನೊಬ್ಬ ನಾನು ನಿನ್ನ ಕೊಲ್ಲಲ್ಲ. ಮೋದಿಗೆ ಇದನ್ನು ಹೋಗಿ ಹೇಳು ಅಂತಾ ಎಂದು ಹೇಳಿದ್ದಾರೆ.



**ಗಂಡನನ್ನು ಕಳೆದುಕೊಂಡ ಶಿವಮೊಗ್ಗ ಮೂಲದ ಪಲ್ಲವಿ:** ಏಪ್ರಿಲ್ 19ಕ್ಕೆ ನಾವು ಕಾಶ್ಮೀರಕ್ಕೆ ಬಂದಿದ್ದೇವು. ಮೂರು ದಿನ ಎಲ್ಲಾವೂ ಸರಿಯಿತ್ತು. ಆದರೆ, ಇವತ್ತು ದುರಂತ ನಡೆದುಬಿಟ್ಟಿದೆ. ನನ್ನ ಮಗ ಏನಾದ್ರೂ ತಿನ್ನೋಕೆ ಕೊಡಿಸು ಅಂತಾ ಕೇಳಿದ. ಅದಕ್ಕೆ ಅವರು ಅಂಗಡಿಯಲ್ಲಿ ಏನಾದ್ರೂ ತರುತ್ತೇನೆ ಇರು ಅಂತಾ ಹೋದರು. ಆಗ ನಮಗೆ ಗನ್ ಫೈಯರ್ ಆದ ಶಬ್ಧ ಕೇಳಿತು. ಆದರೆ, ಅದು ಪೊಲೀಸರು ಏನಾದ್ರೂ ಪರೀಕ್ಷೆ ಮಾಡುತ್ತಿರುತ್ತಾರೆ ಅನ್ಕೊಂಡಿದ್ವೀ.. ಆದರೆ, ನನ್ನ ಪತಿಯನ್ನು ನೋಡಿದಾಗ ಅವರು ರಕ್ತದ ಮಡುವಿನಲ್ಲಿ ಬಿದ್ದಿದ್ದರು. ನನ್ನ ಕಣ್ಣೆದುರೆ ನನ್ನ ಪತಿ ಸಾವನ್ನಪ್ಪಿದ್ದಾರೆ. ಅಲ್ಲಿದ್ದ ಪ್ರವಾಸಿಗರು ಓಡಿ.. ಓಡಿ ಎಂದು ಕಿರುಚುತ್ತಿದ್ದರು. ಈ ವೇಳೆ ಉಗ್ರರನ್ನು ನಮ್ಮಿಬ್ಬರನ್ನು ಕೂಡ ಶೂಟ್ ಮಾಡಿ ಸಾಯಿಸಿ ಎಂದು ಕೇಳಿಕೊಂಡೆ. ಅದಕ್ಕೆ ಉಗ್ರರು ಮೋದಿಗೆ ಹೋಗಿ ಹೇಳಿ ಅಂತಾ ನಮ್ಮಿಬ್ಬರನ್ನು ಜೀವಂತ ಬಿಟ್ಟರು ಎಂದು ತಾವು ಉಗ್ರರ ಗನ್ ಪಾಯಿಂಟ್‌ನಿಂದ ಬದುಕುಳಿದ ಭಯಾನಕ ಅನುಭವವನ್ನು ಶಿವಮೊಗ್ಗ ಮೂಲದ ಪಲ್ಲವಿ ಬಿಚ್ಚಿಟ್ಟಿದ್ದಾರೆ.

**ದಾಳಿಯ ಹೊಣೆ ಹೊತ್ತ ಲಷ್ಕರೆ ತೊಯ್ಬಾ:** ದಾಳಿಯ ಹೊಣೆಯನ್ನು ಪಾಕಿಸ್ತಾನ ಮೂಲದ ಭಯೋತ್ಪಾದಕ ಸಂಘಟನೆ ಲಷ್ಕರೆ ತೊಯ್ಬಾದ ಸ್ಥಳೀಯ ಬ್ರಾಂಚ್ ಆಗಿರುವ ರೆಸಿಸ್ಟೆನ್ಸ್ ಫ್ರಂಟ್ ಹೊತ್ತುಕೊಂಡಿದ್ದು, ಪಾಕಿಸ್ತಾನದ ನೀಚ ಕೃತ್ಯ ಬಯಲಾಗಿದೆ. ದಾಳಿಯ ಬೆನ್ನಲ್ಲೇ ಸೇನೆ ಹೈ ಅಲರ್ಟ್ ಆಗಿದ್ದು, ಉಗ್ರರ ಶೋಧಕ್ಕೆ ಆಪರೇಷನ್ ಶುರುವಾಗಿದೆ. ಪ್ರಧಾನಿ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ, ರಕ್ಷಣಾ ಸಚಿವ ರಾಜನಾಥ್ ಸಿಂಗ್ ಸೇರಿ ದಾಳಿಯನ್ನು ಖಂಡಿಸಿದ್ದಾರೆ

**ನಿರಾಯುಧ ಪ್ರವಾಸಿಗರೇ ಗುರಿ:** ಬಿಜೆಪಿ ರವೀಂದ್ರ ರೈನಾ ಹೇಳಿದ್ದಾರೆ, ಈ ಹೇಡಿ ಭಯೋತ್ಪಾದಕರು ಕಾಶ್ಮೀರಕ್ಕೆ ಭೇಟಿ ನೀಡಲು ಬಂದಿದ್ದ ನಿರಾಯುಧ ಪ್ರವಾಸಿಗರನ್ನು ಗುರಿಯಾಗಿಸಿಕೊಂಡಿದ್ದಾರೆ.ಈ ದಾಳಿಯು ಪ್ರವಾಸಿಗರನ್ನು ಬೆಚ್ಚಿಬೀಳಿಸಿದೆ. ಕಾಶ್ಮೀರದಲ್ಲಿ ಶಾಂತಿ ಸ್ಥಾಪನೆಗೆ ಅಡ್ಡಿಯುಂಟು ಮಾಡುವ ಪ್ರಯತ್ನ ಇದಾಗಿದೆ. ಸರ್ಕಾರವು ಪ್ರವಾಸಿಗರ ರಕ್ಷಣೆಗೆ ಹೆಚ್ಚಿನ ಕ್ರಮಗಳನ್ನು ತೆಗೆದುಕೊಳ್ಳಬೇಕೆಂದು ಜನರು ಆಗ್ರಹಿಸಿದ್ದಾರೆ.

**1** ಜಮ್ಮು ಕಾಶ್ಮೀರದ ಪಹಲ್ಗಾಮ್‌ನಲ್ಲಿ ಉಗ್ರರ ದಾಳಿಯಲ್ಲಿ 30ಕ್ಕೂ ಹೆಚ್ಚು ಜನರು ಸಾವನ್ನಪ್ಪಿದ್ದಾರೆ.

**2** ನನ್ನ ಗಂಡ ಮುಸ್ಲಿಂ ಅಲ್ಲ ಅಂದಿದ್ದಕ್ಕೆ ಶೂಟ್ ಮಾಡಿದ ಉಗ್ರರು ಎಂದ ಮಹಿಳೆ.

**3** ಲಷ್ಕರೆ ತೊಯ್ಬಾ ಉಗ್ರರ ದಾಳಿಯ ಹೊಣೆ ಹೊತ್ತಿದ್ದು, ಪಾಕಿಸ್ತಾನದ ಭಯೋತ್ಪಾದಕ ಸಂಘಟನೆ ಇದಕ್ಕೆ ಸಂಬಂಧಿಸಿದೆ.

### ಡಿಕೆ ಶಿವಕುಮಾರ್ ಸಂತಾಪ



ಜಮ್ಮು ಮತ್ತು ಕಾಶ್ಮೀರದಲ್ಲಿ ಪ್ರವಾಸಿಗರ ಮೇಲೆ ಭಯೋತ್ಪಾದಕರು ಮನ ಬಂದಂತೆ ಗುಂಡಿನ ದಾಳಿ ನಡೆಸಿರುವ ವಿಚಾರ ತಿಳಿದು ಆಘಾತವಾಯಿತು. ಪ್ರವಾಸಿಗರ ಪೈಕಿ ಶಿವಮೊಗ್ಗ ಮೂಲದ ಓರ್ವ ಕನ್ನಡಿಗ ಮೃತಪಟ್ಟಿದ್ದು, ಅವರ ಮೃತದೇಹವನ್ನು ತರಲು ಸರ್ಕಾರದಿಂದ ಸಕಲ ವ್ಯವಸ್ಥೆಗಳನ್ನು ಮಾಡಲಾಗುತ್ತಿದೆ. ಕಾಶ್ಮೀರದಲ್ಲಿ ಸಿಲುಕಿರುವ ಪ್ರವಾಸಿ ಕನ್ನಡಿಗರನ್ನು ಸಂಪರ್ಕಿಸಿ, ಸುರಕ್ಷಿತವಾಗಿ ತಾಯ್ನಾಡಿಗೆ ಕರೆತರಲು ಈಗಾಗಲೇ ಪೊಲೀಸ್ ಅಧಿಕಾರಿಗಳ ತಂಡವೊಂದನ್ನು ಕಳುಹಿಸಲಾಗಿದೆ. ಮೃತರ ಕುಟುಂಬಕ್ಕೆ ತೀವ್ರ ಸಂತಾಪಗಳು'' ಎಂದು ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ಸಂತಾಪ ಸೂಚಿಸಿದ್ದಾರೆ.

### ಮಂಜುನಾಥ್ ಶವ ತರಲು ಎಲ್ಲಾ ರೀತಿಯ ಪ್ರಯತ್ನ

ಮೃತ ಮಂಜುನಾಥ್ ಅವರ ಪತ್ನಿ ಪಲ್ಲವಿಯವರನ್ನು ಸಂಪರ್ಕಿಸಲಾಗಿದೆ. ಮಂಜುನಾಥ್ ಮೃತದೇಹ ಬೆಟ್ಟದ ಮೇಲಿರುವುದರಿಂದ, ಮೃತದೇಹ ಕೆಳಗೆ ತರಲು ಅಧಿಕಾರಿಗಳ ಜತೆ ಸಂಪರ್ಕ ಮಾಡಿದ್ದೇನೆ. ಅಲ್ಲಿನ ಸ್ಥಳೀಯ ಅಧಿಕಾರಿಗಳನ್ನ ಸಂಪರ್ಕ ಮಾಡಿದ್ದೇವೆ. ಸ್ಥಳದಲ್ಲಿ ಬಿಗುವಿನ ವಾತಾವರಣ ಇರುವ ಬಗ್ಗೆ ಮಾಹಿತಿ ಇದೆ. ಮಂಜುನಾಥ್ ಅವರ ಶವ ತರಲು ಎಲ್ಲಾ ರೀತಿಯ ಪ್ರಯತ್ನ ಮಾಡುತ್ತೇವೆ ಎಂದು ಶಿವಮೊಗ್ಗ ಜಿಲ್ಲಾಧಿಕಾರಿ ಗುರುದತ್ ಹೆಗಡೆ ಮಾಹಿತಿ ನೀಡಿದರು.

---

**ಜಾತಿ ಜನಗಣತಿ ದಂಗಲ್** | **224 ಕ್ಷೇತ್ರಗಳಲ್ಲೂ ಆಂತರಿಕ ಸರ್ವೇ** | **ಮನದಾಳ ಅರಿಯಲು ತಂತ್ರ**

## ಎಐ ಸಮೀಕ್ಷೆ ಮೊರೆ ಹೋದ ಸಿದ್ದರಾಮಯ್ಯ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರದ ಮಹತ್ವದ ಜಾತಿ ಜನಗಣತಿ ಸಮೀಕ್ಷೆ ಸಚಿವ ಸಂಪುಟದಲ್ಲಿ ಮಂಡನೆ ಆದ ಹಿನ್ನೆಲೆಯಲ್ಲಿ ಭುಗಿಲೆದ್ದ ವಿವಾದದ ಹಿನ್ನೆಲೆಯಲ್ಲಿ ಜನರ ಅಭಿಪ್ರಾಯಗಳನ್ನು ತಿಳಿದುಕೊಳ್ಳಲು ಸಿಎಂ ಸಿದ್ದರಾಮಯ್ಯ ಸಮೀಕ್ಷೆಯ ಮೊರೆ ಹೋಗಿದ್ದಾರೆ ಎಂಬ ಮಾಹಿತಿ ತಿಳಿದುಬಂದಿದೆ. ಎ ಐ ತಂತ್ರಜ್ಞಾನವನ್ನು ಬಳಸಿಕೊಂಡು ಈ ಸಮೀಕ್ಷೆ ನಡೆಸಲು ಸಿಎಂ ಸಿದ್ದರಾಮಯ್ಯ ನಿರ್ಧಾರ ಮಾಡಿದ್ದು, ಈ ಮೂಲಕ ಜನರ ಮನದಾಳ ತಿಳಿದುಕೊಳ್ಳಲು ನಿರ್ಧಾರ ಮಾಡಲಾಗಿದೆ.

ಮೂಲಗಳ ಪ್ರಕಾರ ಆರ್ಟಿಫಿಸಿಯಲ್ ಇಂಟಲಿಜೆನ್ಸ್ ತಂತ್ರಜ್ಞಾನದ ಮೂಲಕ ಎಲ್ಲಾ ಕ್ಷೇತ್ರಗಳ ವೋಟರ್ ಲಿಸ್ಟ್ ಮಾಹಿತಿಗಳ ಮೂಲಕ ಈ ಸಮೀಕ್ಷೆ ನಡೆಸಲಾಗುತ್ತದೆ ಎಂದು ತಿಳಿದು ಬಂದಿದೆ. ಆದರೆ ಯಾವ ಸಂಸ್ಥೆಗೆ ಇದರ ಹೊಣೆಗಾರಿಕೆ ನೀಡಲಾಗಿದೆ ಯಾವ ದಿನದಿಂದ ಈ ಸಮೀಕ್ಷೆ ಶುರುವಾಗುತ್ತದೆ.

ಇದರ ಸ್ವರೂಪ ಯಾವ ರೀತಿಯಲ್ಲಿ ಇರಲಿದೆ ಎಂಬ ಮಾಹಿತಿ ಇನ್ನಷ್ಟೇ ಬಹಿರಂಗವಾಗಬೇಕಾಗಿದೆ.

ಜಾತಿ ಜನಗಣತಿ ವಿಚಾರವಾಗಿ ರಾಜ್ಯದಲ್ಲಿ ಭಿನ್ನ ಅಭಿಪ್ರಾಯಗಳು ಇವೆ. ಲಿಂಗಾಯತ ಹಾಗೂ ಒಕ್ಕಲಿಗ ಸಮುದಾಯ ಇದಕ್ಕೆ ವಿರೋಧ ವ್ಯಕ್ತಪಡಿಸಿದೆ. ಜಾತಿ ಗಣತಿಯಲ್ಲಿ ತಪ್ಪು ಅಂಕಿ- ಅಂಶಗಳನ್ನು ನೀಡಲಾಗಿದೆ. ಈ ನಿಟ್ಟಿನಲ್ಲಿ ಮರು ಸಮೀಕ್ಷೆ ಮಾಡಬೇಕು ಎಂಬ ಬೇಡಿಕೆ ಇಟ್ಟಿದೆ.

ವಿವಿಧ ಸಮುದಾಯಗಳ ಮಠಾಧೀಶರು ಕೂಡಾ ಈ ನಿಟ್ಟಿನಲ್ಲಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದ್ದಾರೆ.

ಇಂದು ಎಐ ಕಾಲಘಟ್ಟವಾಗಿದೆ. ಕೃತಕ ಬುದ್ಧಿಮತ್ತೆಯ ಮೂಲಕ ಎಲ್ಲಾ ಮಾಹಿತಿಗಳನ್ನು ಸಂಗ್ರಹಿಸಲು ಸಾಧ್ಯವಿದೆ. ಈ ನಿಟ್ಟಿನಲ್ಲಿ ಸಾಕಷ್ಟು ತಂತ್ರಜ್ಞಾನಗಳನ್ನು ಅಭಿವೃದ್ಧಿಪಡಿಸಲಾಗುತ್ತಿದೆ. ಎಲ್ಲಾ ರಂಗಗಳಲ್ಲೂ ಎಐ ದಾಪುಗಾಲು ಇಡುತ್ತಿದೆ. ಇದೇ ತಂತ್ರಜ್ಞಾನವನ್ನು ಅಳವಡಿಸಿಕೊಂಡು ಜನರ ನಾಡಿಮಿಡಿತ ನೋಡಲು ಸಿದ್ದರಾಮಯ್ಯ ಮುಂದಾಗಿದ್ದಾರೆ.

**ಕೃತಕ ಬುದ್ಧಿಮತ್ತೆ**



ಹೀಗಾಗಿ ಜಾತಿ ಜನಗಣತಿ ಸಮೀಕ್ಷಾ ವರದಿಯ ಪರ, ವಿರೋಧ ಚರ್ಚೆ ಬೆನ್ನಲ್ಲೇ ಸಿಎಂ ಸಿದ್ದರಾಮಯ್ಯ ಅವರು ಎ ಐ ಸಮೀಕ್ಷೆಯ ಮೊರೆ ಹೋಗಿದ್ದಾರೆ.

ಗ್ರಾಮ, ವಾರ್ಡ್, ಬ್ಲಾಕ್ ಮಟ್ಟದ ಅಂಕಿ ಅಂಶಗಳನ್ನು ನೀಡಿ ತಳಮಟ್ಟದಲ್ಲಿ ವಾಸ್ತವ ಪರಿಸ್ಥಿತಿ ಏನು ಎಂಬುವುದರ ಕುರಿತಾಗಿ ಮಾಹಿತಿ ಸಂಗ್ರಹ ಮಾಡಲು ತೀರ್ಮಾನ ಮಾಡಲಾಗಿದೆ. ಎಸ್‌ಸಿ, ಎಸ್‌ಟಿ, ಅಲ್ಪಸಂಖ್ಯಾತ, ಕುರುಬರು ಒಟ್ಟಾದ್ರೆ 112 ಕ್ಷೇತ್ರದಲ್ಲಿ ಕಾಂಗ್ರೆಸ್‌ಗೆ ಗೆಲ್ಲುವ ಅವಕಾಶ ಇದೆ. ಏಳು ಕ್ಷೇತ್ರಗಳಲ್ಲಿ ಕುರುಬ ಹೊರತುಪಡಿಸಿ ಒಬಿಸಿ ನಿರ್ಣಾಯಕವಾಗಿದೆ. 12 ಕ್ಷೇತ್ರಗಳಲ್ಲಿ ಒಕ್ಕಲಿಗ, ಲಿಂಗಾಯಿತ ಹಾಗೂ ಬಂಟ್ಸ್ ಕಾಂಬಿನೇಷನ್ ಗೆಲ್ಲುವ ಅವಕಾಶ ಇದೆ. ಒಕ್ಕಲಿಗರ ಬೆಲ್ಟ್ ಅಂತ ಹೇಳುವ ಮಂಡ್ಯದ ಏಳು ಕ್ಷೇತ್ರಗಳಲ್ಲೂ ಅಹಿಂದದ ಪಾತ್ರವೂ ಇದೆ. ಹಾಸನದಲ್ಲಿ ಒಂದು ಕ್ಷೇತ್ರ ಬಿಟ್ಟು ಉಳಿದ ಏಳು ಕ್ಷೇತ್ರದಲ್ಲೂ ಅಹಿಂದ ವೋಟ್ ಅನಿವಾರ್ಯವಾಗಿದೆ. ಇನ್ನು ಉತ್ತರ ಕರ್ನಾಟಕದಲ್ಲಿ ಲಿಂಗಾಯಿತರ ಪ್ರಭಾವ ಇದ್ರೂ, ಅಹಿಂದ ಮತಗಳು ಅನಿವಾರ್ಯವಾಗಿದೆ. ಈ ಎಲ್ಲಾ ಲೆಕ್ಕಾಚಾರಗಳನ್ನು ನೋಡಿಕೊಂಡು ಸಿದ್ದರಾಮಯ್ಯ ಜಾತಿ ಜನಗಣತಿ ವಿಚಾರವನ್ನು ಸರ್ಕಾರ ಸ್ಪಷ್ಟ ನಿಲುವನ್ನು ಪ್ರಕಟ ಮಾಡಬೇಕಾಗಿದೆ. ಹೀಗಾಗಿ ಇದೀಗ ಸಮೀಕ್ಷೆಯ ಮೂಲಕ ಮಾಹಿತಿ ಸಂಗ್ರಹಕ್ಕೆ ಮುಂದಾಗಿದ್ದಾರೆ.




**ಈ ದಿನದ ದರ** ಪೆಟ್ರೋಲ್: 103.50 ₹/L | ಡೀಸೆಲ್ : 90.99 ₹/L | ಬಂಗಾರ: ₹10,135/Gram24ct ₹9,290/Gram22ct | ಬೆಳ್ಳಿ: ₹101.10/Gram

# ಶಿಬಿರಗಳು ಪ್ರತಿಭೆ ಅನಾವರಣಗೊಳಿಸುವ ವೇದಿಕೆ: ಪ್ರೊ.ಮಾಯಾ ಸಾರಂಗಪಾಣಿ

• ಉದಯವಾಹಿನಿ, ಕುಣಿಗಲ್

ರಾಷ್ಟ್ರೀಯ ಸೇವಾ ಯೋಜನೆಯು ಯುವಜನರನ್ನು ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿ, ಸತ್ಪ್ರಜೆಗಳನ್ನಾಗಿ ರೂಪಿಸುತ್ತಿದೆ. ಯಶಸ್ವಿ ಶಿಬಿರಗಳು ಸುಪ್ತ ಪ್ರತಿಭೆಗಳನ್ನು ಅನಾವರಣಗೊಳಿಸುವ ವೇದಿಕೆಯಾಗಿದೆ. ಶಿಬಿರದಲ್ಲಿ ಪಡೆದ ಜ್ಞಾನ ನಿಜ ಜೀವನದಲ್ಲಿ ಅಳವಡಿಸಿಕೊಳ್ಳಿ ಎಂದು ಪ್ರಾಂಶುಪಾಲರಾದ ಪ್ರೊ. ಮಾಯಾ ಸಾರಂಗಪಾಣಿ ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ಅವರು ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಎನ್‌ಎಸ್‌ಎಸ್ ಘಟಕಗಳ ವತಿಯಿಂದ ಅಗ್ರಹಾರ ಸಿಂಗೋನಹಳ್ಳಿ ಗ್ರಾಮದಲ್ಲಿ ಏರ್ಪಡಿಸಿದ್ದ ವಾರ್ಷಿಕ ವಿಶೇಷ ಶಿಬಿರದ ಸಮಾರೋಪ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ ಶಿಬಿರಾರ್ಥಿಗಳು ಜ್ಞಾನಾರ್ಜನೆಗಾಗಿ ಹಾತೊರೆಯಬೇಕು. ಶಿಬಿರದಿಂದ ವ್ಯಕ್ತಿತ್ವ ವಿಕಸನ ಸಾಧ್ಯ. ಮನಸ್ಸಿನಲ್ಲಿರುವ ಅಗಾಧ ಶಕ್ತಿಯನ್ನರಿತು ಸಾಧನೆಯತ್ತ ಚಿತ್ತ ಹರಿಸಿ. ಮಹಾತ್ಮ ಗಾಂಧೀಜಿಯವರ ಕನಸಿನ ಕೂಸಾದ ಎನ್.ಎಸ್.ಎಸ್. ಉನ್ನತ ಶಿಕ್ಷಣ ಸಂಸ್ಥೆಗಳಲ್ಲಿ ಯುವ ಜನರನ್ನು ನನಗಲ್ಲ ನಿಮಗಾಗಿ ಎನ್ನುವ ಧ್ಯೇಯ ವಾಕ್ಯದಡಿ ಒಗ್ಗೂಡಿಸಿದೆ. ಶಿಬಿರಾರ್ಥಿಗಳು ಶಿಸ್ತಿನ ಜೀವನ, ಇತರರಿಗೆ ಮಾದರಿಯಾಗಿ, ಪರಿಸರ ಸಂರಕ್ಷಣೆಯಲ್ಲಿ ತೊಡಗಿಸಿ ಸುಸ್ಥಿರ ಸಮಾಜ ನಿರ್ಮಾಣವಾಗಲಿ ಎಂದರು.


ಉದಯವಾಹಿನಿ ಚಿತ್ರ

ಸುಸ್ಥಿರ ಸಮಾಜ ನಿರ್ಮಾಣ ವಾಗಲಿ

ಕೊಪ್ಪ ಗ್ರಾಮ ಪಂಚಾಯಿತಿಯ ಅಧ್ಯಕ್ಷರಾದ ಶಿವಕುಮಾರ್ ಮಾತನಾಡಿ ವಿದ್ಯಾರ್ಥಿಗಳು ಶೈಕ್ಷಣಿಕವಾಗಿ ಸಾಧನೆ ಮಾಡಿ ಉತ್ತಮ ಅವಕಾಶಗಳನ್ನು ತಮ್ಮದಾಗಿಸಿಕೊಳ್ಳಬೇಕೆಂದರು. ಶಿಬಿರಾಧಿಕಾರಿ ರವಿಕುಮಾರ್ ಮಾತನಾಡಿ ಪಟ್ಟಣದ ಕಾಲೇಜಿನ ವಿದ್ಯಾರ್ಥಿಗಳನ್ನು ಗ್ರಾಮಗಳಿಗೆ ಕರೆದೊಯ್ದು, ಗ್ರಾಮಸ್ಥರ ಸಹಕಾರದಿಂದ ಶಿಬಿರಗಳು ಯಶಸ್ವಿಯಾಗುತ್ತವೆಯೆಂದರು.

ಶಿಕ್ಷಕರಾದ ಗಂಗಹನುಮಯ್ಯ, ಶಿಬಿರಾಧಿಕಾರಿಗಳಾದ ಡಾ.ನಾಗಮ್ಮ, ರವಿಕುಮಾರ್ ಕೆ, ಜೆ.ಹೆಚ್. ಹನುಮಂತಯ್ಯ, ವಿಮ್ಮ ಮಾತನಾಡಿದರು. ಮ್ಯಾನೇಜರ್ ಚೆಲುವಮೂರ್ತಿ, ಮುಖಂಡರಾದ ಲಂಕೇಗೌಡ, ಹರೀಶ್, ಅರ್ಚಕರಾದ ರವಿ, ಗ್ರಾ.ಪ.ಸದಸ್ಯ ರಾಮಚಂದ್ರೇಗೌಡ, ಕಿರಣ್, ಪ್ರಾಧ್ಯಾಪಕರಾದ ರಾಮಾಂಜನಪ್ಪ, ಎಂ.ಟಿ.ಈಶ್ವರಪ್ಪ ಡಾ.ಮಂಜುಳಾ, ಡಾ.ಮಮತ, ಡಾ.ನಿರ್ಮಲಾ, ಡಾ.ರಾಧಾಕೃಷ್ಣ, ಡಾ.ಶಿವಕುಮಾರ, ಡಾ.ಧರಣೇಶ್, ಗ್ರಂಥಪಾಲಕರಾದ ಲಕ್ಷ್ಮೀಶ್ ಮತ್ತಿತರರು ಹಾಜರಿದ್ದರು. ಶಿಬಿರಾರ್ಥಿ ಬಾಲರಾಜ್ ಕಾರ್ಯಕ್ರಮ ನಿರೂಪಿಸಿ, ಅನುಷಾ ಸ್ವಾಗತಿಸಿ, ದಿವ್ಯ ವರದಿ ಮಂಡಿಸಿದರು.

> ಸಮಾರೋಪ ಭಾಷಣ ಮಾಡಿ, ಭ್ರಾತೃತ್ವ, ಸಹೋದರತೆಯ ಪ್ರತೀಕವಾದ ಎನ್.ಎಸ್.ಎಸ್. ಯುವಜನರನ್ನು ಶಿಸ್ತಿನ ಸಿಪಾಯಿಗಳನ್ನಾಗಿಸಿ, ಸೇವೆ, ಶ್ರಮದಾಯಕ ಚಟುವಟಿಕೆಗಳಲ್ಲಿ ತೊಡಗಿಸುತ್ತಿದೆ. ನಿಸ್ವಾರ್ಥ ಸೇವೆಯಿಂದ ಶಿಬಿರದಲ್ಲಿ ಪಾಲ್ಗೊಂಡು ವಿವಿಧ ಚಟುವಟಿಕೆಗಳಲ್ಲಿ ಭಾಗವಹಿಸಿ ಸರ್ವತೋಮುಖಿ ವ್ಯಕ್ತಿತ್ವ ರೂಪಿಸಿಕೊಳ್ಳಿ. ಶಿಬಿರಗಳಲ್ಲಿ ನೀಡುವ ವಿಶೇಷ ಉಪನ್ಯಾಸಗಳು ವಿದ್ಯಾರ್ಥಿಗಳ ಮನಪರಿವರ್ತನೆಯ ಅಡಿಪಾಯ. ಶಿಬಿರಗಳು ವೈಜ್ಞಾನಿಕ ಮನೋಭಾವ ಮೂಡಿಸುತ್ತವೆ. ಹಲವು ಸೃಜನಶೀಲ ವಿಷಯಗಳನ್ನು ಕಲಿಯಲು ಅವಕಾಶ ಕಲ್ಪಿಸಿವೆ. ಸದ್ಬಳಕೆ ಮಾಡಿಕೊಳ್ಳುವವರು ಜೀವನದಲ್ಲಿ ಸಾಧಕರಾಗುತ್ತಾರೆ
> - ಟಿ.ಎನ್. ನರಸಿಂಹಮೂರ್ತಿ, ಐ.ಕ್ಯು.ಎ.ಸಿ ಸಂಚಾಲಕ

# ಜನಿವಾರ ತೆಗೆಸಿದ ಪ್ರಕರಣ: ವಿಪ್ರ ಸಮಾಜದಿಂದ ಪ್ರತಿಭಟನೆ

• ಉದಯವಾಹಿನಿ, ಕೆಜಿಎಫ್


ಉದಯವಾಹಿನಿ ಚಿತ್ರ

ಸಿಇಟಿ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಪ್ರಕರಣಕ್ಕೆ ಸಂಬಂಧಿಸಿದಂತೆ ತಾಲ್ಲೂಕು ವಿಪ್ರ ಸಮಾಜದಿಂದ ಮಂಗಳವಾರ ನಗರದಲ್ಲಿ ಪ್ರತಿಭಟನೆ ನಡೆಸಲಾಯಿತು. ತಾಲ್ಲೂಕು ಆಡಳಿತ ಸೌಧಕ್ಕೆ ಮೆರವಣಿಗೆಯಲ್ಲಿ ತೆರಳಿದ ಸಮುದಾಯದ ಮುಖಂಡರು ತಪ್ಪಿತಸ್ಥರ ಮೇಲೆ ಕ್ರಮ ಕೈಗೊಳ್ಳುವಂತೆ ಘೋಷಣೆಗಳನ್ನು ಕೂಗಿದರು.

ಮುಖಂಡ ನಾರಾಯಣಮೂರ್ತಿ ಮಾತನಾಡಿ, ಜನಿವಾರವನ್ನು ಪ್ರಶ್ನಿಸುವ ಹಕ್ಕು ಯಾರಿಗೂ ಇಲ್ಲ, ದೇಶದಲ್ಲಿ ಪ್ರತಿಯೊಬ್ಬರಿಗೂ ಅವರವರ ಧರ್ಮವನ್ನು ಪಾಲಿಸುವ ಹಕ್ಕು ಇದೆ. ಹೀಗಿರುವಾಗ ಪರೀಕ್ಷೆಯಲ್ಲಿ ಅಧಿಕಾರಿಗಳು ಮತ್ತು ಭದ್ರತಾ ಸಿಬ್ಬಂದಿ ಜನಿವಾರ ತೆಗೆಸಿರುವುದು ಅಮಾನವೀಯ. ಮುಂದಿನ ದಿನಗಳಲ್ಲಿ ಇಂತಹ ಘಟನೆಗಳು ನಡೆಯದಂತೆ ಸರ್ಕಾರ ಕ್ರಮ ವಹಿಸಬೇಕು ಎಂದರು. ಸರ್ಕಾರದಿಂದ ಸವಲತ್ತುಗಳನ್ನು ಪಡೆಯುವಲ್ಲಿ ಮೊದಲಿನಿಂದಲೂ ಬ್ರಾಹ್ಮಣರು ಹಿಂದುಳಿದಿದ್ದಾರೆ. ಯಾವುದೇ ಹೋರಾಟವನ್ನು ಮಾಡಿಲ್ಲ. ಆದರೆ ನಮ್ಮ ಧಾರ್ಮಿಕ ಆಚರಣೆಗೆ ಧಕ್ಕೆ ಬಂದಿರುವುದು ಅತ್ಯಂತ ಅಘಾತ ತರುವ ವಿಷಯ. ನಾವು ಬೀದಿಗಳಿದು ಹೋರಾಟ ಮಾಡುವ ಪರಿಸ್ಥಿತಿಯನ್ನು ಸರ್ಕಾರ ತರಬಾರದು ಎಂದು ರಾಜ್ಯ ಮುಜರಾಯಿ ಅರ್ಚಕರು ಮತ್ತು ಆಗಮಿಕರ ಸಂಘದ ಸಂಚಾಲಕ ಗುರು ದೀಕ್ಷಿತ್ ಹೇಳಿದರು.

## ಮುತ್ತಪ್ಪ ರೈ ಪುತ್ರನ ಮೇಲೆ ಗುಂಡಿನ ದಾಳಿ ಪ್ರಕರಣ; ಆರೋಪಿ ರಾಕೇಶ್ ಮಲ್ಲಿ ವಿಚಾರಣೆ

# ಅಂಗರಕ್ಷಕರ ಬಂದೂಕುಗಳನ್ನು ವಶಕ್ಕೆ ಪಡೆದು ವಿಚಾರಣೆ

• ಉದಯವಾಹಿನಿ, ರಾಮನಗರ

ಭೂಗತ ಲೋಕದ ಮಾಜಿ ಡಾನ್ ಮುತ್ತಪ್ಪ ರೈ ಪುತ್ರ ರಿಕ್ಕಿ ರೈ ಮೇಲೆ ತಾಲ್ಲೂಕಿನ ಬಿಡದಿ ಬಳಿ ಏ. 18ರಂದು ರಾತ್ರಿ ನಡೆದ ಗುಂಡಿನ ದಾಳಿಗೆ ಸಂಬಂಧಿಸಿದಂತೆ, ಪ್ರಕರಣದ ಮೊದಲ ಆರೋಪಿಯಾಗಿರುವ ಕಾಂಗ್ರೆಸ್ ಮುಖಂಡ ರಾಕೇಶ್ ಮಲ್ಲಿ ಅವರನ್ನು ಮಂಗಳವಾರ ಬಿಡದಿ ಠಾಣೆಯಲ್ಲಿ ತನಿಖಾಧಿಕಾರಿಗಳು ವಿಚಾರಣೆ ನಡೆಸಿದರು. ಪೊಲೀಸರ ನೋಟಿಸ್ ಹಿನ್ನೆಲೆಯಲ್ಲಿ ರಾಕೇಶ್ ಅವರು, ತಮ್ಮ ವಕೀಲರೊಂದಿಗೆ ಮಧ್ಯಾಹ್ನ ವಿಚಾರಣೆಗೆ ಹಾಜರಾದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಆರ್. ಶ್ರೀನಿವಾಸ ಗೌಡ ನೇತೃತ್ವದಲ್ಲಿ ಡಿವೈಎಸ್ಪಿಗಳು, ಇನ್ಸ್‌ಪೆಕ್ಟರ್ ಗಳನ್ನು ಒಳಗೊಂಡ ತಂಡ ರಾಕೇಶ್ ಅವರನ್ನು ತೀವ್ರ ವಿಚಾರಣೆಗೆ ಒಳಪಡಿಸಿತು.


ಉದಯವಾಹಿನಿ ಚಿತ್ರ

### ಒಬ್ಬನ ಮೇಲೆ ಹೆಚ್ಚಿದ ಸಂಶಯ: ತೀವ್ರ ವಿಚಾರಣೆ

ಪ್ರಕರಣಕ್ಕೆ ಸಂಬಂಧಿಸಿದಂತೆ ಸತತ ಮೂರು ದಿನಗಳಿಂದ ಹಲವರನ್ನು ವಿಚಾರಣೆ ಮಾಡಲಾಗುತ್ತಿದೆ. ಇದರಲ್ಲಿ ಒಬ್ಬನ ಮೇಲೆ ಸಂಶಯ ಬಂದಿದೆ. ಆತನ ಪಾತ್ರದ ಬಗ್ಗೆ ಕೂಲಂಕಷವಾಗಿ ತನಿಖೆ ಮಾಡುತ್ತಿದ್ದೇವೆ. ದೂರಿನಲ್ಲಿ ನಾಲ್ವರ ಮೇಲೆ ಅನುಮಾನ ವ್ಯಕ್ತಪಡಿಸಲಾಗಿದೆ. ಅದರಲ್ಲಿ ಮೂವರ ಜೊತೆ ಮಾತನಾಡಿದ್ದು, ವಿಚಾರಣೆಗೆ ಬರುವುದಾಗಿ ಹೇಳಿದ್ದಾರೆ. ಎರಡನೇ ಆರೋಪಿ ಅನುರಾಧ ಸಂಪರ್ಕಕ್ಕೆ ಸಿಕ್ಕಿಲ್ಲ. ಸದ್ಯಕ್ಕೆ ಅನುಮಾನ ಇದ್ದವರನ್ನು ವಿಚಾರಣೆ ಮಾಡುತ್ತಿದ್ದೇವೆ. ಯಾವ ಕಾರಣಕ್ಕೆ ಗುಂಡಿನ ದಾಳಿ ಮಾಡಿದ್ದಾರೆ ಎಂಬುದು ಇದುವರೆಗೆ ತಿಳಿದಿಲ್ಲ. ಆದರೆ, ರಿಕ್ಕಿ ರೈ ಕಡೆಯವರು ಕೂಡ ಗಾಳಿಯಲ್ಲಿ ಗುಂಡು ಹಾರಿಸಿದ್ದಾರೆ. ಹಾಗಾಗಿ, ಅವರ ಅಂಗರಕ್ಷಕರ ಬಂದೂಕುಗಳನ್ನು ವಶಕ್ಕೆ ಪಡೆದು ವಿಚಾರಣೆ ಮಾಡುತ್ತಿದ್ದೇವೆ. ಈ ಪೈಕಿ ವಿಠಲ್ ಎಂಬಾತನಿಗೆ ಅನಾರೋಗ್ಯವಾಗಿದ್ದು ಆಸ್ಪತ್ರೆಯಲ್ಲಿದ್ದಾರೆ. ಅವರನ್ನು ಸಹ ವಿಚಾರಣೆ ಮಾಡಲಾಗುವುದು ಎಂದು ಪೊಲೀಸ್ ವರಿಷ್ಠಾಧಿಕಾರಿ ಶ್ರೀನಿವಾಸ ಗೌಡ ಮಾಧ್ಯಮದವರಿಗೆ ಪ್ರತಿಕ್ರಿಯಿಸಿದರು.

ದಕ್ಷಿಣ ಕನ್ನಡ ಜಿಲ್ಲೆಯ ಬಂಟ್ವಾಳದ ರಾಕೇಶ್ ಮಲ್ಲಿ ಒಂದು ಕಾಲದಲ್ಲಿ ಮುತ್ತಪ್ಪ ರೈ ಅವರ ಬಲಗೈ ಬಂಟನಂತಿದ್ದರು. ನಂತರ ಇಬ್ಬರ ನಡುವಿನ ಸಂಬಂಧದಲ್ಲಿ ಬಿರುಕುಂಟಾಗಿತ್ತು. ರಿಯಲ್ ಎಸ್ಟೇಟ್ ವ್ಯವಹಾರಕ್ಕೆ ಸಂಬಂಧಿಸಿದಂತೆ ರೈ ಅವರು ನನಗೆ ವಂಚನೆ ಮಾಡಿ, ಜೀವ ಬೆದರಿಕೆ ಹಾಕುತ್ತಿದ್ದಾರೆ ಎಂದು ರಾಕೇಶ್ ಬೆಂಗಳೂರು ಪೊಲೀಸರಿಗೆ ದೂರು ಕೊಟ್ಟಿದ್ದರು. ಆ ಮೇರೆಗೆ ರೈ ಮೇಲೆ ಪ್ರಕರಣ ಕೂಡ ದಾಖಲಾಗಿತ್ತು.

ರೈ ನಿಧನದ ಬಳಿಕ ಬಂಟ್ವಾಳದಲ್ಲಿ ಸಾಮಾಜಿಕ ಚಟುವಟಿಕೆಗಳಲ್ಲಿ ತೊಡಗಿಸಿಕೊಂಡಿದ್ದ ರಾಕೇಶ್, ಕಾಂಗ್ರೆಸ್ ಪಕ್ಷದಲ್ಲಿ ಗುರುತಿಸಿಕೊಂಡಿದ್ದ. 2018ರ ವಿಧಾನಸಭಾ ಚುನಾವಣೆಯಲ್ಲಿ ಕಾಂಗ್ರೆಸ್ ನಿಂದ ಕುಂದಾಪುರ ಕ್ಷೇತ್ರದಲ್ಲಿ ಸ್ಪರ್ಧಿಸಿ ಸೋತಿದ್ದರು.

# ಭೂಮಿಗೆ ಹಾನಿ ಮಾಡದೆ ಸಂರಕ್ಷಿಸುವ ಹೊಣೆ ಸರ್ವರದು

• ಉದಯವಾಹಿನಿ, ಮೈಸೂರು

ಭೂಮಿಗೆ ಹಾನಿ ಮಾಡದೆ ಸಂರಕ್ಷಿಸುವ ಹೊಣೆ ಸರ್ವರದು. ಭೂಮಿ ಮನುಷ್ಯ ಮತ್ತು ಪ್ರಾಣಿ ಪಕ್ಷಿ ಸುರಕ್ಷಿತವಾಗಿ ಬದುಕಲು ಭಗವಂತ ಸೃಷ್ಟಿಸಿರುವ ಪ್ರಕೃತಿಯ ಜೀವಂತಿಕೆಯ ಪ್ರತೀಕವಾಗಿದೆ ಎಂದು ಸಂಸ್ಕೃತಿ ಚಿಂತಕ, ಜೈ ಹಿಂದ್ ಪ್ರತಿಷ್ಠಾನದ ಅಧ್ಯಕ್ಷ ಸುರೇಶ್ ಎನ್ ಋಗ್ವೇದಿ ತಿಳಿಸಿದರು.

ಅವರು ನಗರದ ಶ್ರೀರಾಮಪುರ ಬಡಾವಣೆಯ ಎಂಟನೇ ರಸ್ತೆಯಲ್ಲಿ ಜೈ ಹಿಂದ್ ಪ್ರತಿಷ್ಠಾನ , ಋಗ್ವೇದಿ ಯೂತ್ ಕ್ಲಬ್ ಹಮ್ಮಿಕೊಂಡಿದ್ದ ವಿಶ್ವ ಭೂಮಿ ದಿನ ಕಾರ್ಯಕ್ರಮದಲ್ಲಿ ಗಿಡಕ್ಕೆ ನೀರು ಹಾಕುವ ಮೂಲಕ ಉದ್ಘಾಟನೆ ನೆರವೇರಿಸಿ ಭೂತಾಯಿ ವಿಶ್ವದ ಸರ್ವರಿಗೂ ಎಲ್ಲವನ್ನು ನೀಡಿದ್ದಾಳೆ. ಆದರೆ ಮನುಷ್ಯ ತನ್ನ ವಿಪರೀತ ಸ್ವಾರ್ಥದಿಂದ ಭೂಮಿಯನ್ನು ತನ್ನ ಇಷ್ಟಕ್ಕೆ ತಕ್ಕಹಾಗೆ ಪರಿವರ್ತಿಸಲು ಪ್ರಯತ್ನಿಸುತ್ತಿದ್ದಾನೆ. ಆದರೆ ಇದು ಸಾಧ್ಯವಿಲ್ಲದ ಮಾತು ಭೂತಾಯಿ ತನ್ನ ಒಡಲನ್ನು ಉಳಿಸಿಕೊಳ್ಳುವುದನ್ನು ತನ್ನಷ್ಟಕ್ಕೆ ತಾನೇ


ಉದಯವಾಹಿನಿ ಚಿತ್ರ

ಮಾಡಿಕೊಳ್ಳುವುದನ್ನು ಮನುಷ್ಯ ಅರ್ಥ ಮಾಡಿಕೊಳ್ಳಬೇಕು. ಪ್ಲಾಸ್ಟಿಕ್ ಬಳಕೆ , ಮರ ಗಿಡಗಳ ಕತ್ತರಿಸುವಿಕೆ ನೀರಿನ ಬಳಕೆ, ಮುಂತಾದ ಪ್ರಕ್ರಿಯೆಗಳ ಮೂಲಕ ಪರಿಸರ ನಾಶಕ್ಕೆ ಕಾರಣಕರ್ತ ನಾಗಿದ್ದಾನೆ. ಭೂಮಿಯನ್ನು ಸಂರಕ್ಷಿಸಿ ಇಡೀ ಪ್ರಪಂಚದಲ್ಲಿ ಕಳೆದ 50 ವರ್ಷಗಳಿಂದ ಭೂಮಿಯ ಚಿಂತನೆ, ಭೂಮಿಯ ಉಳಿಯುವಿಕೆಗೆ ಹಲವಾರು ಕಾರ್ಯಕ್ರಮಗಳನ್ನು ರೂಪಿಸುತ್ತಿದೆ.

> ವಿಶ್ವ ಭೂಮಿ ದಿನವನ್ನು ಪ್ರತಿನಿತ್ಯ ಭಾರತೀಯರು ವಿಶೇಷವಾಗಿ ಆಚರಿಸುತ್ತಾರೆ . ಭಾರತದಲ್ಲಿ ಪ್ರಾತಃಕಾಲ ಎದ್ದು ಭೂಮಿಗೆ ನಮಸ್ಕರಿಸಿ ತನ್ನ ಬದುಕನ್ನು ಆರಂಭಿಸುತ್ತಾನೆ. ಪ್ರತಿಯೊಬ್ಬ ವ್ಯಕ್ತಿಯು ಭೂಮಿಯ ಬಗ್ಗೆ ಶ್ರೇಷ್ಠ ಭಾವನೆಯನ್ನು ಹೊಂದಿದ್ದಾನೆ. ಆದರೆ ಬದುಕು ನಡೆಸುವ ಸಂದರ್ಭದಲ್ಲಿ ಪರಿಸರ ನಾಶದಲ್ಲೂ ತೊಡಗಿದ್ದಾನೆ. ಪರಿಸರದ ನಾಶದ ವಿಷಯದಲ್ಲಿ ಎಚ್ಚರಿಕೆ ಹೆಜ್ಜೆಯನ್ನು ಪ್ರತಿಯೊಬ್ಬರು ಇಡಬೇಕು. ವಿಶ್ವಭೂಮಿ ದಿನ ಜಾಗೃತಿಯ ದಿನವಾಗಿದೆ
> - ಕೆವಿ ಶ್ರೀಮತಿ, ಮುಖ್ಯ ಅತಿಥಿಗಳಾಗಿ ನಿವೃತ್ತ ಮುಖ್ಯ ಶಿಕ್ಷಕರು, ಜೈ ಹಿಂದ್ ಪ್ರತಿಷ್ಠಾನದ ಮಾರ್ಗದರ್ಶಕರಾದ

ಯುವಶಕ್ತಿ, ವಿದ್ಯಾರ್ಥಿ ವಿಶೇಷ ಜಾಗೃತಿಯನ್ನು ಹೊಂದಬೇಕು. ಪ್ರತಿಯೊಬ್ಬರು ಪರಿಸರ ಸಂರಕ್ಷಣೆಯಲ್ಲಿ ತೊಡಗಿದಾಗ ಮಾತ್ರ ಭವಿಷ್ಯದಲ್ಲಿ ಮಾನವ ಆರೋಗ್ಯವಾಗಿ ಬದುಕಲು ಸಾಧ್ಯ. ಪರಿಸರ ಹಾನಿಯಿಂದ ಮಾನವ ಜೊತೆಗೆ ಪ್ರಾಣಿ–ಪಕ್ಷಿಗಳ ನಾಶದಿಂದ ಅಸಾಧ್ಯವಾದ ಅನಾರೋಗ್ಯವನ್ನು ಹೊಂದಬೇಕಾಗುತ್ತದೆ. ಭವಿಷ್ಯಕ್ಕಾಗಿ ಭೂ ಸಂರಕ್ಷಣೆಯ ಪಣತೊಡೋಣ ಸಾಧ್ಯವಾದಷ್ಟು ಯೋಚನೆ ಮಾಡಿ, ಹಾನಿಯಾಗದ ಪ್ರೀತಿಯಲ್ಲಿ ಬದುಕುವ ಸಂಕಲ್ಪ ಮಾಡುವ ಪಣ ತೊಡಬೇಕು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ವನ್ಯಜೀವಿ ಛಾಯಾಗ್ರಾಹಕ ಕಾರ್ತಿಕ್, ಜೈ ಹಿಂದ್ ಪ್ರತಿಷ್ಠಾನದ ಕುಸುಮ, ಋಗ್ವೇದಿ ಯೂತ್ ಕ್ಲಬ್ ಅಧ್ಯಕ್ಷೆ ಶರಣ್ಯ ಎಸ್ ಋಗ್ವೇದಿ,.ಶ್ರಾವ್ಯ, ಲಕ್ಷ್ಮಿ , ಸುಚಿತ್ರ, ಐಶ್ವರ್ಯ, ಸುಗುಣ ಇತರರು ಉಪಸ್ಥಿತರಿದ್ದರು.

# ಹರೀಶ್‌ಗೌಡ ಪಾದಯಾತ್ರೆಯಲ್ಲಿ ಸಮಸ್ಯೆಗಳ ಸುರಿಮಳೆ

• ಉದಯವಾಹಿನಿ, ಮೈಸೂರು

ಚಾಮರಾಜ ಕ್ಷೇತ್ರದ ನಗರಪಾಲಿಕೆಯ ವಾರ್ಡ್ ನಂ.25 ರ ತಿಲಕ್ ನಗರ ವ್ಯಾಪ್ತಿಯ ಪ್ರದೇಶದಲ್ಲಿ ಶಾಸಕ ಕೆ.ಹರೀಶ್ ಗೌಡ ಪಾಲಿಕೆಯ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳೊಂದಿಗೆ ಪಾದ ಯಾತ್ರೆ ನಡೆಸಿ ನಿವಾಸಿಗಳ ಸಮಸ್ಯೆ ಆಲಿಸಿದರು. ಪಾದ ಯಾತ್ರೆಯ ವೇಳೆ ಶಾಸಕರಿಗೆ ಮನವಿ, ದೂರುಗಳ ಮಹಾಪೂರವೇ ಹರದುಬಂತು. ಕಿರು ಮೋರಿಗಳಿಗೆ ಸ್ಲಾಬ್ ಹಾಕಿಸಲು ಹಲವು ಕ್ರಾಸ್‌ಗಳಲ್ಲಿ ಮನವಿ ಮಾಡಿದರು. ಕುಡಿಯುವ ನೀರಿನ ಸಮಸ್ಯೆ ಬಗ್ಗೆ ನಿವಾಸಿಗಳು ಶಾಸಕರ ಗಮನಕ್ಕೆ ತಂದರು ನಿಗದಿತ ಸಮಯದಲ್ಲಿ ನೀರು ಸರಬರಾಜಾಗದಿರುವುದು ಅಲ್ಪ ಅವಧಿಗೆ ನೀರನ್ನು ನಿಲ್ಲಿಸುವುದರ ಕುರಿತು ಸಮಸ್ಯೆ ಬಿಚ್ಚಿಟ್ಟಿದ್ದರಿಂದ ಈ ಬಗ್ಗೆ ಸ್ಥಳದಲ್ಲಿದ್ದ ವಾಣಿ ವಿಲಾಸ ನೀರು ಸರಬರಾಜು ಮಂಡಳಿಯ ಎಕ್ಸಿಕ್ಯೂಟಿವ್ ಇಂಜಿನಿಯರ್ ಅಶ್ವಿನ್ ಅವರನ್ನು ಪ್ರಶ್ನಿಸಿ, ವೀರನಗೆರೆ, ಸಿ.ವಿ.ರಸ್ತೆ, ಪುಲಿಕೇಶಿ ರಸ್ತೆ ಪ್ರದೇಶಗಳಲ್ಲಿ ಮೊದಲು ನೀರು ಬಿಡುವುದರಿಂದ ಈ ಪ್ರದೇಶಕ್ಕೆ ಗ್ರಾವಿಟಿ ಸಾಲುತ್ತಿಲ್ಲ ಅತಿ ಶೀಘ್ರವಾಗಿ ಹೊಸದಾಗಿ ನಿರ್ಮಾಣವಾಗಿರುವ ಓವರ್ ಹೆಡ್


ಉದಯವಾಹಿನಿ ಚಿತ್ರ

ಟ್ಯಾಂಕ್‌ನಿಂದ ನೀರು ಸರಬರಾಜು ಮಾಡುತ್ತೇವೆ ಎಂದರು. ತಾಂತ್ರಿಕ ಕಾರಣಗಳು ಏನೇ ಇದ್ದರೂ ಅದನ್ನು ಬೇಗ ಸರಿಪಡಿಸಿ ನಿವಾಸಿಗಳಿಗೆ ತೊಂದರೆಯಾಗದ ರೀತಿಯಲ್ಲಿ ಕುಡಿಯುವ ನೀರು ಪೂರೈಸಬೇಕು ಎಂದು ಸೂಚಿಸಿದರು.

ಮೈಸೂರು ಮೆಡಿಕಲ್ ಕಾಲೇಜಿಗೆ ಸೇರಿದ ಆಸ್ತಿ ಪಾಳು ಬಿದ್ದಿರುವುದು, ಬಿಡಾಡಿ ದನಗಳು ಓಡಾಡುವುದು ಹಲವೆಡೆ ದಾಳಿ ಮಾಡಿರುವುದನ್ನು ಶಾಸಕರಿಗೆ ತಿಳಿಸಲಾಗಿ ತಕ್ಷಣ ಅಧೀಕ್ಷಕ ಅಭಿಯಂತರೆ ಕೆ.ಜೆ.ಸಿಂಧು ಅವರಿಗೆ ಸೂಕ್ತ ಕ್ರಮ ಕೈಗೊಳ್ಳುವಂತೆ ಸೂಚಿಸಿದರು. ಪುಂಡರು ವೀಲಿಂಗ್ ವಾಡುವುದರ ಜತೆಗೆ ಅತಿ ವೇಗವಾಗಿ ತೆರಳುವುದು, ರಸ್ತೆಯಲ್ಲಿ ಕಿರಿಕಿರಿ ಮಾಡುವ ವಿಚಾರವನ್ನು ಹಲವರು ಪ್ರಸ್ತಾಪಿಸಿದರು ಸ್ಥಳದಲ್ಲೇ ಇದ್ದ ಮಂಡಿ ಠಾಣೆ ಇನ್ಸ್‌ಪೆಕ್ಟರ್ ರಂಗಸ್ವಾಮಿ ಅವರಿಗೆ ಗಸ್ತು ಹೆಚ್ಚಿಸಿ ಯಾವುದೇ ರೀತಿಯ ಅಹಿತಕರ ಘಟನೆಗಳು ನಡೆಯದಂತೆ ಮುನ್ನೆಚ್ಚರಿಕೆ ವಹಿಸಲು ಸೂಚಿಸಿದರು.

ಕಿವುಡ ಮತ್ತು ಮೂಗ ಮಕ್ಕಳ ಶಾಲೆಯ ಕಾಂಪೌಂಡ್ ಒಡೆದಿದ್ದು ಅದನ್ನು ಸಾಧ್ಯವಾದಷ್ಟು ಬೇಗ ನಿರ್ಮಾಣ ಮಾಡಲು ಸೂಚಿಸಿದರು, ಶಾಲೆಯ ಹಿಂಭಾಗದ ರಸ್ತೆಯಲ್ಲಿ ವಿದ್ಯುತ್ ತಂತಿ ಮರಕ್ಕೆ ತಾಗಿರುವುದು, ಮನೆ ಕಟ್ಟಲು ಸಹಾಯ ಧನ ಕೋರಿ, ಆಟೋ ನಿಲ್ದಾಣಕ್ಕೆ ಶೆಲ್ಟರ್ ನಿರ್ವಾಣ ವಾಡಲು ಮನವಿಗಳು ಬಂದವು. ಇ.ಡಿ .ಆಸ್ಪತ್ರೆಗೆ ಸೇರಿದ ಜಾಗ ಪಾಳು ಬಿದ್ದಿದ್ದು ದಾಖಲೆಗಳನ್ನು ಪರಿಶೀಲಿಸಿ ಸಾರ್ವಜನಿಕರಿಗೆ ಉಪಯೋಗ ಆಗುವ ಹಾಗೆ ಏನಾದರೂ ಮಾಡುತ್ತೇವೆ ಎಂದು ಶಾಸಕರು ತಿಳಿಸಿದರು ಸಾಡೆ ಚರ್ಚ್ ಪಕ್ಕ ಇರುವ ಸರ್ಕಾರಿ ಶಾಲೆ ಸಂಪೂರ್ಣವಾಗಿ ಬೀಳುವ ಸ್ಥಿತಿಯಲಿದ್ದು ಅದರ ಪೂರ್ಣ ವಿಚಾರ ತಿಳಿದು ಸಮಸ್ಯೆ ಬಗೆಹರಿಸುವಂತೆ ಪಾಲಿಕೆಯ ಸಹಾಯಕ ಆಯುಕ್ತತೆ ಪ್ರತಿಭಾ ಅವರಿಗೆ ತಿಳಿಸಿದರು.

# ಲಿಂಕ್ ಕೆನಾಲ್ ಕಾಮಗಾರಿಗೆ ಗ್ರಾಮಸ್ಥರ ವಿರೋಧ

• ಉದಯವಾಹಿನಿ, ಗುಬ್ಬಿ

ತಾಲ್ಲೂಕಿನ ಕಡಬಾ ಹೋಬಳಿಯ ಗಂಗಸಂದ್ರ, ಕಾಡಶೆಟ್ಟಿಹಳ್ಳಿ ಗ್ರಾಮಗಳ ಮಧ್ಯೆ ಎಕ್ಸ್‌ಪ್ರೆಸ್ ಲಿಂಕ್ ಕೆನಾಲ್ ಕಾಮಗಾರಿಗೆ ಅಧಿಕಾರಿಗಳು, ಗುತ್ತಿಗೆದಾರರು ಮಂಗಳವಾರ ಮುಂದಾದರು. ಗ್ರಾಮಸ್ಥರು ಪ್ರತಿಭಟಿಸಿ ಕಾಮಗಾರಿ ತಡೆದರು.ಯಾವುದೇ ಕಾಮಗಾರಿ ಮಾಡುವುದಿಲ್ಲ, ಕೇವಲ ಸರ್ವೆ ಮಾಡುತ್ತೇವೆ ಎಂದು ಅಧಿಕಾರಿಗಳು ಸಮಜಾಯಿಸಿ ನೀಡಿದರು. ಆದರೆ ತಾಲ್ಲೂಕು ಕಂದಾಯ ಇಲಾಖೆ, ಸರ್ವೆ ಇಲಾಖೆ ಅಧಿಕಾರಿಗಳು ಇಲ್ಲದಿರುವ ಬಗ್ಗೆ ಗ್ರಾಮಸ್ಥರು ಆಕ್ಷೇಪ ವ್ಯಕ್ತಪಡಿಸಿದರು.

ಹೊಸದಾಗಿ ರೈತರ ಜಮೀನುಗಳಲ್ಲಿ ನಾಲೆ ತೆಗೆಯದೆ ಪ್ರಸ್ತುತ ಇರುವ ಹೇಮಾವತಿ ಉಪನಾಲೆಯ ಕೆಳಭಾಗದಲ್ಲಿ ಪೈಪ್ ಹಾಕಿ ಮೇಲ್ಭಾಗದಲ್ಲಿ ಮಾಮೂಲಿನಂತೆ ನೀರು ಹರಿಯುವಂತೆ ಮಾಡುತ್ತೇವೆ. ಇದಕ್ಕೆ ಯಾರನ್ನು ಕೇಳುವ ಅಗತ್ಯವಿಲ್ಲ ಎಂದು ಅಧಿಕಾರಿಗಳು ಹೇಳಿದಾಗ ಗ್ರಾಮಸ್ಥರು ಸಿಟ್ಟಾದರು. ಕಾಲುವೆ ನಿರ್ಮಿಸಲು ಯಾವುದೇ ಭೂಸ್ವಾಧೀನ ಪ್ರಕ್ರಿಯೆ ನಡೆಸಿಲ್ಲ. ಯಾವುದೇ ಕ್ರಿಯಾಯೋಜನೆ ರೂಪಿಸದೆ ಅಕ್ರಮವಾಗಿ ರೈತರ ಜಮೀನುಗಳಲ್ಲಿ ಪೈಪ್ ಅಳವಡಿಸಲು ಬಿಡುವುದಿಲ್ಲ ಎಂದು ಗ್ರಾಮಸ್ಥರು ಕಿಡಿಕಾರಿದರು. ಕಾಮಗಾರಿ ವಿಚಾರ ಸರ್ಕಾರದ ಅಧಿಕಾರಿಗಳು ಹಾಗೂ ರೈತರಿಗೆ ಸಂಬಂಧಪಟ್ಟದ್ದಾಗಿದೆ. ಪೊಲೀಸರು ಯಾವುದೇ ಕಾರಣಕ್ಕೂ ಮಧ್ಯೆ ಪ್ರವೇಶಿಸಬಾರದು ಎಂದು ಗ್ರಾಮಸ್ಥರು ಆಗ್ರಹಿಸಿದರು.


ಉದಯವಾಹಿನಿ ಚಿತ್ರ

ನಿಯಮಾವಳಿಗಳನ್ನು ಅನುಸರಿಸದಿದ್ದಲ್ಲಿ ಯಾವುದೇ ಕಾರಣಕ್ಕೂ ಕಾಮಗಾರಿ ಮಾಡಲು ಬಿಡುವುದಿಲ್ಲ ಎಂದು ಗ್ರಾಮಸ್ಥರು ಪಟ್ಟು ಹಿಡಿದರು. ಗುರುವಾರ ಸಂಬಂಧಿಸಿದ ಕಂದಾಯ ಮತ್ತು ಸರ್ವೆ ಅಧಿಕಾರಿಗಳ ಜೊತೆ ಬರುವದಾಗಿ ತಿಳಿಸಿ ಅಧಿಕಾರಿಗಳು ವಾಪಸಾದರು. ತಕ್ಷಣ ಸಭೆ ನಡೆಸಿದ ಸುತ್ತಮುತ್ತಲ ಗ್ರಾಮಸ್ಥರು ನಿಯಮಾವಳಿಗಳನ್ನು ಅನುಸರಿಸದೆ ಅಕ್ರಮ, ಅವೈಜ್ಞಾನಿಕವಾಗಿ ಕೆನಾಲ್ ಕಾಮಗಾರಿಗೆ ಮುಂದಾದಲ್ಲಿ ಯಾವುದೇ ಕಾರಣಕ್ಕೂ ಬಿಡಬಾರದು ಎಂದು ನಿರ್ಣಯ ಕೈಗೊಂಡರು. ಗಂಗಸಂದ್ರ, ಕಾಡಶೆಟ್ಟಿಹಳ್ಳಿ, ಗ್ರಾಮಗಳ ಸುತ್ತಲಿನ ಗ್ರಾಮಸ್ಥರು ಹಾಜರಿದ್ದರು.

# ಸರ್ಕಾರಿ ಆಸ್ಪತ್ರೆಯಲ್ಲೇ ಹೆಚ್ಚು ಹೆರಿಗೆ

• ಉದಯವಾಹಿನಿ, ಮಡಿಕೇರಿ


ಉದಯವಾಹಿನಿ ಚಿತ್ರ

ಕೊಡಗು ಜಿಲ್ಲೆಯಲ್ಲಿ ಮಾರ್ಚ್ ತಿಂಗಳಿನಲ್ಲಿ 515 ಹೆರಿಗೆಗಳಾಗಿದ್ದು, ಅವುಗಳಲ್ಲಿ 450 ಹೆರಿಗೆಗಳು ಸರ್ಕಾರಿ ಆಸ್ಪತ್ರೆಯಲ್ಲೇ ಆಗಿವೆ. ಖಾಸಗಿ ಆಸ್ಪತ್ರೆಯಲ್ಲಿ ಕೇವಲ 65 ಹೆರಿಗೆಗಳಷ್ಟೇ ಆಗಿವೆ. ಈ ವಿಷಯವು ಇಲ್ಲಿ ಡಿಸಿ ವೆಂಕಟ್ ರಾಜಾ ಅವರು ಸೋಮವಾರ ನಡೆಸಿದ ಜಿಲ್ಲಾ ಆರೋಗ್ಯ ಅಭಿಯಾನ ಕುರಿತು ಸಭೆಯಲ್ಲಿ ಪ್ರಸ್ತಾಪವಾಯಿತು.

ಈ ಅಂಕಿ ಅಂಶಗಳನ್ನು ನೀಡಿದ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಸತೀಶ್ ಕುಮಾರ್, ಸರ್ಕಾರಿ ಆಸ್ಪತ್ರೆಗಳಲ್ಲಿ ಉತ್ತಮ ಸೌಲಭ್ಯ ಇರುವುದರಿಂದ ಸಹಜವಾಗಿಯೇ ಜನರು ಸರ್ಕಾರಿ ಆಸ್ಪತ್ರೆಗೆ ಹೆಚ್ಚು ಹೆಚ್ಚು ಬರುತ್ತಿದ್ದಾರೆ. ಆದಾಗ್ಯೂ, ಜಿಲ್ಲೆಯ ಆರೋಗ್ಯ ಕೇಂದ್ರಗಳಲ್ಲಿ ಕುಶಾಲನಗರದ ಸಮುದಾಯ ಆರೋಗ್ಯ ಕೇಂದ್ರ ಹೊರತುಪಡಿಸಿ ಉಳಿದ ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ತಜ್ಞ ವೈದ್ಯರ ಕೊರತೆ ಇದೆ. ಅದರಲ್ಲಿ ಅರಿವಳಿಕೆ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಮಕ್ಕಳ ತಜ್ಞ ವೈದ್ಯರ ಕೊರತೆ ಹೆಚ್ಚಾಗಿದೆ. ಈ ಕೊರತೆಗಳ ಮಧ್ಯೆಯೂ ಉತ್ತಮ ಸೇವೆ ನೀಡಲಾಗುತ್ತಿದೆ' ಎಂದು ಹೇಳಿದರು.

ಜಿಲ್ಲಾ ಆರ್‌ಸಿಎಚ್ ಅಧಿಕಾರಿ ಡಾ.ಮಧುಸೂದನ್ ಮಾತನಾಡಿ, ಮಾರ್ಚ್ ತಿಂಗಳಲ್ಲಿ 636 ಮಗುವಿಗೆ ಪೂರ್ಣ ಲಸಿಕೆ ನೀಡಲಾಗಿದೆ. ಇದುವರೆಗೆ 6,874 ಮಕ್ಕಳಿಗೆ ಲಸಿಕೆ ನೀಡಲಾಗಿದ್ದು, ಶೇ 95ರಷ್ಟು ಸಾಧನೆ ಮಾಡಲಾಗಿದೆ ಎಂದರು.

ಜಿಲ್ಲಾ ಸರ್ವೇಕ್ಷಣಾಧಿಕಾರಿ ಶ್ರೀನಿವಾಸ್ ಮಾತನಾಡಿ, ಡಿಸೆಂಬರ್ ಅಂತ್ಯಕ್ಕೆ 3 ಮಲೇರಿಯಾ ಪ್ರಕರಣಗಳು ಕಂಡು ಬಂದಿದ್ದು, ಎಲ್ಲರೂ ಗುಣಮುಖರಾಗಿದ್ದಾರೆ ಎಂದು ಹೇಳಿದರು. ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ಆನಂದ್ ಮಾತನಾಡಿ, ಮಾರ್ಚ್ ತಿಂಗಳಿನಲ್ಲಿ 4,501 ಮಂದಿಯನ್ನು ಎಚ್‌ಐವಿ ಪರೀಕ್ಷೆಗೆ ಒಳಪಡಿಸಲಾಗಿದೆ. ಇವರಲ್ಲಿ 862 ಗರ್ಭಿಣಿಯರಿದ್ದಾರೆ. ಇಲ್ಲಿಯವರೆಗೆ ಒಟ್ಟು 57,945 ಮಂದಿಗೆ ಪರೀಕ್ಷೆ ನಡೆಸಲಾಗಿದೆ. ಇವರಲ್ಲಿ 10,299 ಮಂದಿ ಗರ್ಭಿಣಿಯರಿಗೆ ಪರೀಕ್ಷೆ ನಡೆಸಲಾಗಿದೆ ಎಂದು ತಿಳಿಸಿದರು. ಜಿಲ್ಲಾ ಹಾಗೂ ತಾಲ್ಲೂಕು ಮಟ್ಟದ ವೈದ್ಯಾಧಿಕಾರಿಗಳು ಭಾಗವಹಿಸಿದ್ದರು.

# ಇದು ಸರ್ವಾಧಿಕಾರಿ ಧೋರಣೆ ಎಂದು ಆರೋಪ

## ಸರ್ವಾಧಿಕಾರಿ ಧೋರಣೆ ತಡೆಯಲು ಪ್ರಗತಿಪರ ಸಂಘಟನೆಗಳ ಮುಖಂಡರಿಂದ ಸಿಎಂಗೆ ಮನವಿ

• ಉದಯವಾಹಿನಿ, ಮಂಡ್ಯ

ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ಮಹೇಶ ಜೋಶಿ ಅವರ ಸರ್ವಾಧಿಕಾರಿ ಲಾಲಸೆಯನ್ನು ತಡೆಗಟ್ಟಬೇಕು, ಅಪಾಯದಲ್ಲಿರುವ ಪರಿಷತ್ತನ್ನು ರಕ್ಷಿಸಬೇಕು ಎಂದು ಜಿಲ್ಲೆಯ ವಿವಿಧ ಪ್ರಗತಿಪರ ಸಂಘಟನೆಗಳ ಮುಖಂಡರು ಸಿಎಂ ಸಿದ್ದರಾಮಯ್ಯ ಅವರಿಗೆ ಮಂಗಳವಾರ ಮನವಿ ಸಲ್ಲಿಸಿದರು. ನಾಗಮಂಗಲ ತಾಲ್ಲೂಕಿನ ದೊಡ್ಡಬಾಲ ಗ್ರಾಮದಲ್ಲಿ 39 ವರ್ಷಗಳ ಬಳಿಕ ನಡೆಯುತ್ತಿರುವ ಹುಚ್ಚಪ್ಪ ಸ್ವಾಮಿಯ, ಹದಿನಾಲ್ಕು ಕೂಟದ ದೇವರುಗಳ ಜಾತ್ರಾ ಮಹೋತ್ಸವ ಉದ್ಘಾಟಿಸಲು ಆಗಮಿಸಿದ್ದ ಸಿಎಂ ಅವರನ್ನು ಮುಖಂಡರ ನಿಯೋಗ ಭೇಟಿ ಮಾಡಿತು. 106 ವರ್ಷಗಳ ಇತಿಹಾಸವಿರುವ ಪರಿಷತ್ತಿನ ನಿಯಮ ನಿಬಂಧನೆಗಳಿಗೆ ಆರು ಬಾರಿ ಮಾತ್ರ ತಿದ್ದುಪಡಿಯಾಗಿದೆ. ಆದರೆ, ಮಹೇಶ ಜೋಶಿಯವರು ಅಧ್ಯಕ್ಷರಾದ ನಂತರ 2022ರಲ್ಲಿ ಬೈ–ಲಾಗೆ ಆಮೂಲಾಗ್ರವಾದ ಬದಲಾವಣೆಗಳನ್ನು ತಂದಿದ್ದಾರೆ. 2023ರಲ್ಲಿ 2ನೇ ಬಾರಿಗೆ ತಿದ್ದುಪಡಿ ಮಾಡಿದ್ದಾರೆ. ಕಸಾಪ ಅಧ್ಯಕ್ಷರಿಗೆ ಪರಮಾಧಿಕಾರ ನೀಡುವ ನಿಟ್ಟಿನಲ್ಲಿ 3ನೇ ಬಾರಿಗೆ ತಿದ್ದುಪಡಿಗೆ ಮುಂದಾಗಿದ್ದಾರೆ ಎಂದು ದೂರಿದ್ದಾರೆ.

> ಏಪ್ರಿಲ್ 24ರಂದು ಬೆಂಗಳೂರಿನ ಗಾಂಧಿ ಭವನದಲ್ಲಿ 'ಕಸಾಪ ಉಳಿಸಿ' ಹೆಸರಿನಲ್ಲಿ ಸಭೆ ಕರೆಯಲಾಗಿದೆ. ಸಂಬಂಧಪಟ್ಟವರು ಹೆಚ್ಚಿನ ಸಂಖ್ಯೆಯಲ್ಲಿ ಪಾಲ್ಗೊಂಡು ಪರಿಷತ್ತಿನ ರಕ್ಷಣೆಗೆ ಮುಂದಾಗಬೇಕು
> -ಪ್ರೊ.ಜಯಪ್ರಕಾಶಗೌಡ ಅಧ್ಯಕ್ಷ ಕರ್ನಾಟಕ ಸಂಘ ಮಂಡ್ಯ


ಉದಯವಾಹಿನಿ ಚಿತ್ರ

**ಸಂವಿಧಾನ ವಿರೋಧಿ ನಡೆ:** ಪ್ರಸ್ತಾಪಿತ ಬೈಲಾದಲ್ಲಿ ಪರಿಷತ್ತಿನಿಂದ ನಾಮ ನಿರ್ದೇಶನಗೊಂಡ ಸದಸ್ಯರ ಬದಲಾವಣೆ, ಅಜೀವ ಸದಸ್ಯರುಗಳ ಅಮಾನತು ಮಾಡುವ ಅಧಿಕಾರವನ್ನು ಕೇಂದ್ರ ಪರಿಷತ್ತಿನ ಇಚ್ಛೆಗೆ ಒಳಪಟ್ಟಿದ್ದು, ಆನಂದ ಸಿದ್ಧಾಂತ ಅನ್ವಯ ವಿವಿಧ ಘಟಕಗಳನ್ನು ಯಾವುದೇ ಕಾರಣ ನೀಡದೆ ಬದಲಾಯಿಸುವ ಅಧಿಕಾರ ಅಧ್ಯಕ್ಷರಿಗೆ ಇರುತ್ತದೆ. ಈ ಆನಂದ ಸಿದ್ಧಾಂತವು ಭಾರತ ಸಂವಿಧಾನವು ರಾಷ್ಟ್ರಪತಿ ಮತ್ತು ರಾಜ್ಯಪಾಲರಿಗೆ ಪ್ರತ್ಯಾಯೋಜಿಸಿರುವ ಅಧಿಕಾರ. ನೋಂದಾಯಿತ ಸಂಸ್ಥೆಯೊಂದು ಇದನ್ನು ಬಳಸಲು ಸಾಧ್ಯವಿಲ್ಲ. ಇದು ಸರ್ವಾಧಿಕಾರಿ ಧೋರಣೆ ತೋರಿಸುತ್ತದೆ ಎಂದು ಆರೋಪಿಸಿದ್ದಾರೆ.

**ಸಚಿವ ಸ್ಥಾನಮಾನ ಸರಿಯೇ?:** ಕನ್ನಡ ಪರಿಚಾರಕರಾಗಿ ಕೆಲಸ ಮಾಡಬೇಕಾದ ಮಹೇಶ ಜೋಶಿಯವರು, ಸರ್ಕಾರದವರು ಸಚಿವ ಸ್ಥಾನಮಾನ ಹುದ್ದೆ ಕೊಟ್ಟಿದ್ದಾರೆ ಎಂದು ತಮ್ಮ ಲೆಟರ್ ಹೆಡ್‌ನಲ್ಲಿ ಹಾಕಿಕೊಂಡಿದ್ದಾರೆ. ಇದು ಸರಿಯೇ ಎಂದು ಮುಖ್ಯಮಂತ್ರಿಯನ್ನು ಪ್ರಶ್ನಿಸಿದರು.

### ಹಣ ನೀಡದೆ ದ್ವೇಷ ಸಾಧನೆ

ಮಂಡ್ಯದಲ್ಲಿ ನಡೆದ 87ನೇ ಅಖಿಲ ಭಾರತ ಕನ್ನಡ ಸಾಹಿತ್ಯ ಸಮ್ಮೇಳನದ ಕಚೇರಿ ವೆಚ್ಚಗಳು ಸಭೆ-ಸಮಾರಂಭಗಳ ಊಟೋಪಚಾರ ಖರ್ಚು ಮತ್ತು ಇನ್ನಿತರ ವೆಚ್ಚಗಳಿಗಾಗಿ ಕಾರ್ಯಕಾರಿ ಸಮಿತಿಯಲ್ಲಿ ಜಿಲ್ಲಾ ಘಟಕದ ಪರಿಷತ್ತಿಗೆ ನೀಡಬೇಕಾದ 15 ಲಕ್ಷ ಮತ್ತು ಜಿಲ್ಲಾ ಮಟ್ಟದ ಪ್ರಚಾರ ರಥದ ಖರ್ಚು 10 ಲಕ್ಷ ಸೇರಿದಂತೆ ಒಟ್ಟು 25 ಲಕ್ಷದ ಬಿಲ್‌ಗಳನ್ನು ಸಲ್ಲಿಸಿದ್ದರೂ ಹಣ ಬಿಡುಗಡೆ ಮಾಡದೆ ಮಹೇಶ ಜೋಶಿಯವರು ದ್ವೇಷ ಸಾಧಿಸುತ್ತಿದ್ದಾರೆ ಎಂದು ಜಿಲ್ಲಾ ಕಸಾಪ ಸದಸ್ಯರು ದೂರಿದ್ದಾರೆ. ಸಮ್ಮೇಳನದ ಸಂಚಾಲಕರಾದ ಮೀರಾ ಶಿವಲಿಂಗಯ್ಯನವರಿಗೆ ಸಮ್ಮೇಳನ ಮುಗಿಯುವವರೆಗೆ ಸಹಕಾರ ನೀಡಿಲ್ಲ. ರಾಜ್ಯಾಧ್ಯಕ್ಷರ ಪೂರ್ವಗ್ರಹ ಪೀಡಿತ ದಬ್ಬಾಳಿಕೆಗೆ ಎಲ್ಲೆಯೇ ಇಲ್ಲದಂತಾಗಿದೆ. ಇದು ಜಿಲ್ಲೆಯ ಜನರಿಗೆ ಮಾಡಿದ ಮಹಾ ಅವಮಾನ ಎಂದು ಮನವಿ ಪತ್ರದಲ್ಲಿ ಆರೋಪಿಸಲಾಗಿದೆ.

'ಮನವಿಪತ್ರವನ್ನು ಪರಿಶೀಲಿಸಿ, ಕ್ರಮ ಕೈಗೊಳ್ಳುತ್ತೇನೆ' ಎಂದು ಸಿಎಂ ತಿಳಿಸಿದರು. ನಿಯೋಗದಲ್ಲಿ ಮೀರಾ ಶಿವಲಿಂಗಯ್ಯ, ಸುನಂದಾ ಜಯರಾಂ, ಪ್ರೊ.ಜಯಪ್ರಕಾಶಗೌಡ, ಪ್ರೊ. ಜಿ.ಟಿ.ವೀರಪ್ಪ, ಧರಣೇಂದ್ರಯ್ಯ, ವಿ.ಹರ್ಷ ಇದ್ದರು.

# ಮಿನಿ ನ್ಯೂಸ್

## ಜಿಲ್ಲಾ ಸಾಹಿತ್ಯ ಸಮ್ಮೇಳನ ಮುಂದೂಡಿಕೆ

• ಉದಯವಾಹಿನಿ, ಚಿಕ್ಕಬಳ್ಳಾಪುರ

ಪೋಪ್ ಫ್ರಾನ್ಸಿಸ್ ಅವರ ನಿಧನದ ಹಿನ್ನೆಲೆಯಲ್ಲಿ ರಾಜ್ಯದಾದ್ಯಂತ ಎರಡು ದಿನಗಳ ಕಾಲ ಶೋಕಾಚರಣೆ ಆಚರಿಸಲಾಗುತ್ತಿದೆ. ಈ ಪ್ರಯುಕ್ತ ಏ.23, 24ರಂದು ನಗರದಲ್ಲಿ ಹಮ್ಮಿಕೊಂಡಿದ್ದ ಕನ್ನಡ ಭವನ ಉದ್ಘಾಟನೆ, ಜಿಲ್ಲಾ ಕನ್ನಡ ಸಾಹಿತ್ಯ ಸಮ್ಮೇಳನವನ್ನು ಮುಂದೂಡಲಾಗಿದೆ. ಮಂಗಳವಾರ ಸಂಜೆ ಈ ಕುರಿತು ಕಸಾಪ ಪದಾಧಿಕಾರಿಗಳು, ಕನ್ನಡ ಸಂಘಟನೆಗಳ ಜೊತೆ ಸಭೆ ನಡೆಸಿದ ಜಿಲ್ಲಾಧಿಕಾರಿ ಪಿ.ಎನ್.ರವೀಂದ್ರ, ಕಾರ್ಯಕ್ರಮ ಮುಂದೂಡಿಕೆಯನ್ನು ಪ್ರಕಟಿಸಿದರು. ಈ ಕಾರ್ಯಕ್ರಮಗಳು ನಡೆಯುವ ಮುಂದಿನ ದಿನಾಂಕವನ್ನು ತಿಳಿಸಲಾಗುವುದು ಎಂದರು. ಜಿಲ್ಲಾ ಮಟ್ಟದ 10ನೇ ಕನ್ನಡ ಸಾಹಿತ್ಯ ಸಮ್ಮೇಳನ ಮತ್ತು ಕನ್ನಡ ಭವನ ಉದ್ಘಾಟನೆ ಪ್ರಯುಕ್ತ ಈಗಾಗಲೇ ಎಲ್ಲಾ ತಯಾರಿಗಳು ಸಹ ನಡೆದಿವೆ. ಆಹ್ವಾನ ಪತ್ರಿಕೆಗಳು ಹಂಚಿಕೆಯಾಗಿವೆ. ಊಟ ತಿಂಡಿ ವ್ಯವಸ್ಥೆಗೆ ತರಕಾರಿ, ಆಹಾರ ಸಾಮಗ್ರಿಗಳನ್ನೂ ತರಲಾಗಿದೆ. ಹೋಳಿಗೆಗಳು ಸಹ ಸಿದ್ಧವಾಗಿದ್ದವು.

## ರೈಲಿಗೆ ಸಿಲುಕಿ ಚಿರತೆ ಸಾವು

• ಉದಯವಾಹಿನಿ, ತುರುವೇಕೆರೆ

ತಾಲ್ಲೂಕಿನ ದಂಡಿನಶಿವರ ಹೋಬಳಿ ಅಮ್ಮಸಂದ್ರ ಸಮೀಪ ಮಂಗಳವಾರ ಮುಂಜಾನೆ ಚಿರತೆಯೊಂದು ರೈಲ್ವೆ ಹಳಿ ದಾಟುವಾಗ ರೈಲಿಗೆ ಸಿಲುಕಿ ಮೃತಪಟ್ಟಿದೆ. ಎರಡು ವರ್ಷದ ಹೆಣ್ಣು ಚಿರತೆ ಮುಂಜಾನೆ 5 ಗಂಟೆ ಸುಮಾರಿಗೆ ಮೈಸೆಂಕೋ ಫ್ಯಾಕ್ಟರಿ ಎದುರಿನ ರೈಲ್ವೆ ಹಳಿ ದಾಟುವಾಗ ಅಪಘಾತ ಸಂಭವಿಸಿದೆ. ಚಿರತೆಯ ತಲೆ ಮತ್ತು ಮುಂಗಾಲು ಕತ್ತರಿಸಿದೆ. ಬೆಳಿಗ್ಗೆ ಎಂದಿನಂತೆ ಲೈನ್‌ಮೆನ್‌ಗಳು ರೈಲ್ವೆ ಹಳಿ ಪರೀಕ್ಷಿಸುವಾಗ ಚಿರತೆ ಮೃತದೇಹ ಪತ್ತೆಯಾಗಿದೆ. ಚಿಕ್ಕನಾಯಕನಹಳ್ಳಿ ಆರ್.ಎಫ್.ಒ ಅರುಣ್ ಕುಮಾರ್, ಉಪವಲಯ ಅರಣ್ಯಾಧಿಕಾರಿ ಮಂಜುನಾಥ್, ಅರಣ್ಯ ಗಸ್ತು ಅಧಿಕಾರಿ ರೂಪೇಷ್ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲಿಸಿದ್ದಾರೆ. ಚಿರತೆ ಮೃತಪಟ್ಟ ಸ್ಥಳದಲ್ಲೇ ಪೋಸ್ಟ್ ಮಾರ್ಟ್‌ಮ್ ಮಾಡಿ, ಸುಟ್ಟು ಹಾಕಲಾಗಿದೆ ಎಂದು ಅರಣ್ಯಾಧಿಕಾರಿಗಳು ತಿಳಿಸಿದ್ದಾರೆ.

## ಚರಂಡಿಗೆ ಬಿದ್ದು ಕಾರ್ಮಿಕ ಸಾವು

• ಉದಯವಾಹಿನಿ, ಕೊಳ್ಳೇಗಾಲ

ತಾಲ್ಲೂಕಿನ ಮಧುವನಹಳ್ಳಿಯ ಮುಖ್ಯ ರಸ್ತೆಯ ಚರಂಡಿಯಲ್ಲಿ ಕೂಲಿ ಕಾರ್ಮಿಕ ಲಿಂಗರಾಜು (45) ಬಿದ್ದು ಮೃತಪಟ್ಟಿದ್ದಾರೆ. ಮೃತ ವ್ಯಕ್ತಿ ಕುಡಿತದ ಚಟಕ್ಕೆ ದಾಸನಾಗಿದ್ದ. ಕಳೆದ ಮೂರು ನಾಲ್ಕು ದಿನಗಳ ಹಿಂದೆ ಕುಡಿದ ಮತ್ತಿನಲ್ಲಿ ಚರಂಡಿಗೆ ಬಿದ್ದಿದ್ದಾನೆ. ಕೊಳಚೆ ನೀರು ಹರಿಯುತ್ತಿರುವುದರಿಂದ ಯಾರು ಗಮನಹರಿಸಿಲ್ಲ. ಚರಂಡಿ ಬಳಿ ಗಬ್ಬುನಾರುತಿತ್ತು. ಗ್ರಾಮಸ್ಥರು ಪೊಲೀಸರಿಗೆ ಮಾಹಿತಿ ನೀಡಿದರು. ಪೊಲೀಸರು ಮೃತ ದೇಹವನ್ನು ಚರಂಡಿಯಿಂದ ಮೇಲೆತ್ತಿ ನೋಡಿದಾಗ ಕೊಳೆತ ಸ್ಥಿತಿಯಲ್ಲಿತ್ತು. ಮೃತ ವ್ಯಕ್ತಿ ದೇಹದ ಕೈಯಲ್ಲಿ ಮಕ್ಕಳ ಹೆಸರು ಹಚ್ಚೆ ಹಾಕಿಸಿಕೊಂಡಿದ್ದು, ಗ್ರಾಮದ ನಿವಾಸಿ ಲಿಂಗರಾಜು ಎಂದು ಪತ್ತೆ ಹಚ್ಚಲಾಯಿತು. ನಗರದ ಸರ್ಕಾರಿ ಉಪ ವಿಭಾಗ ಆಸ್ಪತ್ರೆಯಲ್ಲಿ ಮರಣೋತ್ತರ ಪರೀಕ್ಷೆ ನಡೆಸಿದ ಬಳಿಕ ವಾರಸುದಾರರಿಗೆ ಒಪ್ಪಿಸಿದರು. ಈ ಸಂಬಂಧ ಗ್ರಾಮಾಂತರ ಠಾಣೆಯಲ್ಲಿ ದೂರು ದಾಖಲಾಗಿದೆ.

## ಭೂಮಿಯ ಆರೋಗ್ಯ ಕಾಪಾಡುವುದು ಅನಿವಾರ್ಯ: ನ್ಯಾಯಾಧೀಶ

• ಉದಯವಾಹಿನಿ,ಗುಂಡ್ಲುಪೇಟೆ

ಭೂಮಿ ಜೀವ ಸಂಕುಲ ಹೊಂದಿರುವ ಏಕೈಕ ಗ್ರಹ. ಭೂಮಿಯ ಆರೋಗ್ಯ ಕಾಪಾಡಿಕೊಳ್ಳುವುದು ಅನಿವಾರ್ಯವಾಗಿದೆ' ಎಂದು ಹಿರಿಯ ಸಿವಿಲ್ ಮತ್ತು ಜೆ.ಎಂ.ಎಫ್.ಸಿ ನ್ಯಾಯಾಧೀಶ ಬಸವರಾಜ ತಳವಾರ ಹೇಳಿದರು. ಪಟ್ಟಣದ ನ್ಯಾಯಾಲಯದ ಆವರಣದಲ್ಲಿ ತಾಲ್ಲೂಕು ಕಾನೂನು ಸೇವಾ ಸಮಿತಿ, ವಕೀಲರ ಸಂಘದ ಸಂಯುಕ್ತ ಆಶ್ರಯದಲ್ಲಿ ನಡೆದ ವಿಶ್ವ ಭೂಮಿ ದಿನ ಆಚರಣೆ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು. ಮನುಷ್ಯನ ಜ್ಞಾನ ಬೆಳೆದಂತೆಲ್ಲ ದುರಾಸೆ ಹೆಚ್ಚಿದೆ. ಮಾನವನ ಅತಿಯಾಸೆಯಿಂದ ವಾತಾವರಣ ಕಲುಷಿತವಾಗುತ್ತಿದೆ. ಏರುತ್ತಿರುವ ಜಾಗತಿಕ ತಾಪಮಾನ, ಪರಿಸರ ನಾಶದಿಂದ ಭೂಮಿ ನಿರಂತರವಾಗಿ ಹದೆಗೆಡುತ್ತಿದೆ. ಈ ಕುರಿತು ಜಾಗೃತಿ ಮೂಡಿಸಲು ವಿಶ್ವ ಭೂದಿನ ಆಚರಣೆ ಮಾಡಲಾಗುತ್ತಿದೆ ಎಂದರು.

1970ರಲ್ಲಿ ಮೊದಲ ಪ್ರಾರಂಭವಾದ ವಿಶ್ವ ಭೂದಿನ ಆಚರಣೆ ಮಂಗಳವಾರ ವಿಶ್ವದೆಲ್ಲೆಡೆ ಆಚರಿಸಲಾಗುತ್ತಿದೆ. ನಮ್ಮ ದೇಶದಲ್ಲಿ ಭೂಮಿಯ ಬಗ್ಗೆ ಪೂಜ್ಯ ಭಾವನೆ ಹೊಂದಿದ್ದು, ಮಾತೃ ಸ್ಥಾನ ನೀಡಿದ್ದೇವೆ. ಇತ್ತೀಚಿಗೆ ಕೋವಿಡ್ ಸೇರಿ ಅನೇಕ ಸಾಂಕ್ರಾಮಿಕ ರೋಗಗಳು ಜಾಗತಿಕವಾಗಿ ಮನುಷ್ಯನ ಕಾಡುತ್ತಿದೆ. ಈ ಕಾರಣದಿಂದಾಗಿ ನಮ್ಮ ಸುತ್ತಮುತ್ತಲಿನ ಮಣ್ಣು, ನೀರು, ಗಾಳಿ ಸಂರಕ್ಷಣೆ ಮಾಡಬೇಕಾಗಿದೆ. ಈ ಬಗ್ಗೆ ಸಾರ್ವಜನಿಕರಿಗೆ ಅರಿವು ಮೂಡಿಸುವುದು ನಮ್ಮೆಲ್ಲರ ಕರ್ತವ್ಯ ಎಂದರು.

## ವಕೀಲರ ಮೇಲಿನ ಹಲ್ಲೆಗೆ ಖಂಡನೆ


ಉದಯವಾಹಿನಿ ಚಿತ್ರ

• ಉದಯವಾಹಿನಿ, ಕುಶಾಲನಗರ

ಭಾರತೀಯ ವಕೀಲರ ಪರಿಷತ್ತಿನ ಮಾಜಿ ಅಧ್ಯಕ್ಷ, ವಕೀಲ ಸದಾ ಶಿವ ರೆಡ್ಡಿ ಅವರು ಕರ್ತವ್ಯನಿರತರಾಗಿದ್ದ ವೇಳೆ ಅಪರಿಚಿತರು ಹಲ್ಲೆ ನಡೆಸಿರುವ ಕೃತ್ಯವನ್ನು ಇಲ್ಲಿನ ವಕೀಲರ ಸಂಘ ಖಂಡಿಸಿದೆ. ಕುಶಾಲನಗರ ಬಾರ್ ಕೌನ್ಸಿಲ್ ಅಧ್ಯಕ್ಷ ಆರ್.ಕೆ.ನಾಗೇಂದ್ರಬಾಬು, ಪದಾಧಿಕಾರಿಗಳು ತಹಶೀಲ್ದಾರ್ ಕಿರಣ್ ಗೌರಯ್ಯ ಅವರಿಗೆ ಮನವಿ ಸಲ್ಲಿಸಿ, ಹಲ್ಲೆ ನಡೆಸಿದ ದುಷ್ಕರ್ಮಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು. ಪ್ರಜಾಪ್ರಭುತ್ವದ ಮೌಲ್ಯವನ್ನು ಎತ್ತಿ ಹಿಡಿದು, ಕಟ್ಟಕಡೆಯ ವ್ಯಕ್ತಿಗೂ ನ್ಯಾಯ ಒದಗಿಸುವ ನಿಟ್ಟಿನಲ್ಲಿ ಕರ್ತವ್ಯ ನಿರ್ವಹಿಸುವ ವಕೀಲರ ಮೇಲೆ ಈ ರೀತಿ ಅಮಾನುಷ ಹಲ್ಲೆ ನಡೆಸಿರುವುದು ಖಂಡನೀಯ.

ಇಂತಹ ಸಮಾಜಘಾತುಕ ಶಕ್ತಿಗಳನ್ನು ಕಾನೂನು ಚೌಕಟ್ಟಿನಲ್ಲಿ ಬಂಧಿಸಿ, ಕ್ರಮ ಕೈಗೊಳ್ಳದಿದ್ದರೆ ಪ್ರಜಾಪ್ರಭುತ್ವ ಅರಾಜಕತೆಯ ಕಡೆಗೆ ಸಾಗುತ್ತದೆ. ಆದ್ದರಿಂದ ರಾಜ್ಯ ವಕೀಲರ ಪರಿಷತ್ತಿನ ನಿರ್ಣಯದಂತೆ ಕುಶಾಲನಗರ ವಕೀಲರ ಸಂಘವು ಘಟನೆ ಖಂಡಿಸಿ, ಮೌನ ಪ್ರತಿಭಟನೆ ಮೂಲಕ ಮೆರವಣಿಗೆ ನಡೆಸಿ ತಹಶೀಲ್ದಾರ್ ಕಿರಣ್ ಗೌರಯ್ಯ ಅವರ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಲಾಗಿದೆ ಎಂದು ನಾಗೇಂದ್ರ ಬಾಬು ತಿಳಿಸಿದರು. ಕಾರ್ಯದರ್ಶಿ ಕೆ.ಬಿ.ಮೋಹನ್ ಇದ್ದರು.

# ಉದಯ ವಾಹಿನಿ

ಪ್ರಾದೇಶಿಕ

ಬುಧವಾರ 23 ಏಪ್ರಿಲ್ 2025

05

ಮಿನಿ ನ್ಯೂಸ್


## ಇತರರನ್ನು ನಿಂದಿಸುವ ವ್ಯಕ್ತಿ ರಾಜಕಾರಣದಲ್ಲಿ ಎಂದೂ ದೊಡ್ಡವನಾಗಲ್ಲ: ಸಂಸದ ಜಿಗಜಿಣಗಿ

• ಉದಯವಾಹಿನಿ ವಿಜಯಪುರ

ಇತರರನ್ನು ನಿಂದಿಸುವ ವ್ಯಕ್ತಿ ರಾಜಕಾರಣದಲ್ಲಿ ಎಂದೂ ದೊಡ್ಡವನಾಗಲ್ಲ. ನಿಂದಕರು ಇರುವಾಗಲೇ ಇತ್ತೀಚೆಗೆ ಜಿಲ್ಲೆಯಲ್ಲಿ ನಡೆದ ಬಿಜೆಪಿ ಜನಾಕ್ರೋಶ ಯಾತ್ರೆ ಅತ್ಯಂತ ಯಶಸ್ವಿಯಾಗಿ ನಡೆದಿದೆ. ಇದು ನಮ್ಮ ಪಕ್ಷದಲ್ಲಿ ವ್ಯಕ್ತಿಗಿಂತ ಪಕ್ಷವೇ ಮುಖ್ಯ ಎಂಬ ಸಂದೇಶವನ್ನು ಸಾರಿದೆ ಎಂದು ಸಂಸದ ರಮೇಶ ಜಿಗಜಿಣಗಿ ಅವರು ಹೇಳಿದ್ದಾರೆ.

ನಾವಿಲ್ಲವೆಂದರೆ ಬಿಜೆಪಿ ಇಲ್ಲ ಎಂದು ತಮ್ಮ ಬೆನ್ನು ತಾವೇ ಚಪ್ಪರಿಸಿಕೊಳ್ಳುತ್ತಿರುವವರ ಬಗ್ಗೆಯೂ ರಾಜ್ಯಾದ್ಯಂತ ಸಂದೇಶ ರವಾನೆಯಾಗಿದೆ. ನಾವು ಕೇವಲ ಯತ್ನಾಳ್ ವಿರುದ್ಧ ಮಾತ್ರವಲ್ಲದೆ ಕಾಂಗ್ರೆಸ್ ವಿರುದ್ಧವೂ ಬಲ ಪ್ರದರ್ಶನ ಮಾಡಿದ್ದೇವೆ.

ನಾವು ಯಾರಿಗೂ ಹೆದರಲ್ಲ. ನಮ್ಮ ಪಕ್ಷದಲ್ಲಿ ವ್ಯಕ್ತಿ ಮುಖ್ಯವಲ್ಲ. ಪಕ್ಷವೇ ಮುಖ್ಯ ಎಂದರು. ಎಲ್ಲರನ್ನೂ ಒಂದಾಗಿ ತೆಗೆದುಕೊಂಡು ಹೋಗುವುದು ಮುಖ್ಯ. ಇದನ್ನು ಅರ್ಥ ಮಾಡಿಕೊಳ್ಳಬೇಕು ಎಂದು



ಉದಯವಾಹಿನಿ ಚಿತ್ರ

ಯತ್ನಾಳಗೆ ಸೂಚ್ಯವಾಗಿ ಹೇಳಿದರು.

ರಾಜ್ಯ ಸರ್ಕಾರದ ವಿರುದ್ಧ ಆಯೋಜಿಸಿದ್ದ ಜನಾಕ್ರೋಶ ಯಾತ್ರೆಗೆ ನಿರೀಕ್ಷೆಗೂ ಮೀರಿದ ಸ್ಪಂದನೆ ದೊರಕಿದೆ. ಪಕ್ಷದ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಅವರಿಗೆ ಪಕ್ಷದ ಕಾರ್ಯಕರ್ತರು ಮನ್ನಣೆ ನೀಡಿ, ದೊಡ್ಡ ಸಂಖ್ಯೆಯಲ್ಲಿ ಯಾತ್ರೆಯಲ್ಲಿ ಭಾಗವಹಿಸಿದ್ದರು. ಈ ಮೂಲಕ ಪಕ್ಷಕ್ಕೆ ಗೌರವ ತಂದಕೊಟ್ಟ ಕಾರ್ಯಕರ್ತರಿಗೆ ಅಭಿನಂದನೆ ಸಲ್ಲಿಸುತ್ತೇವೆ ಎಂದರು. ರಾಜ್ಯ ಸರ್ಕಾರ ಸಂಪೂರ್ಣ ವಿಫಲವಾಗಿದೆ. ರಸ್ತೆ ಸೇರಿ ಯಾವುದೇ ಅಭಿವೃದ್ಧಿ ಕಾರ್ಯಗಳು ಆಗುತ್ತಿಲ್ಲ. ಇಂತಹ ಹೀನಾಯಮಾನ ಸರ್ಕಾರವನ್ನೇ ನಾನು ನೋಡಿಲ್ಲ. ಯಾವುದೇ ಕಾರ್ಯಕ್ರಮಗಳಿಗೆ ಶಂಕುಸ್ಥಾಪನೆ ಸಹ ಮಾಡಲಾಗುತ್ತಿಲ್ಲ.

**ನಮ್ಮ ಪಕ್ಷದಲ್ಲಿ ವ್ಯಕ್ತಿ ಮುಖ್ಯವಲ್ಲ**

ಹೀಗಾಗಿ ಮುಖ್ಯಮಂತ್ರಿ ಸಿದ್ದರಾಮಯ್ಯನವರಿಂದ ಅಭಿವೃದ್ಧಿ ಸಾಧ್ಯವಾಗಲ್ಲ ಎಂದು ಅಸಮಾಧಾನ ವ್ಯಕ್ತಪಡಿಸಿದರು. ಶಾಸಕರಿಗೆ ಪ್ರತಿ ಕ್ಷೇತ್ರಕ್ಕೆ ಎಂಟು ಕೋಟಿ ಅನುದಾನವನ್ನು ಕೇಂದ್ರ ಸರ್ಕಾರ ಬಿಡುಗಡೆ ಮಾಡಿದೆ. ಅದೇ ಅನುದಾನದಲ್ಲಿ ಕೆಲವು ರಸ್ತೆ ಕಾಮಗಾರಿಗಳು ನಡೆಯುತ್ತಿವೆ ಹೊರತು, ಉಳಿದಂತೆ ಯಾವುದೇ ಕಾರ್ಯಗಳು ಆಗುತ್ತಿಲ್ಲ ಎಂದರು. ಇದೇ ವೇಳೆ, ಸಿಇಟಿ ಪರೀಕ್ಷೆ ವೇಳೆ ವಿದ್ಯಾರ್ಥಿಗಳ ಜನಿವಾರ ತೆಗೆಸಿದ ಘಟನೆಯನ್ನು ನಾನು ಖಂಡಿಸುತ್ತೇನೆ. ಜನಿವಾರ, ಉಡದಾರ ತೆಗೆದು ಬರಲು ಮೂರ್ಖರಾದರೂ ಹೇಳುತ್ತಾರಾ ಎಂದು ಕಿಡಿದಾರಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಗುರುಲಿಂಗಪ್ಪ ಅಂಗಡಿ ಮಾತನಾಡಿ, ವಿದ್ಯಾರ್ಥಿಗಳ ಜನಿವಾರ ತೆಗೆಸಿದ್ದು ಸಿಎಂ ಸಿದ್ದರಾಮಯ್ಯನವರ ಹಿಂದೂ ವಿರೋಧಿ ಕ್ರಮದ ಭಾಗವಾಗಿದೆ. ಹಿಂದೂ ವಿರೋಧಿಯಾಗಿ ನಡೆದುಕೊಂಡರೆ ಅಧಿಕಾರಿಗಳು ತಮಗೆ ಬಡ್ತಿ ಸಿಗುತ್ತದೆ ಎಂದು ಇಂತಹ ಕೃತ್ಯ ಎಸಗುತ್ತಿದ್ದಾರೆ. ಕಾಂಗ್ರೆಸ್ ಶಾಸಕರು, ಸಚಿವರು ಅಧಿಕಾರಿಗಳನ್ನು ದೂರುವ ಬದಲಿಗೆ ಕಾಂಗ್ರೆಸ್‌ನಿಂದಲೇ ದೂರ ಉಳಿಯುವ ಸಂದೇಶ ನೀಡಬೇಕು ಎಂದರು.

## ಸದಾಶಿವ ರೆಡ್ಡಿ ಮೇಲಿನಹಲ್ಲೆ ಖಂಡಿಸಿ ಕಲಾಪದಿಂದ ದೂರ ಉಳಿದ ವಕೀಲರು



ಉದಯವಾಹಿನಿ ಚಿತ್ರ

• ಉದಯವಾಹಿನಿ ಭಾಲ್ಕಿ

ರಾಜ್ಯ ವಕೀಲರ ಪರಿಷತ್ತಿನ ಸದಸ್ಯ, ಹಿರಿಯ ವಕೀಲ ವೈ. ಆರ್. ಸದಾಶಿವ ರೆಡ್ಡಿ ಅವರ ಮೇಲೆ ಅಪರಿಚಿತರು ನಡೆಸಿರುವ ಭೀಕರ ಹಲ್ಲೆಯನ್ನು ಖಂಡಿಸಿ ಸೋಮವಾರ ಪಟ್ಟಣದಲ್ಲಿ ವಕೀಲರ ಸಂಘದ ಪದಾಧಿಕಾರಿಗಳು ಕಲಾಪದಿಂದ ದೂರ ಉಳಿದರು. ಈ ಸಂಬಂಧ ರಾಜ್ಯಪಾಲರಿಗೆ ಬರೆದ ಮನವಿ ಪತ್ರವನ್ನು ತಹಶೀಲ್ದಾರ್ ಮಲ್ಲಿಕಾರ್ಜುನ್ ವಡ್ಡನಕೇರಿ ಅವರಿಗೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಪ್ರಮುಖರು, ಈಚೆಗೆ ವೈ.ಆರ್. ಸದಾಶಿವ ರೆಡ್ಡಿ ಅವರ ಕಚೇರಿಯಲ್ಲಿ ಅಪರಿಚಿತರಿಂದ ಅವರ ಮೇಲೆ ನಡೆದಿರುವ ಭೀಕರ ಹಲ್ಲೆ ಅಮಾನವೀಯ ಘಟನೆಯಾಗಿದ್ದು, ನಮ್ಮ ಸಂಘ ಈ ಘಟನೆಯನ್ನು ತೀವ್ರವಾಗಿ ಖಂಡಿಸುತ್ತದೆ ಎಂದರು.

ಹಲ್ಲೆಗೈದ ದುರುಳರ ಹಿಂದಿರುವ ಕಾಣದ ಕೈಗಳನ್ನು ಕೂಡಲೇ ಪತ್ತೆ ಹಚ್ಚಬೇಕು. ಈ ಘಟನೆ ಸಂಬಂಧಪಟ್ಟ ನಿಷ್ಪಕ್ಷಪಾತವಾಗಿ ತನಿಖೆ ನಡೆಸಿ ಕೂಡಲೇ ಆರೋಪಿಗಳನ್ನು ಬಂಧಿಸಿ ತ್ವರಿತವಾಗಿ ನ್ಯಾಯ ಒದಗಿಸಬೇಕು ಎಂದು ರಾಜ್ಯಪಾಲರಿಗೆ ಬರೆದ ಮನವಿ ಪತ್ರದಲ್ಲಿ ಆಗ್ರಹಿಸಿದ್ದಾರೆ.


### ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಜಿಲ್ಲಾ ಮಟ್ಟದ ಕಾರ್ಯಪಡೆ ಮತ್ತು ಕಾರ್ಯಕಾರಿ ಸಮಿತಿ ಸಭೆ

## ಬಾಲ ಕಾರ್ಮಿಕರ ಪತ್ತೆ ಕಾರ್ಯಾಚರಣೆ ದಾಳಿ ಹೆಚ್ಚಿಸಿ: ಟಿ.ವೆಂಕಟೇಶ್

• ಉದಯವಾಹಿನಿ ಚಿತ್ರದುರ್ಗ

ಬಾಲ ಕಾರ್ಮಿಕರ ಪತ್ತೆಗೆ ಜಿಲ್ಲೆಯಾದ್ಯಂತ ಹೆಚ್ಚಿನ ಪ್ರಮಾಣದಲ್ಲಿ ದಾಳಿ ಕಾರ್ಯಾಚರಣೆ ನಡೆಸುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಅಧಿಕಾರಿಗಳಿಗೆ ಸೂಚಿಸಿದರು. ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಜಿಲ್ಲಾ ಮಟ್ಟದ ಕಾರ್ಯಪಡೆ ಮತ್ತು ಕಾರ್ಯಕಾರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಬಾಲ ಹಾಗೂ ಕಿಶೋರ ಕಾರ್ಮಿಕ ಪದ್ಧತಿ ನಿರ್ಮೂಲನೆ ಸಂಬಂಧ ತಾಲ್ಲೂಕು ಮಟ್ಟದಲ್ಲಿ ಕಾರ್ಯಪಡೆಗಳನ್ನು ರಚಿಸಿ ಕಾರ್ಮಿಕ ಇಲಾಖೆ ಅಧಿಕಾರಿಗಳು ತಾ.ಪಂ. ಇಒ, ಬಿಇಒ, ಸಿಡಿಪಿಒ ಹಾಗೂ ಪೊಲೀಸರೊಂದಿಗೆ ಜಂಟಿ ಕಾರ್ಯಾಚರಣೆ ಕೈಗೊಳ್ಳಬೇಕು. ಗಣಿ, ಕಲ್ಲು ಕ್ವಾರಿ, ಪೌಲ್ಟ್ರೀಫಾರಂ, ಇಟ್ಟಿಗೆಭಟ್ಟಿ, ಹೋಟೆಲ್, ಗ್ಯಾರೇಜುಗಳಲ್ಲಿ ಹಠಾತ್ ದಾಳಿ ನಡೆಸಿ ತಪಾಸಣೆ ಕೈಗೊಳ್ಳಬೇಕು. ಶಾಲೆಯಿಂದ ಹೊರಗುಳಿದ ಮಕ್ಕಳು ಬಾಲಕಾರ್ಮಿಕರಾಗಿ ಕೆಲಸ ಮಾಡುವ ಸಂಭವ ಹೆಚ್ಚು ಇರುತ್ತದೆ. ಇವರನ್ನು ರಕ್ಷಿಸಿ ಪುರ್ನವಸತಿ ಕಲ್ಪಿಸಬೇಕು, ಜೊತೆಗೆ ಶಿಕ್ಷಣದ ಮುಖ್ಯ ವಾಹಿನಿಗೆ ತರುವ ಕೆಲಸ ಆಗಬೇಕು. ಗಣಿ, ಕಲ್ಲು ಕ್ವಾರಿ ಕೆಲಸದಲ್ಲಿ ಬಾಲ ಕಾರ್ಮಿಕರು ಕಂಡು ಬಂದರೆ ಸಂಬಂದಪಟ್ಟ



ಉದಯವಾಹಿನಿ ಚಿತ್ರ

**ಹಠಾತ್ ದಾಳಿ ನಡೆಸಿ ತಪಾಸಣೆ**

ಗಣಿಗಾರಿಕೆ ಲೈಸೈನ್ಸ್ ರದ್ದು ಮಾಡಿ, ಪ್ರಕರಣ ದಾಖಲಿಸುವಂತೆ ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕರಿಗೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ನಿರ್ದೇಶನ ನೀಡಿದರು.

ಬಾಲ ಕಾರ್ಮಿಕ ನಿಷೇಧ ಕಾಯ್ದೆ ಕುರಿತು ಗ್ರಾಮೀಣ ಪ್ರದೇಶದಲ್ಲಿ ಹೆಚ್ಚಿನ ಮಾಹಿತಿ ಶಿಕ್ಷಣ ಸಂವಹನ ಕಾರ್ಯಕ್ರಮಗಳನ್ನು ನಡೆಸಬೇಕು. ಬೀದಿ ನಾಟಕಗಳ ಪ್ರದರ್ಶನದ ವೇಳೆ ಗ್ರಾಮೀಣಾಭಿವೃದ್ಧಿ ಇಲಾಖೆ ಅಧಿಕಾರಿಗಳನ್ನು ಕಾರ್ಯಕ್ರಮಕ್ಕೆ ಆಹ್ವಾನಿಸಿ. ಗ್ರಾಮ ಪಂಚಾಯಿತಿಗಳಲ್ಲಿ ಬಾಲ ಕಾರ್ಮಿಕ ನಿಷೇಧ ಕಾಯ್ದೆಯ ಸೂಚನಾ ಫಲಕಗಳನ್ನು ಅಳವಡಿಸುವಂತೆ ಜಿ.ಪಂ.ಸಿಇಒ ಎಸ್.ಜೆ.ಸೋಮಶೇಖರ್ ಹೇಳಿದರು.

ಜಿಲ್ಲಾ ಕಾರ್ಮಿಕಾಧಿಕಾರಿ ಅನಿಲ್ ಬಾಲಚಂದ್ರ ಭಗತಿ ಮಾತನಾಡಿ, 2024-25 ಸಾಲಿನಲ್ಲಿ ಒಟ್ಟು 1045 ಬಾಲ ಕಾರ್ಮಿಕ ಪತ್ತೆ ಕಾರ್ಯಾಚರಣೆ ದಾಳಿಗಳನ್ನು ನಡೆಸಲಾಗಿದೆ. 6 ಮಕ್ಕಳನ್ನು ರಕ್ಷಿಸಿ ಪುರ್ನವಸತಿ ಕಲ್ಪಿಸಲಾಗಿದೆ, ನಾಲ್ವರು ಮಾಲೀಕರ ವಿರುದ್ಧ ಮೊಕದ್ದಮೆ ಹೂಡಲಾಗಿದೆ ಎಂದು ಮಾಹಿತಿ ನೀಡಿದರು. ಸಭೆಯಲ್ಲಿ ಜಿಲ್ಲಾ ಬಾಲಕಾರ್ಮಿಕ ಯೋಜನಾ ಸೊಸೈಟಿಯ ಬೈಲಾ ತಿದ್ದುಪಡಿ ಮಾಡಿ, ಸಂಚಿತ ನಿಧಿ ಬ್ಯಾಂಕ್ ಖಾತೆಯ ಹೆಸರನ್ನು ಬದಲಿಸುವ ಕುರಿತು ತೀರ್ಮಾನ ಕೈಗೊಳ್ಳಲಾಯಿತು.

ಸಭೆಯಲ್ಲಿ ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಎಸ್.ಜೆ.ಸೋಮಶೇಖರ್, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕ ಆನಂದ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಧಿಕಾರಿ ಡಾ.ಜಿ.ಪಿ.ರೇಣುಪ್ರಾದ್, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಉಪನಿರ್ದೇಶಕ ಮಂಜುನಾಥ, ಗಣಿ ಮತ್ತು ಭೂವಿಜ್ಞಾನ ಇಲಾಖೆ ಉಪನಿರ್ದೇಶಕ ಮಹೇಶ್ ಕುಮಾರ್, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಮಹಿಳಾ ಮತ್ತು ಮಕ್ಕಳ ಅಧಿಕಾರಿ ಪವಿತ್ರಾ, ಬಾಲ ಕಾರ್ಮಿಕ ಯೋಜನಾ ಸೊಸೈಟಿ ಯೋಜನಾ ನಿರ್ದೇಶಕ ಪಿ.ಸತೀಶ್ ಕುಮಾರ್ ಸೇರಿದಂತೆ ಕಾರ್ಮಿಕ ನಿರೀಕ್ಷಕರು ಉಪಸ್ಥಿತರಿದ್ದರು.

> **ಈಗಾಗಲೇ ವಿವಿಧ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಹೊರಗುತ್ತಿಗೆ ನೌಕರರ ಮಾಹಿತಿ ಸಂಗ್ರಹಿಸಲಾಗುತ್ತಿದೆ. ಈ ನೌಕರರ ಸಂಬಳದ ಖಾತೆಯನ್ನು ಡಿಸಿಸಿ ಬ್ಯಾಂಕ್‌ಗಳಲ್ಲಿ ತೆರೆಯಲಾಗುವುದು. ಸಾಲ ಸೌಲಭ್ಯ ಒದಗಿಸಲು ಸಂಘದ ಸದಸ್ಯರ ನೊಂದಣಿ ಪ್ರಕ್ರಿಯೆಯನ್ನು ಸಹ ಆರಂಭಿಸಲಾಗಿದೆ**
> **-ಅನಿಲ್ ಬಾಲಚಂದ್ರ, ಭಗತಿ**
> **ಜಿಲ್ಲಾ ಕಾರ್ಮಿಕಾಧಿಕಾರಿ**

### ಜಿಲ್ಲಾ ಕಾರ್ಮಿಕ ಸೇವೆಗಳ ವಿವಿದೋದ್ದೇಶ ಸಹಕಾರಿ ಸಂಘ ಸ್ಥಾಪನೆ

**ವಿವಿಧ ಇಲಾಖೆಗಳಿಗೆ ಹೊರ ಗುತ್ತಿಗೆ ಕಾರ್ಮಿಕರ ಸೇವೆ ಒದಗಿಸಲು ಬೀದರ್ ಜಿಲ್ಲಾ ಮಾದರಿಯಂತೆ ಜಿಲ್ಲಾ ಕಾರ್ಮಿಕ ಸೇವೆಗಳ ವಿವಿದೋದ್ದೇಶ ಸಹಕಾರಿ ಸಂಘ ಸ್ಥಾಪನೆ ಮಾಡುವಂತೆ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಸೂಚಿಸಿದರು. ಹೊರಗುತ್ತಿಗೆ ಕಾರ್ಮಿಕರನ್ನು ಒದಗಿಸುವ ಕಂಪನಿಗಳು ಇಎಸ್‌ಐ, ಪಿ.ಎಫ್. ಸೇರಿದಂತೆ ವಿವಿಧ ಸೌಲಭ್ಯಗಳನ್ನು ನೀಡುವುದಿಲ್ಲ ಎಂಬ ದೂರುಗಳು ವ್ಯಾಪಕವಾಗಿವೆ. ಇದರ ಬದಲಾಗಿ ಕಾರ್ಮಿಕ ಇಲಾಖೆಯ ವಿವಿದೋದ್ದೇಶ ಸಹಕಾರಿ ಸಂಘ ಸ್ಥಾಪಿಸಿ, ಈ ಸೊಸೈಟಿಯಿಂದ ಮಾನವ ಸಂಪನ್ಮೂಲವನ್ನು ವಿವಿಧ ಇಲಾಖೆಗಳಿಗೆ ಒದಗಿಸಬಹುದು. ಜಿಲ್ಲೆಯಲ್ಲಿ ಸುಮಾರು 800 ಹೆಚ್ಚು ಹೊರಗುತ್ತಿಗೆ ನೌಕರರು ವಿವಿಧ ಇಲಾಖೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಸರ್ಕಾರದ ಸೂಚನೆಯಂತೆ ಪರಿಶಿಷ್ಟ ಜಾತಿ ಹಾಗೂ ಪಂಗಡದ ಅಭ್ಯರ್ಥಿಗಳಿಗೆ ಹೊರಗುತ್ತಿಗೆ ಕೆಲಸದಲ್ಲಿ ಮೀಸಲಾತಿ ನೀಡಲು ಕೂಡ ಈ ಸೊಸೈಟಿಯಿಂದ ಸಹಾಯವಾಗಲಿದೆ, ಇದರ ಜೊತೆಗೆ ನೌಕರರಿಗೆ ಕಾಲಕಾಲಕ್ಕೆ ವೇತನ ಮತ್ತಿತರ ಸೌಲಭ್ಯ ಸಮರ್ಪಕವಾಗಿ ದೊರಕುತ್ತಿಲ್ಲ ಎಂಬ ದೂರುಗಳಿಗೂ ಕೂಡ ಕಡಿವಾಣ ಹಾಕಬಹುದಾಗಿದೆ ಎಂದರು.**

## ಕಾರಟಗಿ ಬಸವಣ್ಣ ಕ್ಯಾಂಪ್ ರಸ್ತೆ ಡಾಂಬರೀಕರಣ ಅಭಿವೃದ್ಧಿಗೆ 5 ಕೋಟಿ

### ಸಚಿವ ಶಿವರಾಜ್ ಎಸ್ ತಂಗಡಗಿ ಅವರಿಂದ ಕಾಮಗಾರಿಗೆ ಭೂಮಿ ಪೂಜೆ

• ಉದಯವಾಹಿನಿ ಕಾರಟಗಿ

ಬೂದಗುಂಪ ಗ್ರಾ.ಪಂ ವ್ಯಾಪ್ತಿಯಲ್ಲಿ ಹಾಗೂ ಬೇವಿನಹಾಳ ಗ್ರಾಮ ಪಂಚಾಯತಿ ವ್ಯಾಪ್ತಿಯ ಬಸವಣ್ಣ ಕ್ಯಾಂಪ್ ಮತ್ತು ಬೇವಿನಹಾಳ ಗ್ರಾಮಗಳಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ ಮತ್ತು ರಸ್ತೆ ಅಭಿವೃದ್ಧಿ ಕಾಮಗಾರಿಗೆ ಹಿಂದುಳಿದ ವರ್ಗಗಳ ಕಲ್ಯಾಣ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವರಾದ ಶಿವರಾಜ್ ಎಸ್ ತಂಗಡಗಿ ಅವರಿಂದ ರಸ್ತೆ ಅಭಿವೃದ್ಧಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಲಾಯಿತು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ವತಿಯಿಂದ ಸುಮಾರು 50=00 ಲಕ್ಷ ವೆಚ್ಚದಲ್ಲಿ ಬೂದಗುಂಪ ಗ್ರಾಮದ ಶ್ರೀಕರಿಸಿದ್ದೇಶ್ವರ ಸಮುದಾಯ ಭವನ ನಿರ್ಮಾಣ,

ಕೆಕೆಆರ್‌ಡಿಬಿ ಕಲ್ಯಾಣ ಕರ್ನಾಟಕ ಅಭಿವೃದ್ಧಿ ಮಂಡಳಿಯ ವಿಶೇಷ ಅನುದಾನದಲ್ಲಿ ತಿಮ್ಮಾಪುರ ಹಾಲ ಸಮುದ್ರದವರೆಗೆ ಲೋಕಾಪಯೋಗಿ ಇಲಾಖೆಯಿಂದ 100 =00 ಲಕ್ಷ ವೆಚ್ಚದಲ್ಲಿ ಕಾಮಗಾರಿ, ಬೇವಿನ ಹಾಳ ಗ್ರಾಮದ ಬೇವಿನಾಳ ಪನ್ನಾಪುರ ವರೆಗೆ ರಸ್ತೆ ಅಭಿವೃದ್ಧಿ ಡಾಂಬರೀಕರಣ ಕಾಮಗಾರಿಗೆ ಮುಖ್ಯಮಂತ್ರಿಗಳ ವಿಶೇಷ ಅನುದಾನದಲ್ಲಿ ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ ಕೊಪ್ಪಳ ಪಿ ಆರ್ ಡಿ ಇ ಇಲಾಖೆಯಿಂದ 98=00 ಲಕ್ಷ ವೆಚ್ಚದಲ್ಲಿ ಕಾಮಗಾರಿ, ಹಾಗೂ ಬಸವಣ್ಣ ಕ್ಯಾಪಿನಿಂದ ಕಾರಟಗಿಯವರೆಗೆ ಲೋಕೋಪಯೋಗಿ ಇಲಾಖೆಯಿಂದ 500 =00 ಲಕ್ಷ ವೆಚ್ಚದಲ್ಲಿ ರಸ್ತೆ ಅಭಿವೃದ್ಧಿ ಹಾಗೂ ಡಾಂಬರೀರಣ ಕಾಮಗಾರಿಗಳಿಗೆ ಭೂಮಿ ಪೂಜೆಯನ್ನು ನೆರವೇರಿಸಿದರು.



ಉದಯವಾಹಿನಿ ಚಿತ್ರ

**ಈಡೇರಿದ ಬಹುದಿನದ ಬೇಡಿಕೆ**

ಈ ಸಂದರ್ಭದಲ್ಲಿ ಮಾತನಾಡಿದ ಸಚಿವರು ರಸ್ತೆ ಅಭಿವೃದ್ಧಿ ಕಾಮಗಾರಿಗಳನ್ನು ಗುಣಮಟ್ಟದಿಂದ ನಡೆಸಲಾಗುತ್ತದೆ ಅದೇ ರೀತಿ ರಸ್ತೆ ಅಗಲೀಕರಣ ಮಾಡುವಂತೆ ಅಂದಾಜು ಪತ್ರಿಕೆಯಲ್ಲಿ ಸೇರಿಸಲಾಗಿದೆ ಆದ ಕಾರಣ ಸಾರ್ವಜನಿಕರು ಸಹಕಾರ ನೀಡಬೇಕು ಇನ್ನೆರಡು ವರ್ಷದ ಅವಧಿಯಲ್ಲಿ ಕನಕಗಿರಿ ವಿಧಾನಸಭಾ ಕ್ಷೇತ್ರದಲ್ಲಿ ಪ್ರತಿ ಹಳ್ಳಿಹಳ್ಳಿಗೂ ಕೂಡ ಗುಣಮಟ್ಟದ ರಸ್ತೆಗಳ ನಿರ್ಮಾಣ ಗುರಿ ಹೊಂದಿದ್ದೇವೆ ಎಂದರು

ಬ್ಲಾಕ್ ಅಧ್ಯಕ್ಷ ಶರಣೆಗೌಡ ಮಾಲಿ ಪಾಟೀಲ್, ಶಿವಾರೆಡ್ಡಿ ನಾಯಕ್ ,ಚನ್ನಬಸಪ್ಪ ಸುಂಕದ, ಮಾಜಿ ತಾಲ್ಲೂಕ ಪಂಚಾಯಿತಿ ಸದಸ್ಯರಾದ ಜೆ.ದಾನನ ಗೌಡ ಬೇವಿನಹಾಳ ಗ್ರಾ.ಪಂ ಅಧ್ಯಕ್ಷರಾದ ಶ್ರೀಮತಿ ಮಂಜಮ್ಮ ಭೀಮಣ್ಣ, ಗ್ರಾಮದ ಮುಖಂಡರುಗಳಾದ ಮಧ್ಯ ಪಾಟಿ ಬದ್ರಿನಾರಾಯಣ, ನಕ್ಕಂಟಿ ಬಸವೇಶ್ವರರಾವು, ಎ ಗಂಗಾಧರಾವ್,ವಿ ಸತ್ಯನಾರಾಯಣ ಪಿ ರಾಮಕೃಷ್ಣ ಪಂಪನ ವೆಂಕಟೇಶ್ವರರಾವ್ ಮದ್ದಿ ಪಾಟಿ ಕೃಷ್ಣ, ಮಾವುಡಿ ಶೆಟ್ಟಿ ಸತ್ಯನಾರಾಯಣ, ಮಾವುಡಿ ಶೆಟ್ಟಿ ತ್ರಿಮೂರ್ತಿಲು,ಯಮನಪ್ಪ ಪನ್ನಾಪುರ, ಯುವ ಮುಖಂಡರಾದ ಬಸವರಾಜ್ ಹುದ್ದಿಹಾಳ ಪನ್ನಾಪುರ, ರಾಂಬಾಬು, ಕಂಕಟಾಲ ಶ್ರೀನಿವಾಸ್, ಕುಕ್ಕಲ ನಾಗೇಶ್, ಗ್ರಾಮ ಪಂಚಾಯತಿ ಸದಸ್ಯರುಗಳಾದ ಯಮನೂರು, ರವಿಕುಮಾರ್, ಪಂಪಾಪತಿ, ರಂಬಾಬು, ಇತರರು ಇದ್ದರು.

## ಗೂಂಡಾಗಳ ಗಡೀಪಾರಿಗೆ ಆಗ್ರಹ

• ಉದಯವಾಹಿನಿ ಸವದತ್ತಿ

ಯರಗಟ್ಟಿ ತಾಲ್ಲೂಕಿನ ಸತ್ತಿಗೇರಿ ಗ್ರಾಮದಲ್ಲಿ ಒಂದು ಕುಟುಂಬದ ವ್ಯಕ್ತಿಗಳು ಗ್ರಾಮಸ್ಥರ ಮೇಲೆ ದಬ್ಬಾಳಿಕೆ ನಡೆಸುತ್ತಿದ್ದಾರೆ' ಎಂದು ಆರೋಪಿಸಿ ಇಲ್ಲಿನ ತಾಲ್ಲೂಕು ಆಡಳಿತ ಸೌಧದ ಮುಂದೆ ಮಂಗಳವಾರ ಹಲವರು ಪ್ರತಿಭಟನೆ ನಡೆಸಿದರು.

ಸಮಾಜದ ಪ್ರಮುಖ ಹಾಫೀಸಾಬ ಮುಲ್ಲಾ ಮಾತನಾಡಿ, ಐದಾರು ಜನರು ಗ್ರಾಮದಲ್ಲಿ ಗೂಂಡಾಗಿರಿ ನಡೆಸುತ್ತಿದ್ದಾರೆ. ಸತ್ತಿಗೇರಿಯಲ್ಲಿ ಭಯದ ವಾತಾವರಣ ನಿರ್ಮಾಣವಾಗಿದೆ. ಹಫ್ತಾ ವಸೂಲಿ, ಮಹಿಳೆಯರು-ಮಕ್ಕಳ ದಬ್ಬಾಳಿಕೆ ನಡೆಸಿದ್ದಾರೆ.

ಇವರ ಮೇಲೆ ಈಗಾಗಲೇ ಮುರಗೋಡ ಪೊಲೀಸ್ ಠಾಣೆಯಲ್ಲಿ ಪ್ರಕರಣಗಳು ದಾಖಲಾಗಿವೆ. ಅದಾಗ್ಯೂ ಇವರ ಅಟ್ಟಹಾಸ ತಪ್ಪಿಲ್ಲ. ಇವರ ಗೂಂಡಾ ಪ್ರವೃತ್ತಿಯಿಂದ ಮುಸ್ಲಿಂ ಸಮುದಾಯದ ಮೇಲೆ ಕೆಟ್ಟ ಪರಿಣಾಮ ಬೀರುತ್ತಿದೆ' ಎಂದು ಆರೋಪಿಸಿದರು.

ಇವರ ಕಾಟ ತಾಳದೇ ಕೆಲವರು ಗ್ರಾಮವನ್ನೇ ತೊರೆದಿವೆ. ಒಬ್ಬ ಮಹಿಳೆಯನ್ನು ಅಪಹರಿಸಿ ಮೂರು ವರ್ಷಗಳಿಂದ ಮಾನಸಿಕ, ದೈಹಿಕ ಕಿರುಕುಳ ನೀಡಿದ್ದಾರೆ ಅವರ ಅಪ್ರಾಪ್ತ ವಯಸ್ಸಿನ ಪುತ್ರಿಗೂ ಕಿರುಕುಳ ನೀಡಲಾರಂಭಿಸಿದ್ದಾರೆ' ಎಂದು ದೂರಿದರು.

## ಜನಿವಾರ ಬ್ರಾಹ್ಮಣರ ಅಸ್ಮಿತೆ-ಅಸ್ತಿತ್ವ: ಮಹೇಶ್ ಕಜೆ


• ಉದಯವಾಹಿನಿ ಪುತ್ತೂರು

ಜನಿವಾರ ಎಂಬುವುದು ಕೇವಲ ನೂಲಲ್ಲ. ಅದು ಬ್ರಾಹ್ಮಣರ ಅಸ್ಮಿತೆ-ಅಸ್ತಿತ್ವ. ಸರ್ಕಾರದ ಕುಮ್ಮಕ್ಕಿನಿಂದ ಜನಿವಾರ ಕತ್ತರಿಸುವ ಮೂಲಕ ಘೋರ ಅಪರಾಧ ಎಸಗಲಾಗಿದೆ. ಈ ಪ್ರತಿಭಟನೆ ಅಧಿಕಾರದ ತೆವಲಿಗಲ್ಲ. ರಾಜಕೀಯಕ್ಕಾಗಿ ನಡೆಯುತ್ತಿರುವ ಪ್ರತಿಭಟನೆಯೂ ಅಲ್ಲ ಬ್ರಾಹ್ಮಣ ಸಂಸ್ಕಾರವನ್ನು ಉಳಿಸಿಕೊಳ್ಳುವ ಕಾರಣಕ್ಕಾಗಿ ನಡೆಯುತ್ತಿದೆ ಎಂದು ಬ್ರಾಹ್ಮಣ ಸಭಾದ ಅಧ್ಯಕ್ಷ, ನ್ಯಾಯವಾದಿ ಮಹೇಶ್ ಕಜೆ ಹೇಳಿದರು.

ಬೀದರಿನಲ್ಲಿ ಸಿಇಟಿ ಪರೀಕ್ಷೆ ಬರೆಯಲು ಹೋದ ಬ್ರಾಹ್ಮಣ ವಿದ್ಯಾರ್ಥಿಯ ಜನಿವಾರ ತೆಗೆಸಿದ ಘಟನೆಯನ್ನು ಖಂಡಿಸಿ ಪುತ್ತೂರಿನ ಅಮರ್ ಜವಾನ್ ಸ್ಮಾರಕದ ಬಳಿ ಅಖಿಲ ಕರ್ನಾಟಕ ಬ್ರಾಹ್ಮಣ ಸಭಾದ ವತಿಯಿಂದ ಬೃಹತ್ ಪ್ರತಿಭಟನೆಯಲ್ಲಿ ಅವರು ಮಾತನಾಡಿದರು.

ಬ್ರಾಹ್ಮಣ ಸಮಾಜಕ್ಕೆ ಧಕ್ಕೆ ಬಂದರೆ ಕೈಕಟ್ಟಿ ಕುಳಿತುಕೊಳ್ಳುವುದಿಲ್ಲ. ಬ್ರಾಹ್ಮಣ ಸಮಾಜದ ಮೇಲೆ ಏನೂ ಮಾಡಿದರೂ ನಡೆಯುತ್ತದೆ ಎಂಬ ಯೋಚನೆ ಸರ್ಕಾರಕ್ಕೆ ಬೇಡ. ಬ್ರಾಹ್ಮಣ ಹಾಗೂ ಗೋವಿನ ಮೇಲೆ ದಾಳಿ ನಡೆದರೆ ಇಡೀ ಭೂಮಿ ನಾಶವಾಗುತ್ತದೆ.

ಈಗ ವಿದ್ಯಾರ್ಥಿಯ ಜತೆಗೆ ಆಟ ಆಡಿದ್ದಾರೆ. ಈ ಘಟನೆಯ ಹಿಂದಿರುವ ಕೈಗಳ ಹುನ್ನಾರ ಹೊರಗೆ ಬರಬೇಕು ಎಂದು ಅವರು ಆಗ್ರಹಿಸಿದರು.




ಉದಯವಾಹಿನಿ ಚಿತ್ರ

> **ಹಿಂದೂ ಧಾರ್ಮಿಕ ಪರಂಪರೆಯನ್ನು ಉಳಿಸುವ ಕೆಲಸ ಬ್ರಾಹ್ಮಣ ಸಮಾಜದಿಂದ ಆಗುತ್ತಿದೆ. ಆದರೆ ವಿದ್ಯಾರ್ಥಿಯ ಜನಿವಾರ ಕತ್ತರಿಸುವ ಮೂಲಕ ಇಡೀ ಹಿಂದೂ ಸಮಾಜಕ್ಕೆ ಅಪಮಾನ ಮಾಡಲಾಗಿದೆ. ಇಂತಹ ಘಟನೆಗಳು ಮುಂದೆ ಸಂಭವಿಸಿದರೆ ಕೊಡಲಿ ಹಿಡಿಯುವ ಸಂದರ್ಭವೂ ಬರಬಹುದು ಎಂದು ಎಚ್ಚರಿಕೆ ನೀಡಿದ ಅವರು ಈ ಬಗ್ಗೆ ಬ್ರಾಹ್ಮಣ ಸಮಾವೇಶ ಮಾಡುವ ಅಗತ್ಯವಿದೆ. ಈ ಬಗ್ಗೆ ಯಾವುದೇ ಸಂಘರ್ಷಕ್ಕೂ ನಾವು ಸಿದ್ಧರಾಗಿದ್ದೇವೆ -ಅರುಣ್ ಕುಮಾರ್ ಪುತ್ತಿಲ**

## ಕಟಪಾಡಿ ಡಿವೈಡರ್ ಮೇಲೇರಿ ಮಗುಚಿ ಬಿದ್ದ ಕಾರು

• ಉದಯವಾಹಿನಿ ಕಟಪಾಡಿ



ಉದಯವಾಹಿನಿ ಚಿತ್ರ

ಕೊಲ್ಲೂರಿನಿಂದ ಸುಳ್ಯದತ್ತ ತೆರಳುತ್ತಿದ್ದ ವ್ಯಾಗನಾರ್ ಕಾರ್ ಒಂದು ಚಾಲಕನ ನಿಯಂತ್ರಣ ತಪ್ಪಿ ಡಿವೈಡರ್ ಮೇಲೇರಿ ಮಗುಚಿ ಬಿದ್ದ ಘಟನೆ ರಾ.ಹೆ. 66ರ ಕಟಪಾಡಿ ತೇಕಲ್ ತೋಟ ಎಂಬಲ್ಲಿ ಸಂಭವಿಸಿದೆ. ಕಾರಿನಲ್ಲಿ ಪ್ರಯಾಣಿಸುತ್ತಿದ್ದ ಕುಟುಂಬದ ನಾಲ್ವರು ಸಣ್ಣಪುಟ್ಟ ಗಾಯಗಳಿಂದ ಪಾರಾಗಿದ್ದಾರೆ.

## ಸತ್ತೂರಿನಲ್ಲಿ ರಾಮಾಯಣ ಉಪನ್ಯಾಸ

• ಉದಯವಾಹಿನಿ ಸತ್ತೂರು

ಅಯೋಧ್ಯಾಪತಿ ಶ್ರೀರಾಮಚಂದ್ರ ದೇವರ ಪ್ರತಿಷ್ಠಾಪನ ಮಹೋತ್ಸವದ ಅಂಗವಾಗಿ, ಸಂವತ್ಸರ ಪರ್ಯಂತ, ರಾಮಾಯಣ ಉಪನ್ಯಾಸ ಸರಣಿ ಕಾರ್ಯಕ್ರಮದಡಿ ಸತ್ತೂರಿನ ನಾರಾಯಣ ಪಾರಾಯಣ ಬಳಗದ ಆಶ್ರಯದಲ್ಲಿ, ವನಸಿರಿ ನಗರದಲ್ಲಿರುವ ಶ್ರೀ ವಿಶ್ವನಾಥ ಕಾನಗೋ ಇವರ ನಿವಾಸದಲ್ಲಿ ಬರುವ ಗುರುವಾರ ಮತ್ತು ಶುಕ್ರವಾರ ಅಂದರೆ ದಿನಾಂಕ 24 ಮತ್ತು 25 ರಂದು ಸಾಯಂಕಾಲ 6 ರಿಂದ 7 ರ ವರೆಗೆ ರಾಮಾಯಣದ ಕಿಷ್ಕಿಂದ ಕಾಂಡದ ಪ್ರವಚನವನ್ನು ಹಮ್ಮಿಕೊಳ್ಳಲಾಗಿದೆ. ಸಂಪನ್ಮೂಲ ವ್ಯಕ್ತಿಗಳಾಗಿ ಕರ್ನಾಟಕ ವಿಶ್ವವಿದ್ಯಾಲಯದ ಉಪನ್ಯಾಸಕರಾದ ಡಾ. ಪ್ರಮೋದ ಚಂದಿಯವರು ಆಗಮಿಸಲಿದ್ದಾರೆ.

## 1.46 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು

• ಉದಯವಾಹಿನಿ ಕಲಬುರಗಿ


ಮನೆ ಬೀಗ ಮುರಿದು 1.46 ಲಕ್ಷ ರೂ.ಮೌಲ್ಯದ ನಗನಾಣ್ಯ ಕಳವು ಮಾಡಿರುವ ಘಟನೆ ಸ್ವಸ್ತಿಕ ನಗರದ ಅಮರಾವತಿ ಅಪಾರ್ಟಮೆಂಟ್‌ನಲ್ಲಿ ನಡೆದಿದೆ. ಕೇಂದ್ರೀಯ ವಿಶ್ವವಿದ್ಯಾಲಯದಲ್ಲಿ ಪ್ರಾಧ್ಯಾಪಕರಾಗಿರುವ ದೇವರಾಜಪ್ಪ ಎಂಬುವವರು ಬಾಡಿಗೆಗಿದ್ದ ಮನೆ ಬೀಗ ಮುರಿದು ಕಳ್ಳರು 50 ಸಾವಿರ ರೂ. ನಗದು, 80 ಸಾವಿರ ರೂ.ಮೌಲ್ಯದ 15 ಗ್ರಾಂ.ಬಂಗಾರದ ಚೈನ್, 15 ಸಾವಿರ ರೂ.ಮೌಲ್ಯದ 2 ಗ್ರಾಂ.ಬಂಗಾರದ ಮಕ್ಕಳ ಎರಡು ಉಂಗುರಗಳು, 1000 ರೂ.ಮೌಲ್ಯದ 15 ಗ್ರಾಂ.ಬೆಳ್ಳಿ ಚೈನ್ ಸೇರಿ 1.46 ಲಕ್ಷ ರೂ.ಮೌಲ್ಯದ ನಗನಾಣ್ಯ ದೋಚಿಕೊಂಡು ಹೋಗಿದ್ದಾರೆ. ಇವರು ಮನೆಗೆ ಬೀಗ ಹಾಕಿಕೊಂಡು ಪತ್ನಿ, ಮಗನೊಂದಿಗೆ ತಮ್ಮ ಸ್ವಂತ ಊರಾದ ತುಮಕೂರಿಗೆ ಹೋಗಿದ್ದಾಗ ಮನೆ ಕಳ್ಳತನವಾಗಿದೆ ಎಂದು ತಿಳಿದುಬಂದಿದೆ. ಈ ಸಂಬಂಧ ಅವರು ಎಂ.ಬಿ.ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದು, ತನಿಖೆ ನಡೆದಿದೆ.

## ಸರ್ಕಾರಿ ನೌಕರರ ದಿನಾಚರಣೆ : ಸಾಂಕೇತಿಕ ಆಚರಣೆ

• ಉದಯವಾಹಿನಿ ಚಿತ್ರದುರ್ಗ

ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ದಿನಾಚರಣೆಯನ್ನು ನಗರದ ರಾಜ್ಯ ಸರ್ಕಾರಿ ನೌಕರರ ಭವನದ ಸಭಾಂಗಣದಲ್ಲಿ ಸೋಮವಾರದಂದು ಸಾಂಕೇತಿಕವಾಗಿ ಆಚರಿಸಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾಧ್ಯಕ್ಷ ಮಾಲತೇಶ ಮುದ್ದಜ್ಜಿ ಅವರು, ಪ್ರತಿ ವರ್ಷ ಏ. 21 ರಂದು ಸರ್ಕಾರಿ ನೌಕರರ ದಿನಾಚರಣೆಯನ್ನಾಗಿ ಆಚರಿಸಲಾಗುತ್ತಿದೆ. ರಾಜ್ಯ ಮತ್ತು ಜಿಲ್ಲಾ ಮಟ್ಟದಲ್ಲಿ ಉತ್ತಮ ಸೇವೆ ಸಲ್ಲಿಸುತ್ತಿರುವ ರಾಜ್ಯ ಸರ್ಕಾರಿ ನೌಕರರಿಗೆ ಅದೇ ದಿನದಂದು ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ನೀಡಲಾಗುತ್ತದೆ. ಜಿಲ್ಲೆಯಲ್ಲಿ 2023-24 ಹಾಗೂ 2024-25 ನೇ ಸಾಲಿನದೂ ಸೇರಿದಂತೆ 2 ವರ್ಷಗಳ ಪ್ರಶಸ್ತಿ ನೀಡುವುದು ಬಾಕಿ ಇದೆ. ಜಿಲ್ಲಾ ಉಸ್ತುವಾರಿ ಸಚಿವರ ದಿನಾಂಕವನ್ನು ಪಡೆದು, ಜಿಲ್ಲಾಧಿಕಾರಿಗಳೊಂದಿಗೆ ಚರ್ಚಿಸಿ, ಜಿಲ್ಲಾ ಕೇಂದ್ರದಲ್ಲಿ ಈ ಬಾರಿ ರಾಜ್ಯ ಸರ್ಕಾರಿ ನೌಕರರ ದಿನಾಚರಣೆಯನ್ನು ಅದ್ದೂರಿಯಾಗಿ ಶೀಘ್ರವೇ ಆಚರಿಸಲಾಗುವುದು. ಇದೇ ಸಮಾರಂಭದಲ್ಲಿ ಎರಡೂ ವರ್ಷಗಳ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ಕೂಡ ಜಿಲ್ಲಾ ಉಸ್ತುವಾರಿ ಸಚಿವರಿಂದಲೇ ವಿತರಿಸಲು ಕ್ರಮ ಕೈಗೊಳ್ಳಲಾಗುವುದು ಎಂದರು.





ಉದಯವಾಹಿನಿ ಚಿತ್ರ


ರಾಜ್ಯ ಸರ್ಕಾರಿ ನೌಕರರ ಸಂಘದ ಜಿಲ್ಲಾ ಘಟಕದ ಗೌರವಾಧ್ಯಕ್ಷ ಎಂ. ನಾರಾಯಣಸ್ವಾಮಿ, ಕಾರ್ಯದರ್ಶಿ ಆರ್. ಶ್ರೀನಿವಾಸ, ಖಜಾಂಚಿ ಮಲ್ಲಿಕಾರ್ಜುನ, ರಾಜ್ಯ ಪರಿಷತ್ ಸದಸ್ಯ ರಾಜಪ್ಪ ಎಸ್, ಉಪಾಧ್ಯಕ್ಷ ಪ್ರಕಾಶ್ ಕೆ., ಜಂಟಿಕಾರ್ಯದರ್ಶಿ ಮಾರುತಿ, ತಿಪ್ಪೇಸ್ವಾಮಿ ಸೇರಿದಂತೆ ವಿವಿಧ ಪದಾಧಿಕಾರಿಗಳು ಉಪಸ್ಥಿತರಿದ್ದರು.

## ಅಲೆಮಾರಿಗಳ ಅಹವಾಲು ಆಲಿಕೆ

• ಉದಯವಾಹಿನಿ ಕಲಬುರಗಿ

ಕರ್ನಾಟಕ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಅಲೆಮಾರಿ ಅಭಿವೃದ್ಧಿ ನಿಗಮದ ಅಧ್ಯಕ್ಷೆ ಪಲ್ಲವಿ ಜಿ. ಅವರು ಇಲ್ಲಿನ ಡಿ.ಸಿ ಕಚೇರಿ ಸಭಾಂಗಣದಲ್ಲಿ ಅಲೆಮಾರಿ ಸಮುದಾಯದವರ ಅಹವಾಲು ಆಲಿಸಿದರು.

ಕಲಬುರಗಿ ನಗರಕ್ಕೆ ಹೊಂದಿಕೊಂಡ ಕುಸನೂರ ಗ್ರಾಮದ ನೂತನ ಬಡಾವಣೆಯಲ್ಲಿ ರಸ್ತೆ ಮಧ್ಯೆ ಇರುವ ಟಿ.ಸಿ. ಸ್ಥಳಾಂತರವಾಗಿಲ್ಲ ಎಂದು ಅಲೆಮಾರು ಸಮುದಾಯದವರು ಅಧ್ಯಕ್ಷರ ಗಮನಕ್ಕೆ ತಂದರು. ರವಿವಾರ ಸ್ಥಳಕ್ಕೆ ಭೇಟಿ ನೀಡಿದಾಗ ರಸ್ತೆ ಮಧ್ಯೆ ಇದ್ದ ವಿದ್ಯುತ್ ಟ್ರಾನ್ಸ್ ಫಾರ್ಮರ್ ಸ್ಥಳಾಂತರಿಸುವಂತೆ ಸೂಚಿಸಿದ್ದರು. ಇದುವರೆಗೆ ಏಕೆ ಸ್ಥಳಾಂತರಿಸಿಲ್ಲ ಎಂದು ಅಧ್ಯಕ್ಷೆ ಪಲ್ಲವಿ ಜಿ. ಅತೃಪ್ತಿ ವ್ಯಕ್ತಪಡಿಸುತ್ತಾ ಕೂಡಲೆ ಸ್ಥಳಾಂತರಿಸುವಂತೆ ಜೆಸ್ಕಾಂ ಎ.ಇ. ಇಗೆ ಸೂಚಿಸಿದರು. ಕಲಬುರಗಿ ನಗರದ ವಾರ್ಡ್ ಸಂ.33ರಲ್ಲಿರುವ ಮರಾಠಿ ಹಿರಿಯ ಪ್ರಾಥಮಿಕ ಶಾಲೆ ತುಂಬಾ ಹಳೇಯದಾಗಿದ್ದು, ಶಿಥಿಲಾವಸ್ಥೆಯಲ್ಲಿದೆ. ಇಲ್ಲಿ ಮಾಂಗರೋಡಿ ಸಮುದಾಯದ ಜನರು ವಾಸಿಸಿದ್ದು, ಬಡವರ ಮಕ್ಕಳ ಶಿಕ್ಷಣಕ್ಕೆ ಅನುಕೂಲವಾಗುವ ನಿಟ್ಟಿನಲ್ಲಿ ಹಳೇ ಶಾಲೆ ಕೆಡವಿ ಹೊಸ ಕಟ್ಟಡ ನಿರ್ಮಿಸಬೇಕೆಂದು ಮತ್ತು ಇದಕ್ಕೆ 1 ಕೋಟಿ ಮಂಜೂರು ಮಾಡಬೇಕೆಂದು ಮಾಂಗಗಾರೋಡಿ ಸಮಾಜ ಅಭಿವೃದ್ಧಿ ಸೇವಾ ಸಂಘದ ಅಧ್ಯಕ್ಷ ಸದಾಶಿವ ರಾಮಾ ಉಪಾಧ್ಯಾಯ ಮತ್ತು ಕಾರ್ಯದರ್ಶಿ ಸುಧೀರ ಎಸ್.ಉಪಾಧ್ಯಾಯ ಅವರು ಮನವಿ ಪತ್ರ ಸಲ್ಲಿಸಿದರು.



ಉದಯವಾಹಿನಿ ಚಿತ್ರ

### ಅಧ್ಯಕ್ಷರಿಗೆ ಮನವಿ

**ಕಲಬುರಗಿ ನಗರದ ರಿಂಗ್ ರಸ್ತೆಯ ರಾಮನಗರದಲ್ಲಿ ಕಳೆದ 30 ವರ್ಷಗಳಿಂದ ಭೋವಿ ಸಮುದಾಯದ 50 ಅಲೆಮಾರಿ ಕುಟುಂಬಗಳು ನೀರು, ವಿದ್ಯುತ್, ಶೌಚಾಲಯ ಸಮಸ್ಯೆ ಇಲ್ಲದೆ ಕೊಡ ಮಾರುತ್ತಾ ತಮ್ಮ ಕಾಯಕ ಜೀವನ ಸಾಗಿಸುತ್ತಿದ್ದು, ಇವರಿಗೆ ಅಗತ್ಯ ಮೂಲಸೌಕರ್ಯ ಕಲ್ಪಿಸಬೇಕು ಎಂದು ಸ್ಲಂ ಜನಾಂದೋಲನ ಕರ್ನಾಟಕ ಜಿಲ್ಲಾ ಘಟಕದ ಅಧ್ಯಕ್ಷೆ ಗೌರಮ್ಮ ಮಾಕಾ ಮತ್ತು ಜಿಲ್ಲಾ ಸಂಚಾಲಕಿ ರೇಣುಕಾ ಸರಡಗಿ ಅವರು ಅಧ್ಯಕ್ಷರಿಗೆ ಮನವಿ ಪತ್ರ ಸಲ್ಲಿಸಿದರು.**

### ಜಾತಿ ಜನಗಣತಿ ಹೆಸರಿನಲ್ಲಿ ಮುಸ್ಲಿಮರನ್ನು ಹಿಂದೂಗಳ ವಿರುದ್ಧ ಎತ್ತಿಕಟ್ಟುವ ಕೆಲಸ ಮಾಡುತ್ತಿದ್ದಾರೆ

## ಸ್ಥಾನ ಬಿಟ್ಟುಕೊಡದಿರಲು ಸಿಎಂ ಹೊಸ ಕುತಂತ್ರ: ಬಿ.ವೈ.ವಿಜಯೇಂದ್ರ

• ಉದಯವಾಹಿನಿ ಗದಗ

ಸಿಎಂ ಸ್ಥಾನ ಬಿಟ್ಟುಕೊಡಬೇಕು ಎಂಬ ಕಾರಣಕ್ಕೆ ಸಿದ್ದರಾಮಯ್ಯ ಅವರು ಹೊಸ ಕುತಂತ್ರ ನಡೆಸುತ್ತಿದ್ದಾರೆ. ಜಾತಿ ಜನಗಣತಿ ಹೆಸರಿನಲ್ಲಿ ಮುಸ್ಲಿಮರನ್ನು ಹಿಂದೂಗಳ ವಿರುದ್ಧ ಎತ್ತಿಕಟ್ಟುವ ಕೆಲಸವನ್ನು ಸ್ವತಃ ಮುಖ್ಯಮಂತ್ರಿಯವರೇ ಮಾಡುತ್ತಿದ್ದಾರೆ' ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ಆರೋಪ ಮಾಡಿದರು. ನಗರದ ಗಾಂಧಿ ವೃತ್ತದಲ್ಲಿ ನಡೆದ ಜನಾಕ್ರೋಶ ಯಾತ್ರೆಯಲ್ಲಿ ಮಾತನಾಡಿ, ಸಮಾಜಗಳ ನಡುವೆ ಕಂದಕ ಸೃಷ್ಟಿಸಿ, ಬೆಂಕಿ ಹಚ್ಚುವ ಕೆಲಸವನ್ನು ಸಿಎಂ ಮಾಡಲು ಹೊರಟಿದ್ದಾರೆ' ಎಂದು ಹರಿಹಾಯ್ದರು.

ಸಿದ್ದರಾಮಯ್ಯ ಮತ್ತು ಅವರ ಮಂತ್ರಿಮಂಡಲಕ್ಕೆ ಬೆಂಗಳೂರೇ ಕರ್ನಾಟಕ ಎನ್ನುವಂತಾಗಿದೆ. ರೈತರ ಕಷ್ಟಗಳು, ಬೆಲೆ ಏರಿಕೆಯಿಂದ ತತ್ತರಿಸಿರುವ ಬಡ ಹಾಗೂ ಮಧ್ಯಮವರ್ಗದ ಜನರ ಕಣ್ಣೀರು ಅವರಿಗೆ ಕಾಣಿಸುತ್ತಿಲ್ಲ. ಇಂತಹ ದರಿದ್ರ, ಜನವಿರೋಧಿ ಸರ್ಕಾರ ಎಲ್ಲೂ ನೋಡಿಲ್ಲ. ಇದು ನಾಡಿನ ಜನರ ಪಾಲಿಗೆ ಬದುಕಿದ್ದು ಕೂಡ ಸತ್ತಂತೆ' ಎಂದು ಕಿಡಿಕಾರಿದರು.

'ಸಿದ್ದರಾಮಯ್ಯ ಸ್ವಚ್ಛ ರಾಜಕಾರಣಿ ಎಂದು ಹೇಳಿಕೊಳ್ಳುತ್ತಿದ್ದರು. ಆದರೆ, ಸಿಎಂ ಸ್ವಚ್ಛ ರಾಜಕಾರಣಿಯಲ್ಲ, ಭ್ರಷ್ಟ ರಾಜಕಾರಣಿ ಎಂದು ರಾಜ್ಯದ ಜನ ಅರ್ಥ ಮಾಡಿಕೊಂಡಿದ್ದಾರೆ. ಈ ಕಾಂಗ್ರೆಸ್ ಸರಕಾರದಲ್ಲಿ ಅಭಿವೃದ್ಧಿ ಶೂನ್ಯವಾಗಿದ್ದು, ಬೆಲೆ ಏರಿಕೆಯಿಂದ ರಾಜ್ಯದ ಎಲ್ಲ ವರ್ಗದ ಜನರು ಬೇಸತ್ತಿದ್ದಾರೆ' ಎಂದರು.

**'ನ್ಯಾಷನಲ್ ಹೆರಾಲ್ಡ್ ಪ್ರಕರಣದಲ್ಲಿ ಸೋನಿಯಾ ಗಾಂಧಿ ಎ1 ಆರೋಪಿ;** ಮುಡಾ ಹಗರಣದಲ್ಲಿ ಸಿದ್ದರಾಮಯ್ಯ ಎ1. ಹಾಗಾಗಿ, ಸೋನಿಯಾ ಗಾಂಧಿ ಹಾಗೂ ಸಿದ್ದರಾಮಯ್ಯ ಎ1 ಸ್ಥಾನವನ್ನು ಬಿಟ್ಟುಕೊಡುವುದಿಲ್ಲ. ಕಾಂಗ್ರೆಸ್ ಅಧಿನಾಯಕ ರಾಹುಲ್ ಗಾಂಧಿ ಅವರು ವಿದೇಶದಲ್ಲಿ ನಿಂತು ದೇಶ ವಿರೋಧಿ ಹೇಳಿಕೆ ನೀಡುತ್ತಾರೆ.

ಹಾಗಾಗಿ, ಭಾರತದ ಜನರು ಅವರನ್ನು ಭಯೋತ್ಪಾದಕರ ರೀತಿ ಕಾಣುತ್ತಿದ್ದಾರೆ. ಅವರನ್ನು ಗಡಿಪಾರು ಮಾಡಬೇಕು' ಎಂದು ಆಗ್ರಹಿಸಿದರು.

ಶಾಸಕ ಜನಾರ್ದನ ರೆಡ್ಡಿ ಮಾತನಾಡಿ, 'ನಾನು ಯಾವುದೇ ತಪ್ಪು ಮಾಡದಿದ್ದರೂ ಜೈಲಿಗೆ ಹಾಕಿಸಿದರು. ಕರ್ಮ ತಿರುಗಿ ಬರುತ್ತದೆ ಎಂಬುದಕ್ಕೆ ಉದಾಹರಣೆಯಾಗಿ ಈಗ ಸಿಎಂ ಸಿದ್ದರಾಮಯ್ಯ ಅವರೇ ಮುಡಾ ಹಗರದಲ್ಲಿ ಸಿಲುಕಿದ್ದಾರೆ. ಇದು ಕೇವಲ 14 ನಿವೇಶನಗಳ ವಿಚಾರವಲ್ಲ. ಬೇನಾಮಿ ಹೆಸರಿನಲ್ಲಿ ಸಾಕಷ್ಟು ನಿವೇಶನಗಳನ್ನು ಸಿಎಂ ಮಾಡಿಕೊಂಡಿದ್ದಾರೆ. ಈ ಸಂಬಂಧ 900 ಮಂದಿ ಇಡಿ ಮುಂದೆ ಹೇಳಿಕೆ ಕೊಟ್ಟಿದ್ದಾರೆ. ಮುಡಾ ಹಗರಣದಲ್ಲಿ ಸಿಎಂ ಜೈಲು ಪಾಲಾಗುವ ದಿನಗಳು ದೂರವಿಲ್ಲ' ಎಂದರು.

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಈ ಸರ್ಕಾರ ಬಂದ ನಂತರ 1,530 ಕೊಲೆಗಳಾಗಿವೆ. 1,500 ಮಂದಿ ರೈತರು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮಹಿಳೆಯರಿಗೆ ರಕ್ಷಣೆ ಇಲ್ಲವಾಗಿದೆ. ಇದೊಂದು ರಾಕ್ಷಸರ ಸರ್ಕಾರ' ಎಂದು ಹರಿಹಾಯ್ದರು.



ಉದಯವಾಹಿನಿ ಚಿತ್ರ

**ಸಮಾಜಗಳ ನಡುವೆ ಕಂದಕ**

> **ಸಿದ್ದರಾಮಯ್ಯ ಮತ್ತು ಕಾಂಗ್ರೆಸ್ ಪಕ್ಷ ಇಬ್ಬರೂ ಅಪಾಯಕಾರಿ. ಅವರನ್ನು ಮನೆಗೆ ಕಳಿಸಬೇಕು' ಎಂದು ಹೇಳಿದರು. ಕಾಂಗ್ರೆಸ್ ಸುಡುವ ಮನೆ ಎಂದು ಡಾ. ಬಿ.ಆರ್.ಅಂಬೇಡ್ಕರ್ ಹೇಳಿದ್ದರು. ನಮ್ಮ ಸಮಾಜದ ಅಭಿವೃದ್ಧಿಗೆ ಮೀಸಲಿಟ್ಟ ಹಣವನ್ನು ಗ್ಯಾರಂಟಿಗೆ ಬಳಸಿಕೊಂಡಿದ್ದಾರೆ. ಗ್ಯಾರಂಟಿ ಹೆಸರಿನಲ್ಲಿ ನಮ್ಮ ಹಣವನ್ನು ನಮಗೆ ಕೊಡಲು ಅವರೇ ಆಗಬೇಕಾ?. ಸಿದ್ದರಾಮಯ್ಯ ದಲಿತ ವಿರೋಧಿ' ಎಂದು ಕಿಡಿಕಾರಿದರು**
> **-ಚಲವಾದಿ ನಾರಾಯಣ ಸ್ವಾಮಿ, ವಿಧಾನ ಪರಿಷತ್ ವಿರೋಧ ಪಕ್ಷದ ನಾಯಕ**

> **ವಿದೇಶದಲ್ಲಿ ನಿಂತು ರಾಹುಲ್ ಗಾಂಧಿ ಭಾರತದ ಆಡಳಿತದ ಬಗ್ಗೆ ಮಾತನಾಡುತ್ತಿರುವುದು ಮೂರ್ಖತನದ ಪರಮಾವಧಿ, ವಿದೇಶದಲ್ಲಿ ನಿಂತು ಭಾರತದ ಚುನಾವಣೆ ಪ್ರಕ್ರಿಯೆ ಬಗ್ಗೆ ಮಾತನಾಡುತ್ತಾರೆ. ಸಂವಿಧಾನಾತ್ಮಕ ಸಂಸ್ಥೆ ಚುನಾವಣಾ ಆಯೋಗದ ಬಗ್ಗೆ ಟೀಕೆ ಮಾಡುತ್ತಾರೆ. ಭಾರತದ ಆಡಳಿತದ ಬಗ್ಗೆ ಮಾತನಾಡಲು ಸದನದಲ್ಲಿ ಅವಕಾಶ ಇದೆ**
> **-ಬಿ.ವೈ.ವಿಜಯೇಂದ್ರ**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಮಧ್ಯಾಹ್ನ | 12:00 ರಿಂದ 01:30 |
| ಗುಳಿಕ ಕಾಲ | ಬೆಳಿಗ್ಗೆ | 10:30 ರಿಂದ 12:00 |
| ಯಮಗಂಡ ಕಾಲ | ಬೆಳಿಗ್ಗೆ | 07:30 ರಿಂದ 09:00 |

**ಮೇಷ** ನೀವು ಪರಿಸ್ಥಿತಿಯ ನಿಯಂತ್ರಣ ಹೊಂದುತ್ತಿದ್ದಂತೆ ಆತಂಕ ಕಣ್ಮರೆಯಾಗುತ್ತದೆ. ಇದು ಧೈರ್ಯದ ಮೊದಲ ಸ್ಪರ್ಶದಲ್ಲಿ ಕುಸಿದು ಹೋಗುವ ಸಾಬೂನಿನ ಗುಳ್ಳೆಯಷ್ಟೇ ಗಟ್ಟಿಯೆಂದು ನೀವು ಅರ್ಥ ಮಾಡಿಕೊಳ್ಳುತ್ತೀರಿ.

**ವೃಷಭ** ನಿಮ್ಮ ಸಭ್ಯ ನಡವಳಿಕೆ ಮೆಚ್ಚುಗೆ ಪಡೆಯುತ್ತದೆ. ಅನೇಕ ಜನರು ನಿಮ್ಮನ್ನು ಹೊಗಳುತ್ತಾರೆ. ಹೆಚ್ಚುವರಿ ಹಣವನ್ನು ರಿಯಲ್ ಎಸ್ಟೇಟ್‌ನಲ್ಲಿ ಹೂಡಿಕೆ ಮಾಡಬೇಕು. ಕುಟುಂಬದ ಸದಸ್ಯರು ಬಹಳ ಬೇಡಿಕೆಗಳನ್ನಿಡುತ್ತಾರೆ.

**ಮಿಥುನ** ನಿಮ್ಮ ಪ್ರೇಮದ ಸಂಗಾತಿ ನಿಮ್ಮನ್ನು ಹೊಗಳಬಹುದು. ಅವರನ್ನು ಏಕಾಂಗಿಯಾಗಿ ಈ ಪ್ರಪಂಚದಲ್ಲಿ ಬಿಡಬೇಡಿ. ನಿಮ್ಮ ಕೆಲಸದಲ್ಲಿ ನಿಮ್ಮ ಉತ್ತಮ ಕಾರ್ಯಗಳಿಗಾಗಿ ನಿಮ್ಮನ್ನು ಸನ್ಮಾನಿಸಲಾಗುವುದು.

**ಕರ್ಕಾಟಕ** ನಿಮ್ಮ ಅತ್ಯಂತ ಪ್ರೀತಿಯ ಕನಸು ನನಸಾಗುತ್ತದೆ. ಆದರೆ ತುಂಬಾ ಸಂತೋಷಸ್ವಲ್ಪ ಸಮಸ್ಯೆಗಳನ್ನು ಉಂಟುಮಾಡಬಹುದಾದ್ದರಿಂದ ನಿಮ್ಮ ಉತ್ಸಾಹವನ್ನು ನಿಯಂತ್ರಣದಲ್ಲಿರಿಸಿಕೊಳ್ಳಿ.

**ಸಿಂಹ** ನಿಮ್ಮ ಅಪಾರ ವಿಶ್ವಾಸ ಮತ್ತು ಸುಲಭದ ಕೆಲಸದ ವೇಳಾಪಟ್ಟಿ ಇಂದು ವಿಶ್ರಾಂತಿಗೆ ಸಾಕಷ್ಟು ಸಮಯ ನೀಡುತ್ತದೆ. ನಿಮ್ಮ ಮನೆಗೆ ಸಂಬಂಧಿಸಿದ ಹೂಡಿಕೆ ಲಾಭದಾಯಕವಾಗಿರುತ್ತದೆ.

**ಕನ್ಯಾ** ಕೆಲಸ ಮತ್ತು ಮನೆಯಲ್ಲಿನ ಕೆಲವು ಒತ್ತಡ ನಿಮ್ಮ ಸಹನೆಯನ್ನು ಪರೀಕ್ಷಿಸುತ್ತದೆ. ನಿಮ್ಮ ತಂದೆಯ ಯಾವುದೇ ಸಲಹೆ ಇಂದು ಕೆಲಸದ ಸ್ಥಳದಲ್ಲಿ ಇಂದು ನಿಮಗೆ ಹಣದ ಪ್ರಯೋಜನವನ್ನು ನೀಡುತ್ತದೆ.

**ತುಲಾ** ನೀವು ನಿಮ್ಮ ಯಾವುದೇ ವಿಶ್ವಾಸಾರ್ಹರಿಂದ ಸಲಹೆಯನ್ನು ತೆಗೆದುಕೊಳ್ಳಬೇಕು. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ.

**ವೃಶ್ಚಿಕ** ಇಂದಿನವರೆಗೂ ಹಣವನ್ನು ಯೋಚಿಸದೆ ಖರ್ಚು ಮಾಡುತ್ತಿದ್ದ ಜನರು, ಅವರಿಗೆ ಹಣದ ತುಂಬಾ ಅಗತ್ಯವಿರಬಹುದು ಮತ್ತು ಜೀವನದಲ್ಲಿ ಹಣದ ಏನು ಮೌಲ್ಯವಿದೆ ಎಂದು ನಿಮಗೆ ಅರ್ಥವಾಗಬಹುದು.

**ಧನಸ್ಸು** ನಿಮ್ಮ ಆಕರ್ಷಕ ಪ್ರಕೃತಿ ಮತ್ತು ಆಹ್ಲಾದಕರ ವ್ಯಕ್ತಿತ್ವ ನೀವು ಹೊಸ ಸ್ನೇಹಿತರನ್ನು ಮತ್ತು ಸಂಪರ್ಕಗಳನ್ನು ಗಳಿಸಲು ಸಹಾಯ ಮಾಡುತ್ತವೆ. ಯಾರಾದರೂ ನಿಮಗೆ ಪ್ರೇಮ ನಿವೇದನೆ ಮಾಡುವ ಸಾಧ್ಯತೆಗಳಿವೆ.

**ಮಕರ** ಕೆಲಸದಲ್ಲಿ ಹಿರಿಯರಿಂದ ಒತ್ತಡ ಮತ್ತು ಮನೆಯಲ್ಲಿ ಅಪಶ್ರುತಿ ನಿಮ್ಮ ಏಕಾಗ್ರತೆಗೆ ತೊಂದರೆ ತರಬಹುದು. ದುರ್ಬಲ ಆರ್ಥಿಕ ಸ್ಥಿತಿಯಿಂದ ಕೆಲವು ಪ್ರಮುಖ ಕೆಲಸಗಳು ಸ್ಥಗಿತಗೊಳ್ಳುತ್ತವೆ.

**ಕುಂಭ** ನಿಮ್ಮ ಕಚೇರಿಯನ್ನು ಬೇಗನೆ ಬಿಡಲು ಮತ್ತು ನೀವು ನಿಜವಾಗಿಯೂ ಆನಂದಿಸುವುದನ್ನು ಮಾಡಲು ಪ್ರಯತ್ನಿಸಿ. ದೀರ್ಘ ಕಾಲ ಬಾಕಿಯಿದ್ದ ಬಾಕಿಗಳು ಕೊನೆಗೂ ದೊರಕುತ್ತವೆ.

**ಮೀನ** ಸ್ವಲ್ಪ ವ್ಯಾಯಾಮದೊಂದಿಗೆ ನಿಮ್ಮ ದಿನವನ್ನು ಪ್ರಾರಂಭಿಸಿ. ನಿಮ್ಮ ಬಗ್ಗೆ ನೀವೇ ಒಳ್ಳೆಯ ಅಭಿಪ್ರಾಯ ಇಟ್ಟುಕೊಳ್ಳುವುದು ಮುಖ್ಯ. ಇದನ್ನು ದಿನವೂ ಮಾಡುವುದನ್ನು ರೂಢಿ ಮಾಡಿಕೊಳ್ಳಿ.

# ಅನೈತಿಕ ಚಟುವಟಿಕೆಯ ತಾಣವಾದ
## ಅರಸು ಭವನ ಮತ್ತು ಬಿಸಿಎಂ ತಾಲ್ಲೂಕು ಕಚೇರಿ ಕಟ್ಟಡ


ಉದಯವಾಹಿನಿ ಚಿತ್ರ

• ಉದಯವಾಹಿನಿ ಮುದ್ದೇಬಿಹಾಳ

ಹುಡ್ಕೋ ಪಕ್ಕದ ಶಿರವಾಳ ಲೇಔಟ್‌ನ ಸಿಎ ಸೈಟ್‌ನಲ್ಲಿ ಅರ್ಧಕ್ಕೆ ನಿಂತಿರುವ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಡಿ. ದೇವರಾಜ ಅರಸು ಭವನ ಮತ್ತು ಬಿಸಿಎಂ ತಾಲ್ಲೂಕು ಕಚೇರಿ ಕಟ್ಟಡದಲ್ಲಿ ಅಕ್ರಮ, ಅನೈತಿಕ ಚಟುವಟಿಕೆಗಳು ಹೆಚ್ಚಾಗಿದ್ದು ತಡೆಗಟ್ಟಲು ಸಂಬಂಧಿಸಿದ ಅಧಿಕಾರಿಗಳು, ಪೊಲೀಸರು ಕೂಡಲೇ ಕ್ರಮ ಕೈಕೊಳ್ಳಬೇಕು ಎಂದು ಸಾರ್ವಜನಿಕರು ಆಗ್ರಹಿಸಿದ್ದಾರೆ. 2021ರಲ್ಲಿ ಈ ಕಟ್ಟಡ ನಿರ್ಮಾಣಕ್ಕೆ ಅಂದಿನ ಶಾಸಕರಾಗಿದ್ದ ಎ.ಎಸ್. ಪಾಟೀಲ ನಡಹಳ್ಳಿಯವರು ಸರ್ಕಾರದಿಂದ ಕೋಟಿ ರೂ ಅನುದಾನ ಮಂಜೂರು ಮಾಡಿಸಿದ್ದರು. ಕೆಆರ್‌ಐಡಿಎಲ್ (ಕರ್ನಾಟಕ ಗ್ರಾಮೀಣ ಮೂಲಭೂತ ಸೌಕರ್ಯ ಅಭಿವೃದ್ಧಿ ನಿಯಮಿತ, ಹಿಂದಿನ ಭೂಸೇನಾ ನಿಗಮ) ವತಿಯಿಂದ ಕಟ್ಟಡ ನಿರ್ಮಾಣಗೊಳ್ಳುತ್ತಿತ್ತು. ಆಗ ಬಿಡುಗಡೆಯಾದ 50 ಲಕ್ಷ ರೂ. ಅನುದಾನದಲ್ಲಿ ಕೆಳಗೆ ಡಿ ದೇವರಾಜ ಅರಸು ಸಮುದಾಯ ಭವನ, ಮೇಲೆ ಬಿಸಿಎಂ ತಾಲ್ಲೂಕು ಕಚೇರಿ ಇರುವ ಎರಡಂತಸ್ತಿನ ಕಟ್ಟಡ ಪೂರ್ಣಗೊಳಿಸಿ ಕಿಟಕಿಗಳಿಗೆ ಗ್ರಿಲ್ ಅಳವಡಿಸಲಾಗಿದೆ.

ಆದರೆ ಬಾಗಿಲು ಅಳವಡಿಕೆ, ಪ್ಲಾಸ್ಟರಿಂಗ್, ಫ್ಲೋರಿಂಗ್ ಸೇರಿ ಅಂತಿಮ ಹಂತದ ಕಾಮಗಾರಿಗಳಿಗೆ ಇನ್ನುಳಿದ ಅನುದಾನ ಬಿಡುಗಡೆಯಾಗದ ಕಾರಣ 2-3 ವರ್ಷಗಳಿಂದ ಈ ಕಟ್ಟಡ ಬಿಜಾಪುರದ ಬಾರಾ ಕಮಾನ್‌ನಂತೆ ನಿಂತಿದೆ. ಇಟ್ಟಂಗಿ, ಸಿಮೆಂಟ್ ಗೋಡೆ ಅಲ್ಲಲ್ಲಿ ಹಾಳಾತಗೊಡಗಿದೆ. ಕಟ್ಟಡಕ್ಕೆ ಬಾಗಿಲುಗಳೇ ಇಲ್ಲದ್ದರಿಂದ ಇಡೀ ಕಟ್ಟಡ ಅನೈತಿಕ ಚಟುವಟಿಕೆಗಳಿಗೆ ಕಾನೂನುಬಾಹಿರವಾಗಿ ಬಳಕೆ ಆಗುತ್ತಿರುವುದು ಅಕ್ಕಪಕ್ಕದ ನಿವಾಸಿಗಳ ನಿದ್ದೆಗೆಡಿಸಿದಂತಾಗಿದೆ ಎಂದು ದೂರಿದ್ದಾರೆ.

ಮೊದಲ ಅಂತಸ್ತಿನಲ್ಲಿ ಕೊಠಡಿಗಳಿದ್ದು ಯಾವುದಕ್ಕೂ ಬಾಗಿಲು ಇಲ್ಲದ್ದರಿಂದ ಅನೈತಿಕ ಚಟುವಟಿಕೆಗಳು ಯಥೇಚ್ಛವಾಗಿ ನಡೆಯುತ್ತಿವೆ. ಕೊಠಡಿಯೊಂದರಲ್ಲಿ ನೆಲದ ಮೇಲೆ ರಟ್ಟಿನ ಹಾಸಿಗೆ ಹಾಸಿರುವುದು, ಪಕ್ಕದಲ್ಲೇ ಪ್ಲಾಸ್ಟಿಕ್ ಮ್ಯಾಟ್ ಇರುವುದು, ಅಲ್ಲಲ್ಲಿ ಬಳಸಿದ ನಿರೋಧಗಳಿರುವುದು, ಎಲ್ಲೆಂದರಲ್ಲಿ ಸಂಡಾಸ ಮಾಡಿರುವುದು ಅನೈತಿಕತೆ ಎತ್ತಿ ತೋರಿಸುತ್ತಿದೆ ಎಂದು ಸಾರ್ವಜನಿಕರು ಕಿಡಿಕಾರಿದರು.

ಕೆಲ ವಿದ್ಯಾರ್ಥಿಗಳು ಕಾಲೇಜಿಗೆ ಕಾಲೇಜಿಗೆ ಹೋಗದೆ ಇಲ್ಲಿ ಬಂದು ಸಿಗರೇಟ್, ಗಾಂಜಾ ಇನ್ನಿತರ ಮಾದಕ ವಸ್ತು ಸೇವಿಸಿ ಸಂಜೆಯವರೆಗೂ ಸನೆಯಲ್ಲಿ ಕಾಲ ಕಳೆದು ನಸೆ ಇಳಿದ ನಂತರ ಹೋಗುತ್ತಾರೆ. ಅಲ್ಲಿಂದ ಸ್ವಲ್ಪ ದೂರದಲ್ಲಿ ಸಮಾಜ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕಿಯರ ಹಾಸ್ಟೇಲ್ ಇದೆ. ಕಟ್ಟಡ ಪಕ್ಕದ ರಸ್ತೆಯಲ್ಲಿ ಹೆಣ್ಣುಮಕ್ಕಳು ತಿರುಗಾಡುತ್ತಾರೆ. ಪುಂಡರ ಹಾವಳಿಯಿಂದ ಅಲ್ಲಲ್ಲಿ ಆತಂಕದ ವಾತಾವರಣ ನಿರ್ಮಾಣಗೊಂಡಿದೆ. ತೊಂದರೆ ಕೊಡದಂತೆ ಬುದ್ಧಿ ಹೇಳಲು ಹೋದರೆ ಇದು ನಿಮ್ಮ ಮನೆಯೇ, ನಿಮ್ಮ ಆಸ್ತಿಯೇ, ಸರ್ಕಾರದ ಆಸ್ತಿ. ಏನು ಬೇಕಾದರೂ ಮಾಡುತ್ತೇವೆ. ಕೇಳಲು ನೀವ್ಯಾರು ಎಂದು ಬೆದರಸಿ ಕಳಿಸುತ್ತಾರೆ ಎಂದು ಅಕ್ಕಪಕ್ಕದ ನಿವಾಸಿಗಳು ಅಲವತ್ತುಕೊಂಡಿದ್ದಾರೆ.

### ನೆಲ ಅಂತಸ್ತಿನಲ್ಲಿ ಮದ್ಯ ಸೇವನೆ


ಉದಯವಾಹಿನಿ ಚಿತ್ರ

ನೆಲ ಅಂತಸ್ತಿನಲ್ಲಿ ಗುಂಪು ಸೇರುವ ಪುಂಡರು ಬೀಯರ್, ವಿಸ್ಕಿ, ರಮ್ ಮುಂತಾದ ಮದ್ಯ ಸೇವನೆ ಮಾಡಿ ಖಾಲಿ ಬಾಟಲುಗಳನ್ನು, ತಿನ್ನುವ ಪದಾರ್ಥಗಳ ತ್ಯಾಜ್ಯವನ್ನು ಅಲ್ಲಿಯೇ ಬಿಸಾಕುತ್ತಾರೆ. ಅಮಲಿನಲ್ಲಿ ಕೆಲವೊಮ್ಮೆ ರಸ್ತೆಯಲ್ಲೇ ಬಾಟಲಿಗಳನ್ನು ಒಡೆಯುತ್ತಾರೆ. ಇದರಿಂದ ಗಾಜಿನ ಚೂರು ಅಲ್ಲಿ ಸಂಚರಿಸುವ ಸಾರ್ವಜನಿಕರಿಗೆ ಹಾನಿ ಉಂಟು ಮಾಡಿದ್ದೂ ಇದೆ ಎಂದು ದೂರಿದ್ದಾರೆ.

> ಅನುದಾನ ಬಿಡುಗಡೆ ಆಗದ ಕಾರಣ ಕಟ್ಟಡದ ಕೆಲಸ ಅರ್ಧಕ್ಕೆ ನಿಂತಿದೆ. ಅಲ್ಲಿ ಅನೈತಿಕ ಚಟುವಟಿಕೆ ನಡೆಯುತ್ತಿರುವುದರ ಬಗ್ಗೆ ಸಾರ್ವಜನಿಕರು ದೂರಿದ್ದಾರೆ. ಪೊಲೀಸ್ ಇಲಾಖೆಗೆ ಪತ್ರ ಬರೆಯುತ್ತೇವೆ. ಅನುದಾನ ಕೋರಿ ಸರ್ಕಾರಕ್ಕೆ ಪತ್ರ ಬರೆದಿದ್ದು ಆದಷ್ಟು ಬೇಗ ಕಾಮಗಾರಿ ಪೂರ್ಣಗೊಳಿಸಲಾಗುತ್ತದೆ.
> -ಶಿವಲೀಲಾ ಕೊಣ್ಣೂರ, ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣಾಧಿಕಾರಿ, ಮುದ್ದೇಬಿಹಾಳ

### ಪುಂಡರಿಗೆ ಬಿಸಿ ಮುಟ್ಟಿಸಿ ಜನರಿಗೆ ಆಗುತ್ತಿರುವ ತೊಂದರೆ ತಪ್ಪಿಸಬೇಕು


ಉದಯವಾಹಿನಿ ಚಿತ್ರ

ಕಟ್ಟಡದ ನೆಲ ಅಂತಸ್ತಿನ ಪ್ರವೇಶ ಸ್ಥಳದಲ್ಲಿ ಕಬ್ಬಿಣದ ಗೇಟ್ ಅಳವಡಿಸಿ ಯಾರೂ ಒಳಗೆ ಪ್ರವೇಶಿಸದಂತೆ ಮಾಡಬೇಕು. ಇಲ್ಲವಾದಲ್ಲಿ ಅಕ್ಕಪಕ್ಕದ ನಿವಾಸಿಗಳಾಗಿರುವ ನಾವೇ ಮುಂದೆ ನಿಂತು ಪ್ರವೇಶ ಸ್ಥಳದಲ್ಲಿ ಮುಳ್ಳುಕಂಟಿಗಳನ್ನು ಹಚ್ಚಿ ಯಾರೂ ಒಳಗೆ ಹೋಗದಂತೆ ಬಂದ್ ಮಾಡುತ್ತೇವೆ ಎಂದು ಎಚ್ಚರಿಸಿರುವ ಅಕ್ಕಪಕ್ಕದ ನಿವಾಸಿಗಳು, ಪೊಲೀಸರು ಇಲ್ಲಿ ಮೇಲಿಂದ ಮೇಲೆ ಗಸ್ತು ತಿರುಗಿ ಪುಂಡರಿಗೆ ಬಿಸಿ ಮುಟ್ಟಿಸಿ ಜನರಿಗೆ ಆಗುತ್ತಿರುವ ತೊಂದರೆ ತಪ್ಪಿಸಬೇಕು ಎಂದು ಆಗ್ರಹಿಸಿದ್ದಾರೆ.

# ಶಾಧಿಪೂರ ಗ್ರಾಪಂ ಪಿಡಿಓ ಕರ್ತವ್ಯ ನಿರ್ವಹಿಸುವಾಗ ಹಲ್ಲೆ ನಡೆಸಿದ ವ್ಯಕ್ತಿಗೆ ಬಂಧಿಸಿ ಸೂಕ್ತ ಕ್ರಮಕೈಗೊಳ್ಳಲು ಪ್ರತಿಭಟನೆ

• ಉದಯವಾಹಿನಿ, ಚಿಂಚೋಳಿ

ತಾಲ್ಲೂಕಿನ ಶಾಧಿಪೂರ ಗ್ರಾ.ಪಂ.ಅಭಿವೃದ್ಧಿ ಅಧಿಕಾರಿ ಶ್ರೀಧರ ಜವರೆಗೌಡ ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆ ಸ್ಥಳೀಯ ವ್ಯಕ್ತಿಯೊಬ್ಬ ಪಂಚಾಯಿತಿಗೆ ನುಗ್ಗಿ ಪಿಡಿಓ ಮೇಲೆ ಮಾರಣಾಂತಿಕ ಹಲ್ಲೆನಡೆಸಿ ಅವಚ್ಯ ಶಬ್ದಗಳಿಂದ ನಿಂದಿಸಿದ ವ್ಯಕ್ತಿಯನ್ನು ಬಂಧಿಸಿ ಕಠಿಣ ಶಿಕ್ಷೆ ನೀಡಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಆರ್.ಡಿ.ಪಿ.ಆರ್ ಕುಟುಂಬ ಹಾಗೂ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳ ಕ್ಷೇಮಾಭಿವೃದ್ಧಿ ಸಂಘ ಮತ್ತು ಸರ್ಕಾರಿ ನೌಕರರ ಸಂಘದ ವತಿಯಿಂದ ತಾಲ್ಲೂಕಾ ಪಂಚಾಯತ್ ಕಛೇರಿಯಿಂದ ತಹಶೀಲ್ ಕಛೇರಿವರೆಗೆ ಪಾದಯಾತ್ರೆ ಪ್ರತಿಭಟನೆ ನಡೆಸಿ ತಹಶೀಲ್ದಾರ್ ಮೂಲಕ ಸರ್ಕಾರದ ಮುಖ್ಯ ಕಾರ್ಯದರ್ಶಿಗೆ ಮನವಿಪತ್ರ ಸಲ್ಲಿಸಿದರು.

ಸರ್ಕಾರಿ ನೌಕರರ ಸಂಘದ ನಿರ್ದೇಶಕ ಜಗನ್ನಾಥ ರೆಡ್ಡಿ ಚಟ್ನಳ್ಳಿ ಮಾತನಾಡಿ ಕರ್ತವ್ಯದಲ್ಲಿದ ಗ್ರಾಪಂ ಅಭಿವೃದ್ಧಿ ಅಧಿಕಾರಿ ಮೇಲೆ ಸ್ಥಳೀಯ ತಾಂಡಾದ ವ್ಯಕ್ತಿಯೊಬ್ಬ ಪಿಡಿಓ ಮೇಲೆ ಹಲ್ಲೆ ನಡೆಸಿದ್ದು ಖಂಡನೀಯವಾಗಿದೆ.


ಉದಯವಾಹಿನಿ ಚಿತ್ರ

ಹಲ್ಲೆ ಮಾಡಿದ ವ್ಯಕ್ತಿಯನ್ನು ಪೋಲೀಸರು ತಕ್ಷಣ ಬಂಧಿಸಿ ಆರೋಪಿಯನ್ನು ಗಡಿಪಾರು ಮಾಡಬೇಕು,ಸರ್ಕಾರಿ ನೌಕರರಿಗೆ ಭದ್ರತೆ ಒದಗಿಸಬೇಕು, ರಕ್ಷಣಾ ಕಾಯ್ದೆಯನ್ನು ಕಟ್ಟುನಿಟ್ಟಾಗಿ ಜಾರಿಗೆ ತರಬೇಕು ಇಂಥಹ ವ್ಯಕ್ತಿಗಳಿಗೆ ಕಠಿಣ ಶಿಕ್ಷೆ ವಿಧಿಸಬೇಕು ಎಂದರು. ಸರ್ಕಾರಿ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯ ಮಲ್ಲಿಕಾರ್ಜುನ ಪಾಲಾಮೋರ್, ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳ ಅಧ್ಯಕ್ಷ ಪವನಕುಮಾರ ಮೇತ್ರಿ,ಪಿಡಿಓ ಮಲ್ಲಿಕಾರ್ಜುನ ಗಿರಿ,ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭಾ ಅಧ್ಯಕ್ಷ ಶರಣು ಪಾಟೀಲ,ಪಿಡಿಓ ರಾಮಕೃಷ್ಣ ಕೊಡಂಪಳ್ಳಿ,ಎಡಿ ನಾಗೇಂದ್ರಪ್ಪ ಕೊಡಂಪಳ್ಳಿ ಮಾತನಾಡಿದರು.

> ಪಿಡಿಓ ಕರ್ತವ್ಯ ನಿರ್ವಹಿಸುತ್ತಿದ್ದ ವೇಳೆ ಏಕಾಏಕಿ ಒಬ್ಬ ಪಂಚಾಯಿತಿಗೆ ಒಳಗೆ ನುಗ್ಗಿ ಪೋಲಿಸ್ ಸಿಬ್ಬಂದಿ ಎದುರು ಪಿಡಿಓ ಮೇಲೆ ಹಲ್ಲೆ ನಡೆಸಿದ್ದು ಈಗಾಗಲೇ ಕುಂಚಾವರಂ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ ತಕ್ಷಣವೇ ಅವನನ್ನು ಬಂಧಿಸಿ ಕಠಿಣ ಶಿಕ್ಷೆ ವಿಧಿಸಬೇಕು -ದೇವೀಂದ್ರಪ್ಪಾ ಹೋಳ್ಕರ
> ಸರ್ಕಾರಿ ನೌಕರರ ಸಂಘದ ಅಧ್ಯಕ್ಷ

ಗೋವಿಂದ ರೆಡ್ಡಿ,ಯಲಗೊಂಡ, ಸುನೀಲಕುಮಾರ, ವೀರಣ್ಣ, ರೀಯಾಜ್ ಅಮೀನ್, ದಶರಥ ಪಾತ್ರೆ, ಹೀರಾಸಿಂಗ್ ಚವ್ಹಾಣ, ರಾಜಶೇಖರ ಹಿತ್ತಲ, ಚನ್ನವೀರಯ್ಯ ಸ್ವಾಮಿ, ಫಾಯಜ್, ರೇವಣಸಿದ್ದ ಪಾಟೀಲ, ಶ್ರೀಧರ ಜವರೆಗೌಡ,,ಮುರುಗೇಪ್ಪ, ಮರೇಂದ್ರ, ಸಂಜುಕುಮಾರ,ಗೋಪಾಲ ಗಾರಂಪಳ್ಳಿ,ರಮೇಶ, ಶ್ರೀಧರ ವಗ್ಗಿ,ಅನೇಕರಿದ್ದರು.

# ಪರೋಪಕಾರಿ ಕೆಲಸಗಳಿಂದ ಮನುಷ್ಯನ ಜನ್ಮ ಸಾರ್ಥಕ


ಉದಯವಾಹಿನಿ ಚಿತ್ರ

• ಉದಯವಾಹಿನಿ ವಡಗೇರಾ

ಸಮಾಜಮುಖಿ ಹಾಗೂ ಪರೋಪಕಾರಿ ಕೆಲಸಗಳಿಂದ ಮಾತ್ರ ಮನುಷ್ಯನ ಜನ್ಮ ಸಾರ್ಥಕ ಎಂದು ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಜಿಲ್ಲಾಧ್ಯಕ್ಷ ಮಲ್ಲಪ್ಪ ಸಂಕಿನ ಹೇಳಿದರು.

ತಾಲ್ಲೂಕಿನ ತುಮಕೂರು ಗ್ರಾಮದಲ್ಲಿ ಇಕ್ಷು ಫಾರ್ಮ್ ಪ್ರೈವೇಟ್ ಲಿಮಿಟೆಡ್ ಕಂಪನಿ ಮುಖ್ಯಸ್ಥರಾದ ಚೇತನ್ ಕಂಪನಿ ವ್ಯವಸ್ಥಾಪಕರಾದ ರಾಜಶೇಖರ್ ಮತ್ತು ಕರವೇ ಜಿಲ್ಲಾ ಉಪಾಧ್ಯಕ್ಷರಾದ ಚೌಡಯ್ಯ ಬಾವೂರ ಸಹಕಾರದೊಂದಿಗೆ ಸ್ಥಾಪಿಸಿರುವ ನೀರಿನ ಅರವಟಿಗೆ ಕಾರ್ಯಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಅತಿ ಹೆಚ್ಚು ಬಿಸಿಲಿನ ತಾಪವಿದ್ದು ಸಾರ್ವಜನಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ ಕಲ್ಪಿಸಿರುವ ಕಾರ್ಯ ಶ್ಲಾಘನೀಯ ಎಂದು ಹೇಳಿದರು.

> ಎಲ್ಲಾ ದಾನಕ್ಕಿಂತಲೂ ಕುಡಿಯುವ ನೀರಿನ ದಾನ ಅತ್ಯಂತ ಮಹತ್ವದ್ದಾಗಿದೆ ಆ ನಿಟ್ಟಿನಲ್ಲಿ ಗ್ರಾಮೀಣ ಪ್ರದೇಶದಿಂದ ಬರುವ ಸಾರ್ವಜನಿಕರಿಗೆ ನೀರಿನ ದಾಹ ತಣಿಸಲು ನಮ್ಮ ಗ್ರಾಮದಲ್ಲಿ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಎಲ್ಲರ ಸಹಕಾರದೊಂದಿಗೆ ಕಲ್ಪಿಸಿದ್ದೇವೆ
> -ಚೌಡಯ್ಯ ಬಾವೂರ, ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾ ಉಪಾಧ್ಯಕ್ಷ

ಈ ಸಂದರ್ಭದಲ್ಲಿ ಶರಬಲಿಂಗ ಕಂಟೆಕಾಯಿ, ಮೌಲ ಕುರೆಸಿ, ಆದಮ್ ಕೋಳಿ, ವೆಂಕಟೇಶ್ ಮಾಚನೂರು , ಬಸವರೆಡ್ಡಿ ಗೌಡ ಅಭೀಶಾಳ,ರಾಚಪ್ಪ ಮಡಿವಾಳ, ಸಿದ್ದು ಪೂಜಾರಿ, ಶರಣು ಅಂಗಡಿ, ಸುರೇಶ್ ವಿಶ್ವಕರ್ಮ,ಐಲಿಂಗ, ಜಾಫರ್, ದೇವು ಮದನೂರ, ದಾವಲ್ ಸಾಬ್ ಮರಡಿ, ಗೌಸುದ್ದೀನ್, ಈಶಪ್ಪ ಪಟ್ಟೆದಾರ್, ಮರಿಲಿಂಗ, ಹಾಗೂ ತುಮಕೂರಿನ ಗ್ರಾಮಸ್ಥರು ಹಾಗೂ ಇನ್ನಿತರರು ಉಪಸ್ಥಿತರಿದ್ದರು ಉಪಸ್ಥಿತರಿದ್ದರು

# ಕೂಕನಪಳ್ಳಿಯಲ್ಲಿ ಕುರಿಸಂತೆ; ಶಾಸಕ ರಾಘವೇಂದ್ರ ಹಿಟ್ನಾಳ್

• ಉದಯವಾಹಿನಿ ಕೊಪ್ಪಳ

ತಾಲ್ಲೂಕಿನ ಕೂಕನಪಳ್ಳಿ ಗ್ರಾಮದಲ್ಲಿ ಅಧಿಕೃತ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಇರುವುದರಿಂದ ಕೂಕನಪಳ್ಳಿ ಗ್ರಾಮದಲ್ಲಿ ಕುರಿಸಂತೆ ನಡೆಯುತ್ತೆ ಎಂದು ಶಾಸಕ ರಾಘವೇಂದ್ರ ಹಿಟ್ನಾಳ್ ಹೇಳಿದರು.

ನಗರದ ಪ್ರವಾಸಿ ಮಂದಿರದಲ್ಲಿ ಕೊಪ್ಪಳ ಶಾಸಕ ಕೆ ರಾಘವೇಂದ್ರ ಹಿಟ್ನಾಳ್ ರವರು ಸುದ್ದಿಗೋಷ್ಠಿ ನಡೆಸಿ ಮಾತನಾಡಿ, 2025-26ನೇ ಸಾಲಿನ ರಾಜ್ಯದ ಬಜೆಟ್ ಅಧಿವೇಶನದ ಸಂದರ್ಭದಲ್ಲಿ ಬೂದುಗುಂಪ ಗ್ರಾಮದ ಕುರಿಸಂತೆಗೆ 25 ಕೋಟಿ ಅನುದಾನ ಘೋಷಣೆಯಲ್ಲಿ ಅಧಿಕಾರಿಗಳ ಕಣ್ಣ್ ತಪ್ಪಿನಿಂದ ಆಗಿದೆ. ನಾನು ಮಾಜಿ ಸಂಸದರಾದ ಸಂಗಣ್ಣ ಕರಡಿ ಅರ್ಬರ ಜೊತೆ ಮಾತನಾಡಿದ್ದೇನೆ. ಅದನ್ನ ಸರಿಪಡಿಸುವ ಕೆಲಸವನ್ನ ಮಾಡುತ್ತೇನೆ ಜೊತೆಗೆ ಕೂಕನಪಳ್ಳಿ ಗ್ರಾಮದಲ್ಲೇ ಅಧಿಕೃತ ಕುರಿ ಮತ್ತು ಮೇಕೆ ಸಂತೆ ಮುಂದುವರೆಯಲಿದೆ ಎಂದು ಸ್ಪಷ್ಟನೆ ನೀಡಿದರು.



ಉದಯವಾಹಿನಿ ಚಿತ್ರ

ಈ ಸಂದರ್ಭದಲ್ಲಿ ಕೊಪ್ಪಳ ಸಂಸದ ಕೆ ರಾಜಶೇಖರ್ ಹಿಟ್ನಾಳ್, ಕೊಪ್ಪಳ ಜಿಲ್ಲಾ ಪಂಚಾಯತ್ ಮಾಜಿ ಸದಸ್ಯರಾದ ಗೋಳಪ್ಪ ಹಲಗೇರಿ, ಕೊಪ್ಪಳ ಕಾಂಗ್ರೆಸ್ ಮುಖಂಡರಾದ ಗಾಳೆಪ್ಪ ಪೂಜಾರ್, ಕೆ ಎಮ್ ಸೈಯದ್, ಮಲ್ಲಿಕಾರ್ಜುನ್ ಪೂಜಾರ, ಕೃಷ್ಣ ಇಟ್ಟಂಗಿ, ಶರಣಪ್ಪ ಸಜ್ಜನ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಉದ್ಯೋಗ ಖಾತರಿ ಸದ್ಬಳಕೆ ಮಾಡಿಕೊಳ್ಳಿ: ಪಿಡಿಓ ದತ್ತಾತ್ರಿ ಪೂಜಾರಿ

• ಉದಯವಾಹಿನಿ ಕಮಲನಗರ


ಆರೋಗ್ಯವೇ ಭಾಗ್ಯ ಎಂಬಂತೆ ದೈಹಿಕವಾಗಿ ಸದೃಢವಾಗಿದ್ದರೆ ಮಾತ್ರ ಮಾನಸಿಕ ನೆಮ್ಮದಿ ಇರಲು ಸಾಧ್ಯ. ಆದ್ದರಿಂದ ಯಾರು ಆರೋಗ್ಯದ ಬಗ್ಗೆ ನಿರ್ಲಕ್ಷ್ಯ ತೋರದೇ ತಪಾಸಣೆಯನ್ನು ಮಾಡಿಕೊಳ್ಳಿ ಎಂದು ಗ್ರಾ.ಪಂ.ನ ಪಂಚಾಯತ ಅಭಿವೃದ್ಧಿ ಅಧಿಕಾರಿ ದತ್ತಾತ್ರಿ ಪೂಜಾರಿ ತಿಳಿಸಿದರು. ತಾಪಂ ಕಾರ್ಯನಿರ್ವಾಹಕ ಅಧಿಕಾರಿ ಮಾಣಿಕರಾವ ಪಾಟೀಲ ಅವರ ಆದೇಶದಂತೆ ತಾಲ್ಲೂಕಿನ ಮುಧೋಳ(ಬಿ) ಗ್ರಾಮದಲ್ಲಿ ದುಡಿಯೋಣ ಬಾ ಅಭಿಯಾನ ಮತ್ತು ಸ್ತ್ರೀಚೇತನ ಅಭಿಯಾನಕ್ಕೆ ಚಾಲನೆ ನೀಡಿ ನರೇಗಾ ಕೂಲಿಕಾರರಿಗೆ ಆರೋಗ್ಯ ಶಿಬಿರ ನಡೆಸಲಾಯಿತು. ಗ್ರಾಮದಿಂದ ಯಾರು ವಲಸೆ ಹೋಗದೇ ಪ್ರತಿಯೊಬ್ಬರು ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತ್ರಿ ಯೋಜನೆಯ ಸದ್ಬಳಕೆ ಮಾಡಿಕೊಂಡು ಸ್ವಾವಲಂಭಿ ಜೀವನ ನಡೆಸಿ ಇದೀಗ ಕೂಲಿ ಮೊತ್ತ ಕೂಡ 370 ಆಗಿದ್ದು, ಪುರುಷ ಮತ್ತು ಮಹಿಳೆಯರಿಗೆ ಸಮಾನ ಕೂಲಿ ಸಿಗುವುದರ ಜೊತೆಗೆ ಸಮಯ ಕೂಡ ಸಿಗುತ್ತದೆ.


ಉದಯವಾಹಿನಿ ಚಿತ್ರ

ಇನ್ನು ಹೆಚ್ಚಿನ ಕೂಲಿಕಾರರು ಇದರ ಲಾಭ ಪಡೆದುಕೊಳ್ಳಿ, ಗರ್ಭಿಣಿ ಮಹಿಳೆಯರಿಗೆ, ಹಿರಿಯ ನಾಗರಿಕರಿಗೆ ಮತ್ತು ವಿಶೇಷ ಚೇತನರಿಗೆ ಕೆಲಸದಲ್ಲಿ ರಿಯಾಯತಿ ಕೂಡ ಇದೆ. ಜೊತೆಗೆ ಆರೋಗ್ಯವೇ ಭಾಗ್ಯವಾಗಿದ್ದು, ಎಲ್ಲಾ ಕೂಲಿಕಾರರು ಆರೋಗ್ಯದ ಬಗ್ಗೆ ನಿಷ್ಕಾಳಜಿ ತೋರಿಸದೇ ಎಲ್ಲರು ಆರೋಗ್ಯದ ಕಡೆ ಗಮನ ಹರಿಸಿ ಅದಕ್ಕಾಗಿ ನೀವು ಕೆಲಸ ಮಾಡುವ ಸ್ಥಳದಲ್ಲಿಯೇ ಆರೋಗ್ಯ ಶಿಬಿರ ಏರ್ಪಡಿಸಲಾಗಿದೆ ಎಲ್ಲರು ಇದರ ಸದುಪಯೋಗ ಪಡೆದುಕೊಳ್ಳಿ ಎಂದರು.

> ಜೊತೆಗೆ ನರೇಗಾ ಕೂಲಿ ಕಾರ್ಮಿಕರಿಗೆ ಅನೂಕೂಲವಾಗಲಿ ಎಂದು ಕೂಸಿನ ಮನೆ ಕೇಂದ್ರವನ್ನು ಪ್ರಾರಂಭಿಸಲಾಗಿದೆ. ಆದ ಕಾರಣ ನಿಮ್ಮ ಮಕ್ಕಳನ್ನು ಕೂಸಿನ ಮನೆ ಕೇಂದ್ರದಲ್ಲಿ ಬಿಟ್ಟರೆ ಆ ಮಕ್ಕಳನ್ನು ನೋಡಿಕೊಳ್ಳಲು ಆರೈಕೆದಾರರು ಇದ್ದಾರೆ ಪೌಷ್ಟಿಕ ಆಹಾರ ಜೊತೆಗೆ ಆಟ, ಪಾಠಗಳನ್ನು ಕೂಡ ಮಾಡಿಸುತ್ತಾರೆ.

# ಭಾರೀ ಮಳೆ: 11 ಕೆವಿ ಕೇಬಲ್ ಮೇಲೆ ಮುರಿದುಬಿದ್ದಿ ಮರದ ಕೊಂಬೆ


ಉದಯವಾಹಿನಿ ಚಿತ್ರ

• ಉದಯವಾಹಿನಿ ನಿಡಗುಂದಿ

ಮಳೆಯಿಂದ ಮರದ ಕೊಂಬೆ 11ಕೆವಿ ಕೇಬಲ್ ಮೇಲೆ ಮುರಿದು ಬಿದ್ದು ನಿಡಗುಂದಿ ಹಳೆಯ ಬಸ್ಟ್ಯಾಂಡ್ ಹತ್ತಿರ ಘಟನೆ ಕಂಡು ಬಂದಿದೆ. ಅದೃಷ್ಟವಶಾತ್ ಘಟನೆಯಲ್ಲಿ ಯಾವುದೇ ಪ್ರಾಣಹಾನಿ ಸಂಭವಿಸಿಲ್ಲ. ಬೇಸಿಗೆಯಲ್ಲಿ ಕರೆಂಟ್ ಇಲ್ಲದೆ ಜನರ ಪರದಾಟ ರಾತ್ರಿ ವೇಳೆಯಲ್ಲಿ ನಡೆದಿದೆ ಪವರ್ ಮ್ಯಾನ್‌ಗಳ ಹರ ಸಾಹಸ ಈ ಸಂದರ್ಭದಲ್ಲಿ ಕಾಣಬಹುದು.

# ನೀರಿನ ಕೊರತೆಯಿಂದ ಹಾಳಾದ ಕಲ್ಲಂಗಡಿ ಪರಿಹಾರಕ್ಕೆ: ಚಿಗಾನೂರು ಆಗ್ರಹ

• ಉದಯವಾಹಿನಿ ವಡಗೇರಾ

ತಾಲ್ಲೂಕಿನ ಗಡ್ಡೆಸೂಗುರು ಗ್ರಾಮದಲ್ಲಿ ಬೇಸಿಗೆಯ ಬಿಸಿಲಿನಿಂದ ಬತ್ತಿ ಹೋದ ನೀರಿನ ಮೂಲಗಳು ಬಿಸಿಲಿನ ತಾಪಮಾನ ಹೆಚ್ಚಳ ಹಿನ್ನಲೆ ಕಲ್ಲಂಗಡಿ ಬೆಳೆಗೆ ನೀರಿನ ಕೊರತೆಯಿಂದ ಹಾನಿ ಒಣಗಿ ಹೋದ ಕಲ್ಲಂಗಡಿ ಬೆಳೆ ರೈತ ಮರಿಲಿಂಗಪ್ಪ ಬೆಳೆದಿದ್ದ 3 ಎಕರೆ ಭೂಮಿ ಲೀಜ್‌ಗೆ ಪಡೆದು ಕಲ್ಲಂಗಡಿ ಕೃಷಿ ಮಾಡುತ್ತಿದ್ದ ರೈತ ಮರಿಲಿಂಗಪ್ಪ ಸಾಲ ಶೂಲ ಮಾಡಿ ಕಲ್ಲಂಗಡಿ ಬೆಳೆದಿದ್ದ ವಿದ್ಯುತ್ ಹಾಗೂ ನೀರಿನ ಸಮಸ್ಯೆಯಿಂದ ಕೂಡಾ ಬೆಳೆದ ಬೆಳೆಗೆ ನೀರು ಹರಿಸಿಕೊಳ್ಳಲು ಆಗಿಲ್ಲ ಪಕ್ಕದ ಜಮೀನಿನ ಬೋರ್ ವೆಲ್ ನೀರು ಹರಿಸಿಕೊಳ್ಳಲು ಸಾಧ್ಯವಾಗಿಲ್ಲ ಕಲ್ಲಂಗಡಿ ಬೆಳೆದು ಒಂದು ರೂಪಾಯಿ ಆದಾಯ ಪಡೆಯದ ರೈತ ಮರಿಲಿಂಗಪ್ಪ ಕಲ್ಲಂಗಡಿ ಬೆಳೆ ಹಾನಿಯಿಂದ ಕಂಗಲಾಗಿ ಈಗ ಊರು ಬಿಟ್ಟ ರೈತ ಬದುಕಲು ಬೆಂಗಳೂರುನತ್ತ ವಲಸೆ ಹೋಗುತ್ತಿದ್ದೇವೆ ಎಂದು ರೈತ ಮರಿಲಿಂಗಪ್ಪ ನೋವು ತೋಡಿಕೊಂಡಿದ್ದಾರೆ. ರೈತ ಮರಿಲಿಂಗಪ್ಪ ತುಂಬಾ ಸಂಕಷ್ಟದಲ್ಲಿ ಜಿಲ್ಲಾಡಳಿತ ಸರಕಾರ ಈ ಕುರಿತು ಸ್ಪಂದಿಸಿ ಸೂಕ್ತ ಪರಿಹಾರ ಕಲ್ಪಿಸುವಂತೆ ಕರ್ನಾಟಕ ರಕ್ಷಣಾ ವೇದಿಕೆ ತಾಲ್ಲೂಕು ಅಧ್ಯಕ್ಷ ಅಬ್ದುಲ್ ಚಿಗಾನೂರ ಆಗ್ರಹಿಸಿದ್ದಾರೆ.


ಉದಯವಾಹಿನಿ ಚಿತ್ರ

# ಜೂಜಾಟ:ನಾಲ್ವರ ಬಂಧನ

• ಉದಯವಾಹಿನಿ ಕಲಬುರಗಿ

ನಗರದ ಮುನಿಮ್ ಸಂಘ ಸಿದ್ದಲಿಂಗೇಶ್ವರ ದೇವಸ್ಥಾನದ ಹತ್ತಿರ ಸಿದ್ದರಾಮ ಎಂಬುವರ ಮನೆಯ ಎದುರುಗಡೆ ಖುಲ್ಲಾ ಜಾಗದಲ್ಲಿ ಜೂಜಾಟವಾಡಲಾಗುತ್ತಿದೆ ಎಂಬ ಮಾಹಿತಿ ಮೇಲೆ ಸಿಸಿಬಿ ಘಟಕದ ಪಿಐ ದಿಲೀಪಕುಮಾರ ಬಿ.ಸಾಗರ, ಸಿಬ್ಬಂದಿಗಳಾದ ರವೀಂದ್ರಕುಮಾರ, ಮೃತ್ಯುಂಜಯ, ಶ್ರೀಶೈಲ, ಅಶೋಕ ಕಟಕೆ, ಯಲ್ಲಪ್ಪ, ನಾಗರಾಜ, ಸುನೀಲಕುಮಾರ ಅವರು ದಾಳಿ ನಡೆಸಿ ನಾಲ್ವರನ್ನು ಬಂಧಿಸಿದ್ದಾರೆ.

ಮಹಾಂತೇಶ ಮೇತ್ರಿ, ಜಗನ್ನಾಥ ಜಮಾದಾರ, ಯಶ್ವಂತರಾಯ ಪಂಡ್ರಿ, ಸಿದ್ದರಾಮ ಗಂಗಾಣಿ ಎಂಬುವವರನ್ನು ಬಂಧಿಸಿ 8,320 ರೂ.ನಗದು, 52 ಇಸ್ಪಿಟ್ ಎಲೆಗಳನ್ನು ಜಪ್ತಿ ಮಾಡಿದ್ದಾರೆ. ಚೌಕ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

# ಶಿಷ್ಯವೇತನಕ್ಕೆ ಅರ್ಜಿ ಆಹ್ವಾನ

• ಉದಯವಾಹಿನಿ ಚಿತ್ರದುರ್ಗ

IISc, IIT ಮತ್ತು NIT ಸಂಸ್ಥೆಗಳ ಮೂಲಕ Artificial intelligence and machine learing ವೃತ್ತಿಪರ ತರಬೇತಿ ಕೋರ್ಸಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ಶಿಷ್ಯವೇತನ, ತರಬೇತಿ ನೀಡುವ ಸಂಬಂಧ ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಏ.25 ಅರ್ಜಿ ಸಲ್ಲಿಸಲು ಕೊನೆಯ ದಿನವಾಗಿದೆ. ಸರ್ಕಾರದ ಆದೇಶದಂತೆ IISc, IIT ಮತ್ತು NIT ಸಂಸ್ಥೆಗಳ ಮೂಲಕ Artificial intelligence and machine learing ವ್ಯಕ್ತಿಪರ ತರಬೇತಿ ಕೋರ್ಸಗಳಲ್ಲಿ ಭಾಗವಹಿಸುವ ಪರಿಶಿಷ್ಟ ಪಂಗಡದ 200 ಇಂಜಿನಿಯರಿಂಗ್ ಪದವೀಧರರಿಗೆ ರೂ.15,000/-ಗಳ ಶಿಷ್ಯವೇತನ ನೀಡಲಾಗುವುದು. ಅರ್ಜಿ ನಮೂನೆಗಳನ್ನು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳ ಕಚೇರಿ, ಚಿತ್ರದುರ್ಗ ಇಲ್ಲಿ ಪಡೆಯಬಹುದು. ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08194-225427ಗೆ ಸಂಪರ್ಕಿಸಬಹುದು ಎಂದು ಜಿಲ್ಲಾ ಪರಿಶಿಷ್ಟ ವರ್ಗಗಳ ಕಲ್ಯಾಣಾಧಿಕಾರಿಗಳು ತಿಳಿಸಿದ್ದಾರೆ.

# ಬಸವ ಜಯಂತಿ ಆಚರಣೆಗೆ ಸಿದ್ದತೆ

• ಉದಯವಾಹಿನಿ ಬಳ್ಳಾರಿ

ಸಾಂಸ್ಕೃತಿಕ ನಾಯಕ ಬಸವೇಶ್ವರರ ಜಯಂತಿಯನ್ನು ನಗರದಲ್ಲಿ ಸಂಭ್ರಮದಿಂದ ಆಚರಿಸಲು ಸಿದ್ದತೆ ನಡೆಯುತ್ತಿದೆ.

ಈ ಸಂಬಂಧ ನಿನ್ನೆ ನಗರದ ಬಾಲ ರಿಜೆನ್ಸಿ ಹೊಟೆಲ್ ನಲ್ಲಿ ಅಭಿನವ ಸಿದ್ದಲಿಂಗ ಶಿವಾಚಾರ್ಯ ಸ್ವಾಮಿಗಳು ಪಂಚವಣಿಗೆ ಹಿರೇಮಠ ಹಾಗು ಕಮ್ಮರಚೇಡು ಸಂಸ್ಥಾನ ಮಠದ ಕಲ್ಯಾಣ ಮಹಾಸ್ವಾಮಿಗಳ ಸಾನಿಧ್ಯದಲ್ಲಿ ನಡೆದ ಸಭೆಯಲ್ಲಿ ನಗರ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಅಲ್ಲಂ ಪ್ರಶಾಂತ್ ಮಾತನಾಡಿ ನಗರದ ಕೆಇಬಿ ಬಳಿಯ ವೃತ್ತಕ್ಕೆ ಬಸವೇಶ್ವರ ಸರ್ಕಲ್ ಎಂದು ನಾಮಕರಣ ಮಾಡಲು ಪಾಲಿಕೆ ನಿರ್ಣಯ ತೆಗೆದುಕೊಂಡಿದೆ. ಇಲ್ಲಿ ಅಶ್ವಾರೋಹಿ ಬಸವಣ್ಣನ ವಿಗ್ರಹ ಪ್ರತಿಷ್ಠಾಪನೆಗೆ ನಮ್ಮ ಬಂಧುಗಳಾದ ಗಡಗಿ ಕುಟುಂಬಸ್ಥರ ಸ್ಥಳದಲ್ಲಿ ಅವಕಾಶ ಕಲ್ಪಿಸಲಿದೆ. ಮುಂದಿನ ವರ್ಷ ಈ ವೃತ್ತದಿಂದಲೇ ಬಸವಣ್ಣನ ಭಾವಚಿತ್ರದ ಮೆರವಣಿಗೆ ಆರಂಭಿಸೋಣ ಎಂದರು.

## • ಭಾವಸಾರ ಕ್ಷತ್ರಿಯ ಸಮಾಜದಿಂದ ನಗರಸಭೆ ಅಧ್ಯಕ್ಷರಿಗೆ ದಿಂಡಿ ಉತ್ಸವ ಸಮಾರಂಭಕ್ಕೆ ಆಹ್ವಾನ
# ಶ್ರೀ ಪಾಂಡುರಂಗ ರುಕುಮಾಯಿ ಅವರ 88ನೇ ವರ್ಷದ ಅದ್ದೂರಿ ಮಹೋತ್ಸವ

• ಉದಯವಾಹಿನಿ ಅರಸೀಕೆರೆ

ಅರಸೀಕೆರೆ ನಗರದಲ್ಲಿರುವ ಶ್ರೀ ಪಾಂಡುರಂಗ ರುಕುಮಾಯಿ ಅವರ 88ನೇ ವರ್ಷದ ಅದ್ದೂರಿ ಮಹೋತ್ಸವ ಸಮಾರಂಭವನ್ನು ಮೇ. 1ನೇ ತಾರೀಕು ಮತ್ತು ಎರಡನೇ ತಾರೀಕು ಹಮ್ಮಿಕೊಳ್ಳಲಾಗಿದೆ ಎಂದು ಅರಸೀಕೆರೆ ತಾಲ್ಲೂಕು ಭಾವಸಾರ ಕ್ಷತ್ರಿಯ ದೈವ ಮಂಡಳಿಯ ಅಧ್ಯಕ್ಷರು ಮತ್ತು ಕಾರ್ಯಕಾರಿ ಸಮಿತಿ ಸದಸ್ಯರು ತಿಳಿಸಿದ್ದಾರೆ

ಮೇ 1ನೇ ತಾರೀಖಿನಂದು ಗುರುವಾರ ಸಂಜೆ 6 ಗಂಟೆಗೆ ಶ್ರೀ ಸಂತ ಸಾಮ್ರಾಟ ಜ್ಞಾನದೇವರ ವಿರಚಿತ ಶ್ರೀ ಜ್ಞಾನೇಶ್ವರಿ ಗ್ರಂಥದ ಪೋತಿ ಸ್ಥಾಪನೆ ನಂತರ ಸಂಜೆ 7 ಗಂಟೆಗೆ ಕೀರ್ತನೆ ಶ್ರೀ ಹ ಭ ಪ ಬಾನು ದಾಸ್ ಸರ್ವದೇ ಬಂಕಾಪುರ ಇವರಿಂದ ಕೀರ್ತನೆಯನ್ನು ಏರ್ಪಡಿಸಲಾಗಿದೆ.


ನಂತರ ದಿನಾಂಕ 2 ಎರಡರಂದು ಶುಕ್ರವಾರ ಎಸ್ ಎಸ್ ಎಲ್ ಸಿ ಪಿಯುಸಿ ಡಿಗ್ರಿ, ಇಂಜಿನಿಯರಿಂಗ್ ನಲ್ಲಿ ಅತಿ ಹೆಚ್ಚು ಅಂಕ ಪಡೆದು ತೇರ್ಗಡೆಯಾದ ವಿದ್ಯಾರ್ಥಿ ವಿದ್ಯಾರ್ಥಿನಿಯರಿಗೆ ಪ್ರತಿಭಾ ಪುರಸ್ಕಾರವನ್ನು ಹಮ್ಮಿಕೊಳ್ಳಲಾಗಿದೆ ಎಂದು ತಿಳಿಸಿದರು. ಶುಕ್ರವಾರ ಬೆಳಗ್ಗೆ 5:00ಯಿಂದ 6:30ವರೆಗೆ ಕಾಕಡಾರತಿ ನಂತರ ಒಂಬತ್ತು ಗಂಟೆಯಿಂದ 11 ಗಂಟೆವರೆಗೆ ಶ್ರೀ ಪಂಡರಿ ಸಾಂಪ್ರದಾಯಿಕ ಭಜನೆಯನ್ನು ಮತ್ತು ಮಧ್ಯಾಹ್ನ ಶ್ರೀ ಪಾಂಡುರಂಗ ರುಕುಮಾಯಿ ಯವರ ಕೀರ್ತನೆ ನಂತರ ಸಂಜೆ 5:30 ಯಿಂದ ರಾತ್ರಿ 8 ಗಂಟೆಯವರೆಗೆ ಅರಸೀಕೆರೆಯ ನಗರದ ರಾಜಬೀದಿಗಳಲ್ಲಿ ಶ್ರೀ ಪಾಂಡುರಂಗ ರುಕುಮಾಯಿ ಅವರ ಉತ್ಸವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ


ಉದಯವಾಹಿನಿ ಚಿತ್ರ

### ನಗರ ಸಭೆ ಅಧ್ಯಕ್ಷರಿಗೆ ಆಹ್ವಾನ

ದಿಂಡಿ ಉತ್ಸವ ಸಮಾರಂಭದಲ್ಲಿ ಪಾಲ್ಗೊಳ್ಳುವಂತೆ ಭಾವಸಾರ ಕ್ಷತ್ರಿಯ ಸಮಾಜದ ಬಾಂಧವರು ನಗರಸಭೆಯ ಅಧ್ಯಕ್ಷರಾದ ಎಮ್ ಶಮಿವುಲ್ಲಾ ರವರಿಗೆ ಆಹ್ವಾನ ಪತ್ರಿಕೆಯನ್ನು ನೀಡಿದರು. ನಗರ ಸಭೆ ಅಧ್ಯಕ್ಷರಾದ ಎಂ ಶಮಿವುಲ್ಲಾ ರವರು ಮಾತನಾಡಿ ಶಾಸಕರು ಹಾಗೂ ಗೃಹ ಮಂಡಳಿ ಅಧ್ಯಕ್ಷರಾದ ಕೆಎಂ ಶಿವಲಿಂಗೇಗೌಡ ರೊಂದಿಗೆ ಚರ್ಚಿಸಿ ಶ್ರೀ ಪಾಂಡುರಂಗ ರುಕುಮಾಯಿ ದೇವಸ್ಥಾನದ ಬಾಕಿ ಇರುವ ಕೆಲಸಕಾರ್ಯಗಳಿಗೆ ಸರ್ಕಾರದಿಂದ ಹಣ ಕೊಡಿಸಲು ಶಾಸಕರಿಗೆ ಮನವಿ ಮಾಡುತ್ತೇನೆಂದು ಎಂ ಶಮೀವುಲ್ಲಾ ತಿಳಿಸಿದರು.

ನಂತರ ರಾತ್ರಿ 10 ಗಂಟೆಗೆ ಶ್ರೀ ಪಾಂಡುರಂಗ ರುಕುಮಾರಿಯವರ ಶಯೋತ್ಸವ ಕಾರ್ಯಕ್ರಮವು ಅದ್ದೂರಿಯಾಗಿ ಜರುಗಲಿದ್ದು ಬೆಂಗಳೂರು ಬಂಕಾಪುರ ಭದ್ರಾವತಿ ಶಿವಮೊಗ್ಗ ಸೇರಿದಂತೆ ರಾಜ್ಯದ ಮೂಲೆ ಮೂಲೆಗಳಿಂದ ಶ್ರೀ ಯವರ ದಿಂಡಿ ಉತ್ಸವಕ್ಕೆ ಭಜನಾ ಮಂಡಳಿಯವರು ಭಾಗವಹಿಸಲಿದ್ದಾರೆ ಎಂದು ಭಾವಸಾರ ಕ್ಷತ್ರಿಯ ಸಮಾಜದ ಅಧ್ಯಕ್ಷರು ಮತ್ತು ಕಾರ್ಯಕಾರಿ ಸಮಿತಿ ಸದಸ್ಯರು ತಿಳಿಸಿದ್ದಾರೆ.



ಸಮಾರಂಭದಲ್ಲಿ ಅರಸೀಕೆರೆ ಕ್ಷೇತ್ರದ ಶಾಸಕರು ಹಾಗೂ ರಾಜ್ಯ ಗೃಹ ಮಂಡಳಿ ಅಧ್ಯಕ್ಷರಾಗಿರುವ ಕೆಎಂ ಶಿವಲಿಂಗೇಗೌಡರು. ನಗರ ಯೋಜನಾ ಪ್ರಾಧಿಕಾರದ ಅಧ್ಯಕ್ಷರಾದ ಬಿಎಸ್ ಅರುಣ್ ಕುಮಾರ್ ನಗರಸಭೆ ಅಧ್ಯಕ್ಷರಾದ ಎಮ್ ಶಮಿವುಲ್ಲಾ. ಹಾಗೂ ನಗರಸಭೆ ಉಪಾಧ್ಯಕ್ಷರಾದ ಮನೋಹರ್ ಮೇಸ್ತ್ರಿ ಸೇರಿದಂತೆ ಹಲವಾರು ಭಾಗವಹಿಸಲಿದ್ದಾರೆಂದು ಅರಸೀಕೆರೆ ಭಾವಸಾರ ಕ್ಷತ್ರಿಯ ದೈವ ಮಂಡಳಿಯ ಅಧ್ಯಕ್ಷರಾದ ನರೇಶ್ ನಾಜರೇ. ಉಪಾಧ್ಯಕ್ಷರಾದ ನಾರಾಯಣರಾವ್ ಗೌರವ ಅಧ್ಯಕ್ಷರಾದ ಸಂಡಿಗೆ ಕೃಷ್ಣಮೂರ್ತಿ ಕಾರ್ಯದರ್ಶಿ ಹೇಮಂತ್ ಕುಮಾರ್. ಕರ್ನಾಟಕ ಸ್ಟೇಟ್ ಟೈಲರ್ ಸೂಜಿಯೇ ಷನ್ ಅಧ್ಯಕ್ಷರಾದ ಲಕ್ಷ್ಮಣ್ ರಾವ್. ಸಮಾಜದ ಮುಖಂಡರಾದ ರಾಜೇಶ್. ಹಾಗೂ ಕಾರ್ಯಕಾರಿ ಸಮಿತಿ ಸದಸ್ಯರು ತಿಳಿಸಿದ್ದಾರೆ.

### ಅಮೆರಿಕದ ಬಾಸ್ಟನ್‌ನಲ್ಲಿ ಭಾರತೀಯ ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಪ್ರಶ್ನೆಗಳನ್ನು ಕೇಳಿದ ರಾಹುಲ್ ಗಾಂಧಿ

# ಸರಕಾರದ ಜತೆ ಚುನಾವಣಾ ಆಯೋಗ ರಾಜಿ: ರಾಹುಲ್ ಗಾಂಧಿ ಆರೋಪ

**ನ್ಯೂಯಾರ್ಕ್:** ವಿದೇಶ ಪ್ರವಾಸದಲ್ಲಿದ್ದಾಗ ಕೇಂದ್ರ ಸರಕಾರದ ವಿರುದ್ಧ ವಾಗ್ದಾಳಿ ನಡೆಸುವ ಪರಿಪಾಠವನ್ನು ಲೋಕಸಭೆ ಪ್ರತಿಪಕ್ಷ ರಾಹುಲ್ ಗಾಂಧಿ ಮುಂದುವರಿಸಿದ್ದು, ಕೆಲವು ಒತ್ತಡಗಳಿಗೆ ಮಣಿದು ಚುನಾವಣಾ ಆಯೋಗವು ಸರಕಾರದ ಜತೆ ರಾಜಿ ಮಾಡಿಕೊಂಡಿದೆ ಎಂದು ಆರೋಪಿಸಿದ್ದಾರೆ.

ಅಮೆರಿಕದ ಬಾಸ್ಟನ್ ನಗರಕ್ಕೆ ಭೇಟಿ ನೀಡಿರುವ ರಾಹುಲ್ ಗಾಂಧಿ ಅವರು ಕಾರ್ಯಕ್ರಮವೊಂದರಲ್ಲಿ ಭಾರತದ ಚುನಾವಣಾ ಆಯೋಗದ (ಇಸಿಐ) ಕಾರ್ಯವೈಖರಿ ಬಗ್ಗೆ ಆಕ್ಷೇಪ ಎತ್ತಿದ್ದಾರೆ. ಮಹಾರಾಷ್ಟ್ರದಲ್ಲಿನ ವಯಸ್ಕ ಜನಸಂಖ್ಯೆಗಿಂತ ಹೆಚ್ಚಿನ ಮತದಾರರು ವಿಧಾನಸಭೆ ಚುನಾವಣೆಯಲ್ಲಿ ಮತ ಚಲಾಯಿಸಿದ್ದಾರೆ. ಇದು ಹೇಗೆ ಸಾಧ್ಯ? ವಿಧಾನಸಭೆ ಚುನಾವಣೆ ದಿನ ಸಂಜೆ 5.30ರ ಹೊತ್ತಿಗೆ ಚುನಾವಣಾ ಆಯೋಗವು ನಮಗೆ ಮತದಾನದ ವಿವರಗಳನ್ನು ಆಯೋಗವು ನೀಡಿತು. ಆ ಬಳಿಕ 5.30 ರಿಂದ 7.30ರ ನಡುವೆ 65 ಲಕ್ಷ ಮತದಾರರು ಹಕ್ಕು ಚಲಾಯಿಸಿದ್ದಾರೆ ಎಂದು ವರದಿಯಾಗಿದೆ. ಇದು ವಾಸ್ತವವಾಗಿ ಕಷ್ಟಸಾಧ್ಯ, ಎಂದು ರಾಹುಲ್ ಅವರು ಆಯೋಗದ ಕಾರ್ಯಶೈಲಿಯ ಬಗ್ಗೆ ಅನುಮಾನ ವ್ಯಕ್ತಪಡಿಸಿದ್ದಾರೆ. ಒಬ್ಬ ವ್ಯಕ್ತಿಯ ಮತದಾನಕ್ಕೆ ಸರಾಸರಿಯಾಗಿ ಕನಿಷ್ಠ 3 ನಿಮಿಷಗಳು ಬೇಕು. 65 ಲಕ್ಷ ಮತದಾರರು ಮತ ಚಲಾಯಿಸಿದ್ದರೆ, ಆ ದಿನ ನಸುಕಿನ 2 ಗಂಟೆಯವರೆಗೆ ಮತದಾನ ನಡೆಯಬೇಕಿತ್ತು. ಈ ತರಹದ್ದು ಕೂಡ ನಡೆಯಲಿಲ್ಲ, ಎಂದು ತಮ್ಮ ಆರೋಪಕ್ಕೆ ರಾಹುಲ್ ಗಾಂಧಿ ಸಮರ್ಥನೆ ನೀಡಿದ್ದಾರೆ.

2024ರ ಮಹಾರಾಷ್ಟ್ರ ವಿಧಾನಸಭಾ ಚುನಾವಣೆಯಲ್ಲಿ ಚುನಾವಣಾ ಆಯೋಗವು ಮತದಾರರ ಪಟ್ಟಿಯನ್ನು ಮನಬಂದಂತೆ ಮಾರ್ಪಡಿಸಿದೆ ಎಂದು ಕಾಂಗ್ರೆಸ್, ಶಿವಸೇನೆ ಹಾಗೂ ಎನ್‌ಸಿಪಿ ಮೈತ್ರಿಯ ಮಹಾವಿಕಾಸ್ ಅಘಾಡಿ' ಆರೋಪಿಸಿತ್ತು. ಆದರೆ, ಈ ಆರೋಪವನ್ನು 'ದಾರಿ ತಪ್ಪಿಸುವ ಯತ್ನ' ಎಂದು ಆಯೋಗವು ತಳ್ಳಿಹಾಕಿತ್ತು. ವಿದೇಶಿ ಮಣ್ಣಿನಲ್ಲಿನಿಂತು ಭಾರತವನ್ನು ಅವಮಾನಿಸುವುದು ರಾಹುಲ್ ಗಾಂಧಿ ಅವರ ಹಳೆ ಚಾಳಿಯಾಗಿದೆ. ಬಹಳ ವರ್ಷಗಳಿಂದ ಇದನ್ನೇ ಮಾಡುತ್ತಿದ್ದಾರೆ. 50 ಸಾವಿರ ರೂ. ಮೊತ್ತದ ಜಾಮೀನು ಪಡೆದು ಹೊರಗೆ ಸುತ್ತಾಡುತ್ತಿರುವವರು ವಿಶ್ವದ ಅತ್ಯುನ್ನತ ಪ್ರಜಾಪ್ರಭುತ್ವದ ಘನತೆಗೆ ಧಕ್ಕೆ ಉಂಟುಮಾಡುತ್ತಿದ್ದಾರೆ ಎಂದು ಬಿಜೆಪಿ ಸಂಸದ ಸಂಬಿತ್ ಪಾತ್ರಾ ಕಿಡಿಕಾರಿದ್ದಾರೆ. ರಾಹುಲ್ ಗಾಂಧಿ ಅವರು ಎರಡು ದಿನಗಳ ಅಮೆರಿಕ ಪ್ರವಾಸದಲ್ಲಿದ್ದು, ಈ ವೇಳೆ ಹಲವು ಕಾರ್ಯಕ್ರಮಗಳಲ್ಲಿ ಭಾಷಣ, ಸಂವಾದ ಮಾಡಲಿದ್ದಾರೆ.

- ಅಮೆರಿಕದ ಬಾಸ್ಟನ್‌ನಲ್ಲಿ ಭಾರತೀಯ ಚುನಾವಣಾ ಆಯೋಗದ ಕಾರ್ಯವೈಖರಿ ಕುರಿತು ಪ್ರಶ್ನೆಗಳನ್ನು ಕೇಳಿದ ರಾಹುಲ್ ಗಾಂಧಿ
- ಮಹಾರಾಷ್ಟ್ರ ವಿಧಾನಸಭೆ ಚುನಾವಣೆಯಲ್ಲಿ ಮತದಾರರ ಸಂಖ್ಯೆಯ ಅಸಮಾನತೆ ಬಗ್ಗೆ ಆಕ್ಷೇಪ
- ವಿದೇಶದಲ್ಲಿ ಭಾರತದ ರಾಜಕೀಯ ವಿಚಾರಗಳ ಬಗ್ಗೆ ಮಾತನಾಡಿದ ರಾಹುಲ್ ಗಾಂಧಿಯನ್ನು ಟೀಕಿಸಿದ ಬಿಜೆಪಿ

> ಪ್ರಧಾನಿ ಮೋದಿ ಅವರ ವಿರುದ್ಧ ವಾಗ್ದಾಳಿ ನಡೆಸುವ ಭರದಲ್ಲಿ ಕೆಲವರು ದೇಶದ ವಿರುದ್ಧ ಕೂಡ ವಿಷಕಾರಲು ಶುರು ಮಾಡಿದ್ದಾರೆ. ಇದು ಬಹಳ ದುರದೃಷ್ಟಕರ. -ಶೆಹಜಾದ್ ಪೂನಾವಾಲಾ, ಬಿಜೆಪಿ ವಕ್ತಾರ



**ಅಸಮಾನತೆ ಬಗ್ಗೆ ಆಕ್ಷೇಪ**

**ಮೋದಿ ಅವರಿಂದಲೇ ಕಲಿತಿದ್ದು**

ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಅವರು ಬಾಸ್ಟನ್‌ನಲ್ಲಿ ಚುನಾವಣಾ ಆಯೋಗದ ಬಗ್ಗೆ ಶಂಕೆ ವ್ಯಕ್ತಪಡಿಸಿದ ಬೆನ್ನಿಗೇ ಮುಂಬಯಿನಲ್ಲಿ ಸುದ್ದಿಗೋಷ್ಠಿ ನಡೆಸಿದ ಎಐಸಿಸಿ ಮಾಧ್ಯಮ ವಿಭಾಗದ ವಕ್ತಾರ ಪವನ್ ಖೇರಾ, ಭಾರತೀಯ ಚುನಾವಣಾ ಆಯೋಗದ (ಇಸಿಐ) ಕಾರ್ಯವೈಖರಿ ಬಗ್ಗೆ ನಮಗೆ ಅನೇಕ ಸಂದೇಹಗಳಿವೆ. ಮತದಾನದ ದಿನದಂದು ಕೊನೆಯ ಒಂದು ಗಂಟೆಯಲ್ಲಿ ಶೇ. 10 ರಿಂದ 13ರಷ್ಟು ಹೆಚ್ಚಳವು ವಾಸ್ತವದಲ್ಲಿ ಸಾಧ್ಯವಿಲ್ಲ. ನಮ್ಮ ಅನುಮಾನಗಳಿಗೆ ಆಯೋಗವು ಸೂಕ್ತ ಪ್ರತಿಕ್ರಿಯೆ ನೀಡಬೇಕು. ಬಿಜೆಪಿ ಕೂಡ ಈ ಕುರಿತು ಮಾತನಾಡಬೇಕು. ವಿದೇಶಿ ನೆಲದಲ್ಲಿ ಭಾರತದ ರಾಜಕೀಯ ವಿಚಾರಗಳ ಬಗ್ಗೆ ಚರ್ಚಿಸುವುದನ್ನು ನಾವು ಪ್ರಧಾನಿ ಮೋದಿ ಅವರಿಂದಲೇ ಕಲಿತಿದ್ದೇವೆ ಎಂದು ಖೇರಾ ತಿರುಗೇಟು ನೀಡಿದ್ದಾರೆ.

### ನಟಿ ಕಾದಂಬರಿ ಜೇತ್ವಾನಿ ದಾಖಲಿಸಿದ್ದ ಕಿರುಕುಳ ಪ್ರಕರಣದಲ್ಲಿ

## ಹಿರಿಯ ಐಪಿಎಸ್ ಅಧಿಕಾರಿ ಆಂಜನೇಯುಲು ಅರೆಸ್ಟ್

**ಹೈದರಾಬಾದ್:** ಮುಂಬೈ ಮೂಲದ ನಟಿ ಕಾದಂಬರಿ ಜೇತ್ವಾನಿ ಅವರು ದಾಖಲಿಸಿರುವ ಕಿರುಕುಳ ಪ್ರಕರಣ ಸಂಬಂಧ, ಹಿರಿಯ ಐಪಿಎಸ್ ಅಧಿಕಾರಿ ಮತ್ತು ಆಂಧ್ರಪ್ರದೇಶದ ಮಾಜಿ ಗುಪ್ತಚರ ಮುಖ್ಯಸ್ಥ ಪಿಎಸ್‌ಆರ್ ಆಂಜನೇಯುಲು ಅವರನ್ನು ಸಿಐಡಿ ಅಧಿಕಾರಿಗಳು ಬಂಧಿಸಿದ್ದಾರೆ. ಆಂಜನೇಯುಲು ಅವರನ್ನು ಹೈದರಾಬಾದ್‌ನಲ್ಲಿರುವ ಅವರ ನಿವಾಸದಿಂದ ಕಸ್ಟಡಿಗೆ ತೆಗೆದುಕೊಳ್ಳಲಾಗಿದ್ದು ಹೆಚ್ಚಿನ ತನಿಖೆಗಾಗಿ ಆಂಧ್ರಪ್ರದೇಶಕ್ಕೆ ವರ್ಗಾಯಿಸಲಾಗಿದೆ.

ಆಂಧ್ರಪ್ರದೇಶದ ಮಾಜಿ ಮುಖ್ಯಮಂತ್ರಿ ಜಗನ್ಮೋಹನ್ ರೆಡ್ಡಿ ಅವರ ಅಧಿಕಾರಾವಧಿಯಲ್ಲಿ ಆಂಧ್ರಪ್ರದೇಶದ ಪೊಲೀಸರು ಕಿರುಕುಳ ನೀಡಿದ್ದರೆಂದು ಆರೋಪಿಸಿ ನಟಿ ಕಾದಂಬರಿ ಜೇತ್ವಾನಿ ಈ ಹಿಂದೆ ದೂರು ದಾಖಲಿಸಿದ್ದರು. ವೈಎಸ್‌ಆರ್ ಕಾಂಗ್ರೆಸ್ ಮುಖಂಡರೊಬ್ಬರು ಮಾಡಿದ ಭೂ ಹಗರಣದ ಆರೋಪದಿಂದ ಈ ಪ್ರಕರಣವು ಬೆಳಕಿಗೆ ಬಂದಿತ್ತು. ಕಳೆದ ವರ್ಷ ನಟಿ ಮತ್ತು ಅವರ ಕುಟುಂಬ ಸದಸ್ಯರನ್ನು ಬಂಧಿಸಲು ಕಾರಣವಾಗಿತ್ತು. ಬಂಧನದ ನಂತರ ಜೇತ್ವಾನಿ ಅವರು ಮೂವರು ಹಿರಿಯ ಐಪಿಎಸ್ ಅಧಿಕಾರಿಗಳಾದ ಪಿಎಸ್‌ಆರ್ ಅಂಜನೇಯುಲು, ಕಂಠಿ ರಾಣಾ ಟಾಟಾ ಮತ್ತು ವಿಶಾಲ್ ಗುನ್ನಿ ವಿರುದ್ಧ ದುರ್ವತ್ರನೆ ಆರೋಪಿಸಿದ್ದರು. ತನ್ನ ಬಂಧನ ಅಕ್ರಮ ಮತ್ತು ಇದರಲ್ಲಿ ಅಧಿಕಾರಿಗಳು ಭಾಗಿಯಾಗಿದ್ದಾರೆ. ಮತ್ತು ಮುಂಬೈನಲ್ಲಿ ಕಾರ್ಪೊರೇಟ್ ಕಾರ್ಯನಿರ್ವಾಹಕರ ವಿರುದ್ಧ ಈ ಹಿಂದೆ ದಾಖಲಿಸಿದ್ದ ಪ್ರಕರಣವನ್ನು ಹಿಂಪಡೆಯುವಂತೆ ಆಂಜನೇಯುಲು ಬೆದರಿಕೆ ಹಾಕಿದ್ದಾರೆ ಎಂದು ಅವರು ಆರೋಪಿಸಿದ್ದರು.



ಕಾರ್ಯನಿರ್ವಾಹಕರು ಆಂಧ್ರಪ್ರದೇಶದಲ್ಲಿ ರಾಜಕೀಯ ಪ್ರಭಾವ ಬಳಸಿಕೊಂಡು ತನ್ನ ಬಂಧನವನ್ನು ಸಂಘಟಿಸಲು ಮತ್ತು ತನ್ನ ಸಾರ್ವಜನಿಕ ಪ್ರತಿಷ್ಠೆಯನ್ನು ಹಾಳುಮಾಡಿದ್ದಾರೆ ಎಂದು ದೂರಿದ್ದರು. ಹೀಗಾಗಿ ಆಂಧ್ರಪ್ರದೇಶದ ಪೊಲೀಸರು ಆಂತರಿಕ ತನಿಖೆಯನ್ನು ಪ್ರಾರಂಭಿಸಿದ್ದರು.

ಇದು 1992, 2004 ಮತ್ತು 2010ರ ಐಪಿಎಸ್ ಬ್ಯಾಚ್‌ಗಳ ದುರ್ವತ್ರನೆ ಮತ್ತು ಕರ್ತವ್ಯಲೋಪಕ್ಕಾಗಿ ಅಧಿಕಾರಿಗಳನ್ನು ಅಮಾನತುಗೊಳಿಸಿತ್ತು. ಆ ಸಮಯದಲ್ಲಿ ರಾಜ್ಯ ಗುಪ್ತಚರ ಮುಖ್ಯಸ್ಥರಾ ಗಿದ್ದ ಆಂಜನೇಯುಲು ಅವರು ಅಧಿಕೃತ ಎಫ್‌ಐಆರ್ ಇಲ್ಲದೆ ನಟಿಯ ಬಂಧನಕ್ಕೆ ನಿರ್ದೇಶನ ನೀಡುವ ಮೂಲಕ ತಮ್ಮ ಅಧಿಕೃತ ಸ್ಥಾನವನ್ನು ದುರುಪಯೋಗಪಡಿಸಿಕೊಂಡಿದ್ದಾರೆ ಎಂದು ವರದಿಯಾಗಿದೆ.

## ಡೆಲ್ಟಾ ವಿಮಾನದ ಎರಡೂ ಎಂಜಿನ್‌ಗೆ ಬೆಂಕಿ

**ಫ್ಲೋರಿಡಾ:** ಅಮೆರಿಕದಲ್ಲಿ ಸಂಭಾವ್ಯ ಭೀಕರ ವಿಮಾನ ದುರಂತವೊಂದು ಕೂದಲೆಳೆ ಅಂತರದಲ್ಲಿ ತಪ್ಪಿದ್ದು, 282 ಪ್ರಯಾಣಿಕರಿದ್ದ ಡೆಲ್ಟಾ ವಿಮಾನದ ಎರಡೂ ಎಂಜಿನ್ ಗೆ ಬೆಂಕಿ ಹೊತ್ತಿದ ಘಟನೆ ವರದಿಯಾಗಿದೆ.

(ಸ್ಥಳೀಯ ಸಮಯ) ಒರ್ಲ್ಯಾಂಡೊ ಅಂತರಾಷ್ಟ್ರೀಯ ವಿಮಾನ ನಿಲ್ದಾಣದಲ್ಲಿ ಡೆಲ್ಟಾ ಏರ್ ಲೈನ್ಸ್ ವಿಮಾನ ಟೇಕ್ ಆಫ್ ಆಗುವಾಗ ವಿಮಾನದ ಎರಡೂ ಎಂಜಿನ್ ಗೆ ಬೆಂಕಿ ಹೊತ್ತಿಕೊಂಡಿದೆ.

ಇದನ್ನು ಗಮನಿಸಿದ ಪೈಲಟ್ ಕೂಡಲೇ ವಿಮಾನವನ್ನು ನಿಲ್ಲಿಸಿದ್ದು, ನಂತರ ಪ್ರಯಾಣಿಕರನ್ನು ತುರ್ತು ಸ್ಲೈಡ್‌ಗಳ ಮೂಲಕ ಸ್ಥಳಾಂತರಿಸಲಾಗಿದೆ. ಫೆಡರಲ್ ಏವಿಯೇಷನ್ ಅಡ್ಮಿನಿಸ್ಟ್ರೇಷನ್ ಮತ್ತು ಡೆಲ್ಟಾ ಏರ್ ಲೈನ್ಸ್ ಅನ್ನು ಉಲ್ಲೇಖಿಸಿ ಸಿಎನ್‌ಎನ್ ಈ ವರದಿ ಮಾಡಿದೆ.

ಅಟ್ಲಾಂಟಾಗೆ ತೆರಳುತ್ತಿದ್ದ ವಿಮಾನವು ರನ್‌ವೇಗೆ ಹೊರಟಾಗ ಎರಡು ಎಂಜಿನ್‌ಗಳಲ್ಲಿ ಒಂದು ಬೆಂಕಿಗೆ ಆಹುತಿಯಾಯಿತು. ಟರ್ಮಿನಲ್‌ನಲ್ಲಿ ಪ್ರಯಾಣಿಕರೊಬ್ಬರ ತಮ್ಮ ಸೆಲ್‌ಫೋನ್ ನಲ್ಲಿ ಈ ವಿಡಿಯೋ ಸೆರೆ ಹಿಡಿದಿದ್ದು, ವಿಮಾನದ ಬಲ ಎಂಜಿನ್‌ನಿಂದ ಜ್ವಾಲೆ ಹೊರಬರುತ್ತಿರುವ ವಿಡಿಯೋ ವೈರಲ್ ಆಗಿದೆ. ಇನ್ನು ಘಟನೆಯ ಬಗ್ಗೆ ಎಫ್‌ಎಎ ತನಿಖೆಯನ್ನು ಪ್ರಾರಂಭಿಸಿದೆ.

ವಿಮಾನದಲ್ಲಿ 282 ಪ್ರಯಾಣಿಕರಿದ್ದರು, ಅದೃಷ್ಟವಶಾತ್, ಯಾವುದೇ ಗಾಯಗಳು ವರದಿಯಾಗಿಲ್ಲ. ವಿಮಾನದ ಎರಡು ಎಂಜಿನ್‌ಗಳಲ್ಲಿ ಒಂದರ ಟೈಲ್ ಪೈಪ್‌ನಲ್ಲಿ ಜ್ವಾಲೆಗಳು ಕಂಡುಬಂದಾಗ ಡೆಲ್ಟಾ ವಿಮಾನ ಸಿಬ್ಬಂದಿ ಪ್ರಯಾಣಿಕರ ಕ್ಯಾಬಿನ್ ಅನ್ನು ಸ್ಥಳಾಂತರಿಸಲು ಕಾರ್ಯ ವಿಧಾನಗಳನ್ನು ಅನುಸರಿಸಿದರು ಎಂದು ಸಿಎನ್‌ಎನ್ ವರದಿ ಮಾಡಿದೆ.



**ಸ್ವಲ್ಪದರಲ್ಲೇ ತಪ್ಪಿದ ಮಹಾ ದುರಂತ**

## ಮಾಧ್ಯಮ ಕ್ಷೇತ್ರದ ಬಿರುಗಾಳಿಯಾಗಲಿದೆ ವೇವ್ಸ್

**ಭೋಪಾಲ್:** ವಿಶ್ವ ಆಡಿಯೊ ವಿಶುವಲ್ ಮತ್ತು ಮನರಂಜನಾ ಶೃಂಗಸಭೆ (ವೇವ್ಸ್) ಮಾಧ್ಯಮ ಸೃಷ್ಟಿಕರ್ತರಿಗೆ ದೊಡ್ಡ ಅವಕಾಶವಾಗಿದೆ ಎಂದು ಕೇಂದ್ರ ಸಚಿವ ಎಲ್ ಮುರುಗನ್ ಹೇಳಿದ್ದಾರೆ.

ಮೇ 1 ರಿಂದ 4 ರವರೆಗೆ ಮುಂಬೈನಲ್ಲಿ ನಡೆಯಲಿರುವ ಶೃಂಗಸಭೆಯಲ್ಲಿ ವೇವ್ಸ್ ಬಜಾರ್ ಮತ್ತು ಸಿಇಒ ರೌಂಡ್ ಟೇಬಲ್‌ನಂತಹ ಕಾರ್ಯಕ್ರಮಗಳು ಇರಲಿವೆ ಎಂದು ಕೇಂದ್ರ ಮಾಹಿತಿ ಮತ್ತು ಪ್ರಸಾರ ಮತ್ತು ಸಂಸದೀಯ ವ್ಯವಹಾರಗಳ ರಾಜ್ಯ ಸಚಿವರು ತಿಳಿಸಿದ್ದಾರೆ. ಪ್ರಧಾನಿ ನರೇಂದ್ರ ಮೋದಿಯವರ ಮಾರ್ಗದರ್ಶನದಲ್ಲಿ, ಸೃಷ್ಟಿಕರ್ತ ಆರ್ಥಿಕತೆಯ ಕ್ಷೇತ್ರದಲ್ಲಿ ಕೆಲಸ ಮಾಡುವ ಸೃಷ್ಟಿಕರ್ತರಿಗೆ ವೇವ್ಸ್ ಒಂದು ದೊಡ್ಡ ಅವಕಾಶವಾಗಿದೆ. ಮುದ್ರಣ. ಮಾಧ್ಯಮ, ಉಪಗ್ರಹ ಟಿವಿ ಚಾನೆಲ್ ಗಳು, ಡಿಜಿಟಲ್ ಮಾಧ್ಯಮ, ಒಟಿಟಿ ಪ್ಲಾಟ್ ಫಾರ್ಮ್‌ಗಳು ಮತ್ತು ಚಲನಚಿತ್ರ ನಿರ್ಮಾಪಕರಿಗೆ ಇದು ದೊಡ್ಡ ಕಾರ್ಯಕ್ರಮವಾಗಿದೆ.

ಮಾಧ್ಯಮ ಮತ್ತು ಮನರಂಜನಾ ಕ್ಷೇತ್ರಕ್ಕೆ ಸಂಬಂಧಿಸಿದವರು ಈ ಸಮ್ಮೇಳನದಲ್ಲಿ ಒಟ್ಟುಗೂಡುತ್ತಾರೆ ಮತ್ತು ನಾಲ್ಕು ದಿನಗಳ ಕಾಲ ಸೃಜನಶೀಲತೆಯನ್ನು ಆಚರಿಸುತ್ತಾರೆ ಎಂದು ಅವರು ಹೇಳಿದರು.




ಭಾರತ ಮತ್ತು ವಿದೇಶಗಳ ಪ್ರಮುಖ ಉತ್ಪಾದನಾ ಕಂಪನಿಗಳು ವೇವ್ಸ್ ಶೃಂಗಸಭೆಯಲ್ಲಿ ಭಾಗವಹಿಸುತ್ತಿವೆ. ವೇವ್ಸ್ ಮೂಲಕ, ಇಡೀ ಜಗತ್ತು ಭಾರತೀಯ ತಂತ್ರಜ್ಞಾನ ಮತ್ತು ವಿಷಯ ರಚನೆಯ ಒಂದು ನೋಟವನ್ನು ನೋಡುತ್ತದೆ ಎಂದು ಅವರು ಹೇಳಿದರು. ನಂತರ ಮುರುಗನ್ ಅವರು ಮಧ್ಯ ಪ್ರದೇಶದ ಮುಖ್ಯಮಂತ್ರಿ ಮೋಹನ್ ಯಾದವ್ ಅವರನ್ನು ಭೇಟಿಯಾದರು.

## ಅಮೆರಿಕ ದಿಗ್ಗಜರೊಂದಿಗೆ ಹಣಕಾಸು ಸಚಿವೆ ನಿರ್ಮಲಾ ಮಾತುಕತೆ

**ನವದೆಹಲಿ:** ಸಚಿವೆ ನಿರ್ಮಲಾ ಸೀತಾರಾಮನ್ ಅವರು ಸ್ಯಾನ್ ಫ್ರಾನ್ಸಿಸ್ಕೋದಲ್ಲಿ ಹಲವಾರು ಹಿರಿಯ ಅಧಿಕಾರಿಗಳು ಮತ್ತು ಉದ್ಯಮಿಗಳನ್ನು ಭೇಟಿಯಾಗಿ ತಂತ್ರಜ್ಞಾನ, ಕೃತಕ ಬುದ್ಧಿಮತ್ತೆ, ಇಂಧನ ಮತ್ತು ಡಿಜಿಟಲ್ ಮೂಲಸೌಕರ್ಯದಂತಹ ಕ್ಷೇತ್ರಗಳಲ್ಲಿನ ಸಹಕಾರದ ದ್ವಿಪಕ್ಷೀಯ ಕ್ಷೇತ್ರಗಳು ಮತ್ತು ಭಾರತ ಮತ್ತು ಯುಎಸ್ ನಡುವಿನ ಹೂಡಿಕೆ ಸಹಯೋಗವನ್ನು ಹೆಚ್ಚಿಸುವ ಅವಕಾಶಗಳ ಬಗ್ಗೆ ಚರ್ಚಿಸಿದರು. ಕ್ಯಾಲಿಫೋರ್ನಿಯಾ ನಗರದಲ್ಲಿ ಭಾರತೀಯ ವಲಸಿಗರೊಂದಿಗೆ ಸಂವಾದದೊಂದಿಗೆ ಯುಎಸ್ ಮತ್ತು ಪೆರುಗೆ ತಮ್ಮ 11 ದಿನಗಳ ಪ್ರವಾಸವನ್ನು ಪ್ರಾರಂಭಿಸಿದ ಸೀತಾರಾಮನ್ ಭಾನುವಾರ ಸ್ಯಾನ್ ಫ್ರಾನ್ಸಿಸ್ಕೋಗೆ ಆಗಮಿಸಿದರು.

ನಿನ್ನೆ ಅವರು ವ್ಯಾಪಾರ ಮುಖಂಡರು ಮತ್ತು ಕಾರ್ಪೊರೇಟ್ ಕಾರ್ಯನಿರ್ವಾಹಕರೊಂದಿಗೆ ಹಲವಾರು ಸಭೆಗಳನ್ನು ನಡೆಸಿದರು. ಸಚಿವರು ಸಿಲಿಕಾನ್ ವ್ಯಾಲಿ ಸಾಹಸೋದ್ಯಮ ಬಂಡವಾಳ ಸಂಸ್ಥೆ 16 ಝಡ್ ಜನರಲ್ ಪಾರ್ಟ್ನರ್ ಅಂಜನಿ ಮಿಧಾ ಮತ್ತು ತಂತ್ರಜ್ಞಾನ ಕಂಪನಿ ವಿಎಂವೇರ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಘುರಾಮ್ ಅವರನ್ನು ಸ್ಯಾನ್ ಫ್ರಾನ್ಸಿಸ್ಕೊದಲ್ಲಿ ಭೇಟಿಯಾದರು. ಪ್ರಧಾನಿ ನರೇಂದ್ರ ಮೋದಿಯವರ ನಾಯಕತ್ವದಿಂದ ಪ್ರೇರಿತವಾದ ತಂತ್ರಜ್ಞಾನ ಕ್ಷೇತ್ರದಲ್ಲಿನ ಗಮನಾರ್ಹ ರೂಪಾಂತರದ ಬಗ್ಗೆ ಅವರು ಚರ್ಚಿಸಿದರು ಮತ್ತು 16 ಝಡ್ ಮತ್ತು ವಿಎಂವೇರ್ ಎಐ ವ್ಯಾಪ್ತಿಯಲ್ಲಿ ಕ್ಷೇತ್ರಗಳಲ್ಲಿ ಸಹಯೋಗವನ್ನು ಅನ್ವೇಷಿಸಲು ಬಯಸಬಹುದು ಎಂದು ಸಲಹೆ ನೀಡಿದರು.

ನೈಜ-ಪ್ರಪಂಚದ ಸಮಸ್ಯೆಗಳಿಗೆ ಪರಿಹಾರಗಳನ್ನು ಒದಗಿಸಲು 15 ಝಡ್ ಅನೇಕ ದೇಶಗಳಲ್ಲಿ ಮೂಲಸೌಕರ್ಯ ಮೀಸಲಾದ ವಲಯ ನಿಧಿಯ 16 ಕ್ಷೇತ್ರಗಳಲ್ಲಿ ಕಾರ್ಯನಿರ್ವಹಿಸುತ್ತಿದೆ ಎಂದು ಮಿಧಾ ಹೇಳಿದರು.



> ಶಿಕ್ಷಣ, ಆರೋಗ್ಯ ಮತ್ತು ಎಐ ಸೆಂಟರ್ ಆಫ್ ಎಕ್ಸಲೆನ್ಸ್ ಸೇರಿದಂತೆ, ಹಣಕಾಸು ಸಚಿವಾಲಯವು ಎಕ್ಸ್ ನಲ್ಲಿ ಪೋಸ್ಟ್ ನಲ್ಲಿ ತಿಳಿಸಿದೆ. ರಘುರಾಮ್ ಅವರು ಎಐ ಒಂದು ಕಾರ್ಯತಂತ್ರದ ಮೂಲಸೌಕರ್ಯವಾಗಿದೆ ಮತ್ತು ಎಐ ಕ್ಷೇತ್ರದಲ್ಲಿ ಭಾರತ ಮಾಡುತ್ತಿರುವ ಕೆಲಸ ಗೋಚರಿಸುತ್ತಿದೆ ಎಂದು ಹೇಳಿದರು.

## ಟ್ರಂಪ್ ಆಡಳಿತದ ವಿರುದ್ಧ ಕೇಸ್ ಹಾಕಿದ ಹಾರ್ವರ್ಡ್ ವಿಶ್ವವಿದ್ಯಾಲಯ

**ಬೋಸ್ಟನ್:** ಅನುದಾನ ಸ್ಥಗಿತ ವಿಚಾರಕ್ಕೆ ಸಂಬಂಧಿಸಿದಂತೆ ಹಾರ್ವರ್ಡ್ ವಿಶ್ವವಿದ್ಯಾಲಯ ಮತ್ತು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ನಡುವಿನ ಸಂಘರ್ಷ ತಾರಕಕ್ಕೇರಿದ್ದು, ಇದೀಗ ಹಾರ್ವರ್ಡ್ ವಿಶ್ವವಿದ್ಯಾಲಯ ಟ್ರಂಪ್ ಆಡಳಿತದ ವಿರುದ್ಧ ಮೊಕದ್ದಮೆ ದಾಖಲಿಸಲು ಮುಂದಾಗಿದೆ. ಟ್ರಂಪ್ ಆಡಳಿತ ಕ್ಯಾಂಪಸ್‌ನಲ್ಲಿ ಕ್ರಿಯಾಶೀಲತೆಯನ್ನು ಮಿತಿಗೊಳಿಸುವ ಬೇಡಿಕೆಗಳನ್ನು ಧಿಕ್ಕರಿಸುವುದಾಗಿ ಸಂಸ್ಥೆ ಹೇಳಿದ್ದ ಹಾರ್ವರ್ಡ್ ವಿಶ್ವವಿದ್ಯಾಲಯವು ಇದೀಗ 2.2 ಶತಕೋಟಿ ಡಾಲರ್ ಗಿಂತ ಹೆಚ್ಚಿನ ಅನುದಾನ ಸ್ಥಗಿತಗೊಳಿಸುವಿಕೆಯನ್ನು ನಿಲ್ಲಿಸಲು ಮೊಕದ್ದಮೆ ಹೂಡಿರುವುದಾಗಿ ಸೋಮವಾರ ಪ್ರಕಟಿಸಿದೆ. ಟ್ರಂಪ್ ಆಡಳಿತವು ಫೆಡರಲ್ ನಿಧಿಯನ್ನು ತಡೆಹಿಡಿಯುವ ಮೂಲಕ ಶೈಕ್ಷಣಿಕ ನಿರ್ಧಾರಗಳ ಮೇಲೆ ಹಿಡಿತ ಸಾಧಿಸಲು ಪ್ರಯತ್ನಿಸುತ್ತಿದೆ ಎಂದು ಆರೋಪಿಸಿ ಮ್ಯಾಸಚೂಸೆಟ್ಸ್ ನ್ಯಾಯಾಲಯದಲ್ಲಿ ಹಾರ್ವರ್ಡ್ ವಿವಿ ಮೊಕದ್ದಮೆ ಹೂಡಿದೆ. ಹಾರ್ವರ್ಡ್ ವಿಶ್ವವಿದ್ಯಾನಿಲಯವು ಹಣಕಾಸಿನ ನೆರವು ನೀಡದೆ ಶೈಕ್ಷಣಿಕ ನಿರ್ಧಾರಗಳ ಮೇಲೆ ಹಿಡಿತ ಸಾಧಿಸಲು ಪ್ರಯತ್ನಿಸುತ್ತಿದೆ ಎಂದು ಮೊಕದ್ದಮೆಯಲ್ಲಿ ಹೇಳಲಾಗಿದೆ. ಟ್ರಂಪ್ ಆಡಳಿತವು ಗುರಿಯಾಗಿಸಿಕೊಂಡಿರುವ ಇತರ ಶಿಕ್ಷಣ ಸಂಸ್ಥೆಗಳ ಹೆಸರನ್ನು ಸಹ ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಹಾರ್ವರ್ಡ್ ವಿಶ್ವವಿದ್ಯಾಲಯಕ್ಕೆ ನೀಡುತ್ತಿದ್ದ 2.2 ಬಿಲಿಯನ್ ಡಾಲರ್ ಫೆಡರಲ್ ನಿಧಿಯನ್ನು ಕಡಿತಗೊಳಿಸಿದ್ದಾರೆ ಎಂದು ತಿಳಿದುಬಂದಿದೆ.




**ಅನುದಾನ ಸ್ಥಗಿತ**

ಹಾರ್ವರ್ಡ್ ವಿಶ್ವವಿದ್ಯಾನಿಲಯವು ಹಣವನ್ನು ಸ್ಥಗಿತಗೊಳಿಸಲು, ಫೆಡರಲ್ ಅನುದಾನಗಳ ಮೇಲೆ ವಿಧಿಸಲಾದ ಷರತ್ತುಗಳನ್ನು ಕಾನೂನುಬಾಹಿರವೆಂದು ಘೋಷಿಸಲು ಮತ್ತು ಟ್ರಂಪ್ ಆಡಳಿತವು ಹಾರ್ವರ್ಡ್‌ನ ವೆಚ್ಚಗಳನ್ನು ಭರಿಸುವಂತೆ ಆದೇಶಿಸಲು ಪ್ರಯತ್ನಿಸುತ್ತಿದೆ. ಹಾರ್ವರ್ಡ್ ವಿಶ್ವವಿದ್ಯಾಲಯಕ್ಕೆ ಶ್ವೇತಭವನವು ಹಲವಾರು ನಿಯಮಗಳನ್ನು ಹೊರಡಿಸಿದೆ ಎಂದು ತಿಳಿದಿದೆ.

## ಅಪ್ರಾಪ್ತ ಬಾಲಕಿ ಅಪಹರಿಸಿ, ಸಾಮೂಹಿಕ ಅತ್ಯಾಚಾರ

**ರೂರ್ಕೆಲಾ:** ಮೂವರು ದುಷ್ಕರ್ಮಿಗಳು 15 ವರ್ಷದ ಬಾಲಕಿಯನ್ನು ಹಳ್ಳಿಯ ರಸ್ತೆಯಿಂದ ವಾಹನದಲ್ಲಿ ಅಪಹರಿಸಿ, ಒಡಿಶಾದ ರೂರ್ಕೆಲಾದಿಂದ ಸುಮಾರು 130 ಕಿ.ಮೀ ದೂರದಲ್ಲಿರುವ ತಲ್ಸಾರಾ ಪ್ರದೇಶದ ಕಾಡಿನಲ್ಲಿ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ ಎಂದು ಆರೋಪಿಸಲಾಗಿದೆ.

ಈ ಘಟನೆ ಏಪ್ರಿಲ್ 21 ಮತ್ತು ಏ. 22ರ ಮಧ್ಯರಾತ್ರಿ ನಡೆದಿದ್ದು, ಮೌಖಿಕ ದೂರಿನ ಆಧಾರ ಮೇಲೆ ಮೂವರು ಆರೋಪಿಗಳನ್ನು ತಕ್ಷಣವೇ ವಶಕ್ಕೆ ಪಡೆಯಲಾಯಿತು, ಅವರು ತಪ್ಪೊಪ್ಪಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಪ್ರಾಥಮಿಕ ತನಿಖೆಯ ಪ್ರಕಾರ, ಏಪ್ರಿಲ್ 21 ರಂದು ತಡರಾತ್ರಿ ನಡೆದ ಕಾರ್ಯಕ್ರಮವೊಂದರಲ್ಲಿ ಭಾಗವಹಿಸಿದ್ದ ಸಂತ್ರಸ್ತ ಬಾಲಕಿ ಇತರ ಇಬ್ಬರು ಅಪ್ರಾಪ್ತ ಬಾಲಕಿಯರೊಂದಿಗೆ ತಮ್ಮ ಮನೆಗಳಿಗೆ ನಡೆದುಕೊಂಡು ಹೋಗುತ್ತಿದ್ದಾರೆ ಅಪಹರಿಸಿದ್ದಾರೆ ಎಂದು ಸುಂದರಗಢ ಎಸ್ಪಿ ಪ್ರತ್ಯೂಷ್ ದಿವಾಕರ್ ಅವರು ಹೇಳಿದ್ದಾರೆ.

ಇಬ್ಬರು ಯುವಕರು ಮತ್ತು ಇಬ್ಬರು ಬಾಲಕಿಯರು ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದು, ಸಂತ್ರಸ್ತ ಬಾಲಕಿಯನ್ನು ಬಲವಂತವಾಗಿ ವಾಹನದಲ್ಲಿ ಕರೆದೊಯ್ಯಲಾಯಿತು ಎಂದು ದಿವಾಕರ್ ತಿಳಿಸಿದ್ದಾರೆ.

ನಂತರ, ಹತ್ತಿರದ ಕಾಡಿನಲ್ಲಿ ಆಕೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿ, ಬಳಿಕ ನಿರ್ಜನ ಸ್ಥಳದಲ್ಲಿ ಬಿಟ್ಟು ಹೋಗಿದ್ದಾರೆ ಎಂದು ಅವರು ಹೇಳಿದ್ದಾರೆ.

### ● ನಮ್ಮ ಸಂಸತ್ ಸರ್ವೋಚ್ಚವಾಗಿದೆ. ಇದು ದೇಶದ ಪ್ರತಿಯೊಬ್ಬ ಪ್ರಜೆಯ ಮುಖವಾಣಿಯಾಗಿದೆ

# ಸಂಸತ್ ಅತಿಕ್ರಮಣ ಮಾಡಲು ಸಾಧ್ಯವಿಲ್ಲ : ಮತ್ತೆ ಗುಡುಗಿದ ಧನ್ಕರ್

**ನವದೆಹಲಿ:** ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಸಂಸತ್ತೇ ಪರಮೋಚ್ಚ. ಇದರ ಮೇಲೆ ಆಕ್ರಮಣ ನಡೆಸುವುದಾಗಲಿ ಇಲ್ಲವೇ ಒತ್ತುವರಿ ಮಾಡಿಕೊಳ್ಳಲು ಯಾರಿಂದಲೂ ಸಾಧ್ಯವಿಲ್ಲ ಎಂದು ಉಪರಾಷ್ಟ್ರಪತಿ ಉಪರಾಷ್ಟ್ರಪತಿ ಜಗದೀಶ್ ಧನ್ಕರ್ ಮತ್ತೆ ನ್ಯಾಯಾಂಗದ ವಿರುದ್ಧವೇ ಗುಡುಗಿದ್ದಾರೆ.

ಕೆಲವು ದಿನಗಳ ಹಿಂದೆ ನ್ಯಾಯಾಂಗದ ಕಾರ್ಯವೈಖರಿ ಕುರಿತು ಬಹಿರಂಗವಾಗಿಯೇ ಅಸಮಾಧಾನ ಹೊರ ಹಾಕಿದ್ದ ಧನ್ಕರ್, ಸಂಸತ್ ಮೇಲೆ ನ್ಯಾಯಾಂಗದ ಅತಿಕ್ರಮಣವನ್ನು ಮತ್ತೆ ಕಟುವಾಗಿ ಟೀಕಿಸಿದ್ದರು. ದೆಹಲಿ ವಿಶ್ವವಿದ್ಯಾನಿಲಯದ ಕಾರ್ಯಕ್ರಮವೊಂದರಲ್ಲಿ ಮಾತನಾಡಿದ ಅವರು, ಸಂಸತ್ ಸರ್ವೋಚ್ಚವಾಗಿದೆ. ಇಲ್ಲಿ ಜನಪ್ರತಿನಿಧಿಗಳು, ಮಾಸ್ಟರ್‌ರಸಗಳು ಸಂಸತ್‌ನ್ನು ಅತಿಕ್ರಮಣ ಮಾಡುವುದಾಗಲಿ ಒತ್ತುವರಿ ಮಾಡಿಕೊಳ್ಳಲು ಯಾರಿಂದಲೂ ಸಾಧ್ಯವಿಲ್ಲ ಎಂದು ಪರೋಕ್ಷವಾಗಿ ಸುಪ್ರೀಂಕೋರ್ಟ್ ವಿರುದ್ಧವೂ ಕಿಡಿಕಾರಿದರು. ಜನಪ್ರತಿನಿಧಿಗಳೇ ಅಂತಿಮ ಯಜಮಾನರು ಎಂಬುದನ್ನು ಯಾರೂ ಮರೆಯಬಾರದು. ಚುನಾವಣೆಗಳ ಮೂಲಕ ಸಾರ್ವಜನಿಕ ಪ್ರತಿನಿಧಿಗಳು ಸಂಸತ್‌ಗೆ ಉತ್ತರದಾಯಿಗಳಾಗಿದ್ದಾರೆ. ಈ ಹಿಂದೆ ದೇಶದಲ್ಲಿ ತುರ್ತು ಪರಿಸ್ಥಿತಿ ಹೇರಿದ್ದ ಅಂದಿನ ಪ್ರಧಾನಿಯನ್ನೇ ಹೊಣೆಗಾರರನ್ನಾಗಿ ಮಾಡಿತ್ತು.

ಪ್ರಜಾಪ್ರಭುತ್ವವು ಜನರಿಗಾಗಿ ಮತ್ತು ಅದನ್ನು ರಕ್ಷಿಸುವ ಭಂಡಾರವಾಗಿದೆ. ಇದು ಚುನಾಯಿತ ಪ್ರತಿನಿಧಿಗಳದ್ದು ಎಂದು ಒತ್ತಿ ಹೇಳಿದರು.

ನಮ್ಮ ಸಂಸತ್ ಸರ್ವೋಚ್ಚವಾಗಿದೆ. ಇದು ದೇಶದ ಪ್ರತಿಯೊಬ್ಬ ಪ್ರಜೆಯ ಮುಖವಾಣಿಯಾಗಿದೆ. ನಾವು ಅದರ ರಕ್ಷಕರಾಗಿ ಕೆಲಸ ಮಾಡುತ್ತಿದ್ದೇವೆ. ಮಾಜಿ ಪ್ರಧಾನಿ ದಿವಂಗತ ಇಂದಿರಾಗಾಂಧಿ ಅವರು ಹೇರಿದ್ದ ತುರ್ತು ಪರಿಸ್ಥಿತಿ ಹೇರಿಕೆ ಸಂದರ್ಭದಲ್ಲಿ ಮೂಲಭೂತ ಹಕ್ಕುಗಳನ್ನು ಹೇಗೆ ಅಮಾನತುಗೊಳಿಸಾಯಿತು ಎಂಬುದು ನಮ್ಮ ಕಣ್ಣ ಮುಂದೆಯೇ ಇದೆ. ದೇಶದ 9 ಹೈಕೋರ್ಟ್‌ಗಳು ನೀಡಿದ್ದ ತೀರ್ಪುಗಳನ್ನು ತಳ್ಳಿ ಹಾಕಲಾಗಿತ್ತು. ಮೂಲಭೂತ ಹಕ್ಕುಗಳ ಅಮಾನತಿನ ಪರವಾಗಿ ಸುಪ್ರೀಂಕೋರ್ಟ್ ಹೇಗೆ ತೀರ್ಪು ನೀಡಿತ್ತು ಎಂಬುದನ್ನು ಸಹ ಉಪರಾಷ್ಟ್ರಪತಿಗಳು ಸರಿಸಿಕೊಂಡರು.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಎಂದಿಗೂ ಮೂಲಭೂತ ಹಕ್ಕುಗಳನ್ನು ತಡೆ ಹಿಡಿಯಲು ಆಗುವುದಿಲ್ಲ. ಆದರೆ ಸುಪ್ರೀಂಕೋರ್ಟ್ ಮಧ್ಯಪ್ರವೇಶ ಮಾಡಲು 20 ತಿಂಗಳು ಬೇಕಾಯಿತು. ಒಂದು ವೇಳೆ ದೇಶದ ಜನ ತುರ್ತು ಪರಿಸ್ಥಿತಿ ಹೋಗಲಾಡಿಸಲು ಬೀದಿಗಿಳಿದಿದ್ದರೆ ಇದು ಸಾಧ್ಯವಿತ್ತೇ ಎಂದು ಪ್ರಶ್ನೆ ಮಾಡಿದರು.

ಕಾನೂನು ಮಾಡುವ ಅಧಿಕಾರ ಸಂಸತ್‌ಗಿದೆ, ಹೀಗಾಗಿಯೇ ಸಂಸತ್‌ನಲ್ಲಿ ಶಾಸಕಾಂಗಕ್ಕೆ ತನ್ನದೇ ಆದ ಅಧಿಕಾರವಿರುತ್ತದೆ. ಆದರೆ ನ್ಯಾಯಾಂಗವು ಕೆಲವು ವಿಷಯಗಳಲ್ಲಿ ಸೂಪರ್ ಮಿಸೇಲ್‌ನಂತೆ ವರ್ತನೆ ಮಾಡುತ್ತದೆ ಎಂದು ಕೆಲವು ದಿನಗಳ ಹಿಂದೆ ಧನ್ಕರ್ ನ್ಯಾಯಾಲಯದ ಕಾರ್ಯವೈಖರಿ ವಿರುದ್ಧ ಬಹಿರಂಗವಾಗಿಯೇ ವಾಗ್ದಾಳಿ ನಡೆಸಿದ್ದಾರೆ.

> ನಾವು ಸಂವಿಧಾನ ದಿನ ಆಚರಣೆ ಮತ್ತು ಸಂವಿಧಾನ ಹತ್ಯಾ ದಿವಸ್ ಏಕೆ ಆಚರಿಸುತ್ತೇವೆ? 1949ರಲ್ಲಿ ಸಂವಿಧಾನವನ್ನು ನಾವು ಅಂಗೀಕರಿಸಿದ್ದೆವು. 1975ರಲ್ಲಿ ತುರ್ತು ಪರಿಸ್ಥಿತಿ ಘೋಷಣೆ ಮಾಡಲಾಗಿತ್ತು. ಪ್ರಜಾತಂತ್ರ ವ್ಯವಸ್ಥೆಯಲ್ಲಿ ಹಾಗೂ ಮಾನವ ಇತಿಹಾಸದಲ್ಲಿ ಇದನ್ನು ನಾವು ಕರಾಳ ದಿನವೆಂದು ಕರೆಯುತ್ತೇವೆ. ಏಕೆಂದರೆ ನ್ಯಾಯಾಲಯ ಮಧ್ಯಪ್ರವೇಶ ಮಾಡದಿದ್ದರೆ ನಾವು ಈಗಲೂ ಅದೇ ಸ್ಥಿತಿಯಲ್ಲಿ ಇರಬೇಕಿತ್ತೆಂದು ಹೇಳಿದರು -ಧನ್ಕರ್

**ನ್ಯಾಯಾಂಗದ ವಿರುದ್ಧವೇ ಗುಡುಗು**

> ನ್ಯಾಯಾಲಯದ ಮಧ್ಯಪ್ರವೇಶದ ಬಗ್ಗೆ ಮಾತನಾಡಿದರೆ ಕೆಲವರು ಆರೋಪಗಳನ್ನು ಮಾಡುತ್ತಾರೆ. ಇತ್ತೀಚೆಗೆ ಪಶ್ಚಿಮ ಬಂಗಾಳದಲ್ಲಿ ನಡೆದ ಹಿಂಸಾಚಾರ ಕುರಿತು ರಾಷ್ಟ್ರಪತಿ ಆಳ್ವಿಕೆಗೆ ಕೆಲವರು ಒತ್ತಡ ಹಾಕಿದ್ದರು. ಇದರ ಬಗ್ಗೆ ಮಾತನಾಡಿದರೆ ನಾವು ನ್ಯಾಯಾಲಯವನ್ನು ಅತಿಕ್ರಮಣ ಮಾಡಿದ್ದೇವೆ ಎಂದು ಮಾತನಾಡಿದ್ದಾರೆ. ಇದು ಎಷ್ಟರ ಮಟ್ಟಿಗೆ ಸರಿ? ಜನರೇ ಇದನ್ನು ತೀರ್ಮಾನಿಸಬೇಕೆಂದು ಹೇಳಿದರು. ನ್ಯಾಯಾಲಯದ ಬಗ್ಗೆ ನಮಗೆ ಅಪಾರವಾದ ಗೌರವವಿದೆ. ಎಲ್ಲಿಯೂ ನ್ಯಾಯಾಂಗದ ಬಗ್ಗೆ ನಾವು ಮಾತನಾಡುತ್ತಿಲ್ಲ. ಆದರೆ ವ್ಯವಸ್ಥೆಯೊಳಗಿನ ದೋಷದ ಬಗ್ಗೆ ಮಾತನಾಡಿದರೆ ಅದು ಅತಿಕ್ರಮಣವಾಗಲು ಸಾಧ್ಯವೇ ಎಂದು ಪರೋಕ್ಷವಾಗಿ ಧನ್ಕರ್ ಹೇಳಿಕೆಯನ್ನು ಉಲ್ಲೇಖ ಮಾಡಿದರು.





## ಮಿನಿ ನ್ಯೂಸ್

### ಏ.26ರಂದು ಪೋಪ್ ಫ್ರಾನ್ಸಿಸ್ ಅಂತ್ಯಕ್ರಿಯೆ

**ವ್ಯಾಟಿಕನ್ ಸಿಟಿ:** ಪೋಪ್ ಫ್ರಾನ್ಸಿಸ್ ಅವರ ಅಂತ್ಯಕ್ರಿಯೆ ಶನಿವಾರ ನಡೆಯಲಿದೆ ಎಂದು ವ್ಯಾಟಿಕನ್ ಪ್ರಕಟಣೆಯಲ್ಲಿ ತಿಳಿಸಿದೆ. ಅಂತ್ಯಕ್ರಿಯೆಯ ವಿಧಿ ವಿಧಾನಗಳನ್ನು ಶನಿವಾರ ಬೆ.10 ಗಂಟೆಗೆ ರೋಮ್‌ನ ಬೆಸಿಲಿಕಾ ಆಫ್ ಸೇಂಟ್ ಮೇರಿ ಮೇಜರ್‌ನಲ್ಲಿ ನಡೆಸಲು ಕಾರ್ಡಿನಲ್‌ಗಳ ಸಭೆಯಲ್ಲಿ ನಿರ್ಧರಿಸಲಾಗಿದೆ ಎಂದು ತಿಳಿಸಿದೆ.

ಈ ವೇಳೆ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್, ಉಕ್ರೇನ್ ಅಧ್ಯಕ್ಷ ವ್ಯಾದಿಮಿರ್ ಝುಲೆನ್ಸ್ಕಿ ಸೇರಿದಂತೆ ಜಾಗತಿಕ ನಾಯಕರು ಭಾಗಿಯಾಗುವ ನಿರೀಕ್ಷೆ ಇದೆ. ಅಂತ್ಯಕ್ರಿಯೆ ಪ್ರಕ್ರಿಯೆಯಲ್ಲಿ ಭಾಗಿಯಾಗಲು ಮತ್ತು ಉತ್ತರಾಧಿಕಾರಿಯನ್ನು ಆಯ್ಕೆ ಮಾಡಲು ಪ್ರಸ್ತುತ ಎಲ್ಲಾ ಕಾರ್ಡಿನಲ್‌ಗಳು ರೋಮ್‌ನಲ್ಲಿ ಸೇರಿದ್ದಾರೆ. ಅಂತ್ಯಕ್ರಿಯೆಗೂ ಮುನ್ನ ಬುಧವಾರ ಬೆಳಿಗ್ಗೆ ಸೇಂಟ್ ಪೀಟರ್ಸ್ ಬೆಸಿಲಿಕಾದಲ್ಲಿ ಪಾರ್ಥಿವ ಶರೀರವನ್ನು ಸಾರ್ವಜನಿಕ ದರ್ಶನಕ್ಕಾಗಿ ಇಡಲು ನಿರ್ಧರಿಸಲಾಗಿದೆ. ಸದ್ಯ ಫ್ರಾನ್ಸಿಸ್ ಅವರ ಮೃತದೇಹವನ್ನು ಸಾಂತಾ ಮಾರ್ಟಾ ಪ್ರಾರ್ಥನಾ ಮಂದಿರದಲ್ಲಿ ಇಡಲಾಗಿದೆ. ಪೋಪ್ ಹುದ್ದೆಗೇರಿದ ನಂತರ 12 ವರ್ಷಗಳ ಕಾಲ ಫ್ರಾನ್ಸಿಸ್ ಅವರು ಇಲ್ಲಿ ತಂಗಿದ್ದರು.

ಅನಾರೋಗ್ಯದಿಂದ ಪೋಪ್ ಫ್ರಾನ್ಸಿಸ್ ಸೋಮವಾರ ತಮ್ಮ 88ನೇ ವಯಸ್ಸಿನಲ್ಲಿ ನಿಧನರಾದರು. 2013ರಲ್ಲಿ ಪೋಪ್ ಹುದ್ದೆಗೇರಿದ್ದ ಅವರು ಈ ಹುದ್ದೆಗೇರಿದ ಮೊದಲ ಲ್ಯಾಟಿನ್ ಅಮೆರಿಕನ್ ಆಗಿದ್ದರು.

### ಕೊಳಚೆ ನೀರಿನಲ್ಲಿ 5 ತಿಂಗಳ ಮಗುವಿನ ಶವ ಪತ್ತೆ

**ಥಾಣೆ:** ಮಹಾರಾಷ್ಟ್ರದ ಥಾಣೆ ನಗರದ ನುಲ್ಲಾ ಬಳಿ ಕೊಳಚೆ ನೀರಿನಲ್ಲಿ 5 ತಿಂಗಳ ಗಂಡು ಮಗುವ ಶವ ಪತ್ತೆಯಾಗಿದೆ. ಕಲ್ವಾ ವಾಘೋಬಾ ನಗರ ಪ್ರದೇಶದಲ್ಲಿ ತ್ಯಾಜ್ಯ ನೀರನ್ನು ಸಾಗಿಸುತ್ತಿದ್ದನುಲ್ಲಾ ಬಳಿ ಶಿಶುವಿನ ಶವವನ್ನು ದಾರಿಹೋಕರು ನೋಡಿ ಸ್ಥಳೀಯ ಪೊಲೀಸರಿಗೆ ಮಾಹಿತಿ ನೀಡಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಶವವನ್ನು ಮರಣೋತ್ತರ ಪರೀಕ್ಷೆಗಾಗಿ ಸರ್ಕಾರಿ ಆಸ್ಪತ್ರೆಗೆ ಕಳುಹಿಸಲಾಗಿದೆ ಮತ್ತು ತನಿಖೆ ಆರಂಭಿಸಲಾಗಿದೆ ಎಂದು ಅವರು ಹೇಳಿದರು. ಮೃತ ದೇಹವನ್ನು ರಹಸ್ಯವಾಗಿ ವಿಲೇವಾರಿ ಮಾಡುವ ಮೂಲಕ ಜನನವನ್ನು ಮರೆಮಾಚುವುದು ಅಡಿಯಲ್ಲಿ ಪೊಲೀಸರು ಅಪರಿಚಿತರ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ.

### ಬೈಕ್‌ಗೆ ಕಾರು ಡಿಕ್ಕಿ ಹೊಡೆದು ಮೂವರು ಯುವಕರ ಸಾವು

**ರೋಪ್ಲಾಸ್:** ಬೈಕ್‌ನಲ್ಲಿ ಮದುವೆಗೆ ಹೋಗುತ್ತಿದ್ದ ಮೂವರು ಯುವಕರಿಗೆ ವೇಗವಾಗಿ ಬಂದ ಕಾರು ಡಿಕ್ಕಿ ಹೊಡೆದ ಪರಿಣಾಮ ಸ್ಥಳದಲ್ಲೇ ಸಾವನ್ನಪ್ಪಿದ್ದ ಘಟನೆ ಬಿಹಾರದ ರೋಪ್ಲಾಸ್ ಜಿಲ್ಲೆಯಲ್ಲಿ ಸಂಭವಿಸಿದೆ. ತಡರಾತ್ರಿ ರಾಮನಗರ ದೇವಸ್ಥಾನದ ಬಳಿ ಈ ಅಪಘಾತ ಸಂಭವಿಸಿದೆ ಎಂದು ಪೊಲೀಸರು ತಿಳಿಸಿದ್ದಾರೆ. ಮೃತರನ್ನು ಮುಜಾನು ಗ್ರಾಮದ ನಿವಾಸಿ ಮಂತೋಷ್ ಕುಮಾರ್ (20), ಭೂರ್ ಕುಮಾರ್ (18) ಮತ್ತು ಸಜ್ಜನ್ ಕುಮಾರ್ (22) ಎಂದು ಗುರುತಿಸಲಾಗಿದೆ.

ಅವರು ಹೋಗುತ್ತಿದ್ದ ಬೈಕ್‌ಗೆ ವಿರುದ್ಧ ದಿಕ್ಕಿನಿಂದ ವೇಗವಾಗಿ ಬಂದ ಕಾರು ಡಿಕ್ಕಿ ಹೊಡೆದಿದೆ. ಮೂವರೂ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ನಂತರ ಕಾರಿನ ಚಾಲಕ ತಪ್ಪಿಸಿಕೊಳ್ಳುವಲ್ಲಿ ಯಶಸ್ವಿಯಾಗಿದ್ದಾರೆ ಎಂದು ನೋಖಾದ ಠಾಣೆಯ ದಿನೇಶ್ ಮಲಾಕರ್ ತಿಳಿಸಿದರು.

ಮುಂಜಾನೆ ಪೊಲೀಸರು ಕಾರನ್ನು ಪತ್ತೆ ಮಾಡಿ ವಶಪಡಿಸಿಕೊಂಡಿದ್ದಾರೆ ಮತ್ತು ಅದು ಸರ್ಕಾರಿ ಅಧಿಕಾರಿಯೊಬ್ಬರಿಗೆ ಸೇರಿದೆ ಎಂದು ಶಂಕಿಸಲಾಗಿದೆ. ಶವಗಳನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಲಾಗಿದೆ ಮತ್ತು ತನಿಖೆಗೆ ಆದೇಶಿಸಲಾಗಿದೆ ಎಂದು ಹೇಳಿದರು.

### ತರಬೇತಿ ವಿಮಾನ ಪತನ: ಪೈಲಟ್ ಸಾವು

**ಅಮ್ರೇಲಿ:** ಖಾಸಗಿ ವಿಮಾನಯಾನ ಅಕಾಡೆಮಿಗೆ ಸೇರಿದ ತರಬೇತಿ ವಿಮಾನವೊಂದು ವಸತಿ ಪ್ರದೇಶದಲ್ಲಿ ಪತನಗೊಂಡು ಬೆಂಕಿ ಹೊತ್ತಿಕೊಂಡ ಪರಿಣಾಮ ಓರ್ವ ಟ್ರೈನಿ ಪೈಲಟ್ ಸಾವನ್ನಪ್ಪಿರುವ ಘಟನೆ ಗುಜರಾತ್ ನ ಅಮ್ರೇಲಿಯಲ್ಲಿ ನಡೆದಿದೆ

ಮಂಗಳವಾರ ಮಧ್ಯಾಹ್ನ 12:30 ರ ಸುಮಾರಿಗೆ ಅಮ್ರೇಲಿ ಪಟ್ಟಣದ ಗಿರಿಯಾ ರಸ್ತೆಯ ವಸತಿ ಪ್ರದೇಶದಲ್ಲಿನ ಮರವೊಂದರ ಮೇಲೆ ಬಿದ್ದ ವಿಮಾನ ತದನಂತರ ನೆಲಕ್ಕೆ ಬಿದ್ದು ಪತನಗೊಂಡಿದೆ. ಇದಕ್ಕೆ ನಿಖರ ಕಾರಣ ತಿಳಿದುಬಂದಿಲ್ಲ. ಘಟನೆಯಲ್ಲಿ ಟ್ರೈನಿ ಪೈಲಟ್ ಸ್ಥಳದಲ್ಲೇ ಸಾವನ್ನಪ್ಪಿರುವುದಾಗಿ ಅಮ್ರೇಲಿ ಪೊಲೀಸ್ ವರಿಷ್ಠಾಧಿಕಾರಿ ಸಂಜಯ್ ಖಾರತ್ ತಿಳಿಸಿದ್ದಾರೆ. ಅಪಘಾತ ಸಂಭವಿಸಿದಾಗ ಪೈಲಟ್ ಒಬ್ಬರೇ ವಿಮಾನದಲ್ಲಿದ್ದರು ಎನ್ನಲಾಗಿದೆ. ವಿಮಾನ ಅಮ್ರೇಲಿ ವಿಮಾನ ನಿಲ್ದಾಣದಿಂದ ಟೇಕ್ ಆಫ್ ಆಗಿತ್ತು. ಶಾಸ್ತ್ರಿನಗರದ ಬಳಿ ಬಳಿ ಪತನಗೊಂಡ ನಂತರ ಅದಕ್ಕೆ ಬೆಂಕಿ ಹೊತ್ತಿಕೊಂಡಿದ್ದು, ಧಗಧಗನೆ ಹೊತ್ತಿ ಉರಿದಿದೆ ಎಂದು ಕಾರತ್ ಮಾಹಿತಿ ನೀಡಿದ್ದಾರೆ.

### ನಿಮ್ಮ ಅತಿ ದೊಡ್ಡ ಮಾರುಕಟ್ಟೆಗೆ ನಮಗೆ ಪ್ರವೇಶ ಕೊಡಿ: ಅಮೆರಿಕ ಉಪಾಧ್ಯಕ್ಷ



**ಜೈಪುರ:** ಭಾರತ ತನ್ನ ಮಾರುಕಟ್ಟೆಗಳಿಗೆ ಅಮೆರಿಕಾಗೆ ಹೆಚ್ಚಿನ ಪ್ರವೇಶ ವನ್ನು ನೀಡುವಂತೆ, ಹೆಚ್ಚಿನ ಅಮೆರಿಕನ್ ಇಂಧನ ಮತ್ತು ರಕ್ಷಣಾ ಯಂತ್ರಾಂಶಗಳನ್ನು ಖರೀದಿಸುವಂತೆ ಅಮೆರಿಕ ಉಪಾಧ್ಯಕ್ಷ ಕರೆ ನೀಡಿ ದ್ದಾರೆ. ಉಭಯ ದೇಶಗಳ ನಡುವಿನ ಬಲವಾದ ಸಂಬಂಧಗಳ ದೃಷ್ಟಿಕೋನವನ್ನು ಅವರು ಇದೇ ವೇಳೆ ವಿವರಿಸಿದರು. ಜೈಪುರದಲ್ಲಿ ನಡೆದ ಕಾರ್ಯಕ್ರಮವೊಂದರಲ್ಲಿ ಉದ್ಯಮಿಗಳನ್ನುದ್ದೇಶಿಸಿ ಮಾತನಾಡಿದ ವ್ಯಾನ್ಸ್, ಉನ್ನತ ತಂತ್ರಜ್ಞಾನ, ರಕ್ಷಣೆ, ವ್ಯಾಪಾರ ಮತ್ತು ಇಂಧನ ಸೇರಿದಂತೆ ವೈವಿಧ್ಯಮಯ ಕ್ಷೇತ್ರಗಳಲ್ಲಿ ಅಮೆರಿಕ ಮತ್ತು ಭಾರತ ಒಟ್ಟಾಗಿ ಸಾಧಿಸಬಹುದಾದದ್ದು ಬಹಳಷ್ಟಿದೆ ಎಂದು ಹೇಳಿದ್ದಾರೆ. ಭಾರತ ಮತ್ತು ಅಮೆರಿಕ ಎರಡೂ ಪಾಲುದಾರಿಕೆಯ ಆದ್ಯತೆಗಳ ಆಧಾರದ ಮೇಲೆ ದ್ವಿಪಕ್ಷೀಯ ವ್ಯಾಪಾರ ಒಪ್ಪಂದದೆಡೆಗೆ ಕೆಲಸ ಮಾಡುತ್ತಿವೆ ಎಂದು ಅವರು ಹೇಳಿದ್ದಾರೆ.

21 ನೇ ಶತಮಾನದ ಭವಿಷ್ಯ ಭಾರತ ಮತ್ತು ಅಮೆರಿಕದ ಬಲದಿಂದ ನಿರ್ಧರಿಸಲ್ಪಡುತ್ತದೆ ಎಂದು ಅವರು ಹೇಳಿದರು. ವ್ಯಾಪಾರ ಸಂಬಂಧಗಳು ನ್ಯಾಯಯುತತೆಯನ್ನು ಆಧರಿಸಿರಬೇಕು ಎಂದು ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ವ್ಯಾಪಾರ ಮತ್ತು ಸುಂಕದ ನೀತಿಯನ್ನು ಉಲ್ಲೇಖಿಸಿ ವ್ಯಾನ್ಸ್ ಹೇಳಿದ್ದಾರೆ.

ನಾವು ಉಜ್ವಲ ಹೊಸ ಜಗತ್ತನ್ನು ರಚಿಸಲು ಬಯಸುತ್ತೇವೆ, ಅಮೆರಿಕ ಮತ್ತು ಭಾರತ ಒಟ್ಟಾಗಿ ಸಾಧಿಸಬಹುದಾದದ್ದು ಬಹಳಷ್ಟಿದೆ ಎಂದು ನಾನು ನಂಬುತ್ತೇನೆ. ಮತ್ತು ಆ ನಿಟ್ಟಿನಲ್ಲಿ, ಇಂದು ನಾನು ಸಹಯೋಗದ ಕೆಲವು ಕ್ಷೇತ್ರಗಳ ಬಗ್ಗೆ ಮಾತನಾಡಲು ಬಯಸುತ್ತೇನೆ ಎಂದು ಹೇಳಿದ್ದು, ಭಾರತ ಮತ್ತು ಅಮೆರಿಕ ಹೇಗೆ ಒಟ್ಟಾಗಿ ಕೆಲಸ ಮಾಡಬಹುದು ಎಂಬುದನ್ನು ವಿವರಿಸಿದ್ದು, ಭೂಮಿಯ ಮೇಲಿನ ಯಾವುದೇ ರಾಷ್ಟ್ರದೊಂದಿಗೆ ನಾವು ಮಾಡುವುದಕ್ಕಿಂತ ಅಮೆರಿಕ ಭಾರತದೊಂದಿಗೆ ಹೆಚ್ಚಿನ ಮಿಲಿಟರಿ ವ್ಯಾಯಾಮಗಳನ್ನು ಮಾಡುತ್ತದೆ.

# ಸೋನು ನಿಗಮ್ ಹೆಸರಲ್ಲಿ ಮಹಾ ಮೋಸ



ಖ್ಯಾತ ಗಾಯಕ ಸೋನು ನಿಗಮ್ ಅವರ ಹೆಸರಿನಲ್ಲಿ ನಕಲಿ ಸಾಮಾಜಿಕ ಮಾಧ್ಯಮ ಖಾತೆಗಳು ಸೃಷ್ಟಿಯಾಗಿವೆ ಎಂದು ವರದಿಯಾಗಿದೆ. ಅವರ ಹೆಸರಿನಲ್ಲಿ ವಿವಾದಾತ್ಮಕ ಪೋಸ್ಟ್‌ಗಳನ್ನು ಹಂಚಿಕೊಳ್ಳಲಾಗುತ್ತಿದೆ. ಸೋನು ನಿಗಮ್ ಅವರು ಟ್ವಿಟರ್‌ನಲ್ಲಿ ಸಕ್ರಿಯರಾಗಿಲ್ಲ ಎಂದು ಹೇಳಿದ್ದಾರೆ. ಅವರು ತಮ್ಮ ಅಭಿಮಾನಿಗಳಿಗೆ ಈ ನಕಲಿ ಖಾತೆಗಳನ್ನು ವರದಿ ಮಾಡಲು ಮತ್ತು ಬ್ಲಾಕ್ ಮಾಡಲು ಮನವಿ ಮಾಡಿದ್ದಾರೆ. ಖ್ಯಾತ ಗಾಯಕ ಸೋನು ನಿಗಮ್ ಹೆಸರಲ್ಲಿ ಮೋಸ ನಡೆಯುತ್ತಿದೆ. ಆನ್‌ಲೈನ್‌ನಲ್ಲಿ ಅವರ ಹೆಸರನ್ನು ದುರ್ಬಳಕೆ ಮಾಡಿಕೊಳ್ಳಲಾಗುತ್ತಿದೆ. ಸೋನು ನಿಗಮ್ ಅವರು ಹಲವು ವರ್ಷಗಳಿಂದ ಟ್ವಿಟರ್‌ನಲ್ಲಿ ಆಯಕ್ಟೀವ್ ಆಗಿಲ್ಲ. ಆದಾಗ್ಯೂ ಅವರ ಹೆಸರಲ್ಲಿ ಖಾತೆ ತೆರೆಯಲಾಗಿದೆ. ಸೋನು ನಿಗಮ್ ಅವರ ನಿಜವಾದ ಖಾತೆ ಎಂದು ಬಿಂಬಿಸಿಕೊಳ್ಳುತ್ತಾ, ವಿವಾದಾತ್ಮಕ ವಿಚಾರಗಳನ್ನು ಪೋಸ್ಟ್ ಮಾಡಲಾಗುತ್ತಿದೆ. ಇದು ನಟನ ಗಮನಕ್ಕೆ ಬಂದಿದೆ. ಈ ಬಗ್ಗೆ ಇನ್‌ಸ್ಟಾಗ್ರಾಮ್‌ನಲ್ಲಿ ಅವರು ಎಚ್ಚರಿಕೆ ನೀಡಿದ್ದಾರೆ.



# ರಾಮ್ ಚರಣ್ ನಟನೆಯ 'ಪೆದ್ದಿ' ಸಿನಿಮಾ

ರಾಮ್ ಚರಣ್ ನಟನೆಯ 'ಪೆದ್ದಿ' ಸಿನಿಮಾದ ಟೀಸರ್ ಕೆಲ ದಿನಗಳ ಹಿಂದಷ್ಟೆ ಬಿಡುಗಡೆ ಆಗಿದೆ. ಟೀಸರ್‌ನಲ್ಲಿ ರಾಮ್ ಚರಣ್ ಹೊಡೆದ ಸಿಕ್ಸ್ ವೈರಲ್ ಆಗಿದೆ. ಆದರೆ 'ಪೆದ್ದಿ' ಸಿನಿಮಾದ ಕತೆಯನ್ನು ಬೇರೊಬ್ಬ ಸ್ಟಾರ್ ನಟನಿಗಾಗಿ ಮಾಡಲಾಗಿತ್ತು ಎಂಬ ಮಾತುಗಳು ಕೇಳಿ ಬರುತ್ತಿದೆ. 'ಆರ್‌ಆರ್‌ಆರ್' ಸಿನಿಮಾದಿಂದ ಗ್ಲೋಬಲ್ ಸ್ಟಾರ್ ಎನಿಸಿಕೊಂಡ ರಾಮ್ ಚರಣ್, ಆ ನಂತರ ಬಂದ 'ಗೇಮ್ ಚೇಂಜರ್' ಸಿನಿಮಾದಿಂದಾಗಿ ತೀವ್ರ ಹಿನ್ನಡೆ ಅನುಭವಿಸಿದ್ದಾರೆ. ಶಂಕರ್ ನಿರ್ದೇಶನದ 'ಗೇಮ್ ಚೇಂಜರ್' ಸಿನಿಮಾ ಫ್ಲಾಪ್ ಆಗಿದ್ದು, ಸ್ವತಃ ನಿರ್ಮಾಪಕರೇ ಸಿನಿಮಾ ಫ್ಲಾಪ್ ಎಂದು ಒಪ್ಪಿಕೊಂಡಿದ್ದಾರೆ. 'ಆರ್‌ಆರ್‌ಆರ್' ಸಿನಿಮಾದ ಬಳಿಕ ರಾಮ್ ಚರಣ್ ನಟಿಸಿದ ಎರಡು ಸಿನಿಮಾಗಳು ಫ್ಲಾಪ್ ಆಗಿದ್ದು, ಇದೀಗ ಮೂರನೇ ಸಿನಿಮಾದಲ್ಲಿ ರಾಮ್ ಚರಣ್ ನಟಿಸುತ್ತಿದ್ದು, ಸಿನಿಮಾ ನಿರೀಕ್ಷೆ ಮೂಡಿಸಿದೆ. ರಾಮ್ ಚರಣ್ ಇದೀಗ 'ಪೆದ್ದಿ' ಹೆಸರಿನ ಸಿನಿಮಾದಲ್ಲಿ ನಟಿಸುತ್ತಿದ್ದಾರೆ. ಸಿನಿಮಾ ಅನ್ನು ನಿರ್ದೇಶಕ ಬುಚ್ಚಿಬಾಬು ಸನಾ ನಿರ್ದೇಶನ ಮಾಡುತ್ತಿದ್ದಾರೆ. ಆದರೆ ಈ ಸಿನಿಮಾದ ಕತೆ ರಾಮ್ ಚರಣ್‌ಗಾಗಿ ಬರೆದಿದ್ದಲ್ಲ ಎಂಬ ಸುದ್ದಿ ಹರಿದಾಡುತ್ತಿದೆ. ಈ ಬಗ್ಗೆ ಸ್ವತಃ ಬುಚ್ಚಿಬಾಬು ಸನಾ ಸ್ಪಷ್ಟನೆ ನೀಡಿದ್ದಾರೆ. ಸಂದರ್ಶನವೊಂದರಲ್ಲಿ ಮಾತನಾಡಿರುವ ಬುಚ್ಚಿಬಾಬು ಸನಾ, 'ನಾನು 'ಪೆದ್ದಿ' ಸಿನಿಮಾದ ಕತೆ ಮೊದಲಿಗೆ ನಿರ್ದೇಶಕ ಸುಕುಮಾರ್ ಅವರಿಗೆ ಹೇಳಿದೆ. ಅವರಿಗೆ ಕತೆ ಬಹಳ ಇಷ್ಟವಾಯ್ತು. ಆ ಕತೆಯನ್ನು ರಾಮ್ ಚರಣ್‌ಗೆ ಹೇಳುವಂತೆ ಹೇಳಿ ಅವರೇ ಮೀಟಿಂಗ್ ಫಿಕ್ಸ್ ಮಾಡಿಸಿದರು. ಅದಾದ ಬಳಿಕ ನಾನು ರಾಮ್ ಚರಣ್ ಅವರಿಗೆ ಕತೆ ಹೇಳಿದೆ. ಅವರಿಗೆ ಕತೆ ಬಹಳ ಇಷ್ಟವಾಯ್ತು ಹೀಗೆ 'ಪೆದ್ದಿ' ಸಿನಿಮಾ ಶುರುವಾಯ್ತು' ಎಂದಿದ್ದಾರೆ ಬುಚ್ಚಿಬಾಬು ಸನಾ. ಬುಚ್ಚಿಬಾಬು ಸನಾ ಮೊದಲಿಗೆ 'ಉಪ್ಪೆನ' ಸಿನಿಮಾ ಮಾಡಿದ್ದರು.



# ನೆರಳೊಟ್ಟಿಗೆ ಜಗಳ

ಸಿನಿಮಾಗಳಲ್ಲಿ ಬಾಡಿ ಡಬಲ್ ಅಥವಾ ಡ್ಯೂಪ್‌ಗಳು ಮಹತ್ವದ ಪಾತ್ರ ನಿರ್ವಹಿಸುತ್ತಾರೆ. ಆಕ್ಷನ್ ಸಿನಿಮಾಗಳಲ್ಲಿ ಡ್ಯೂಪ್‌ಗಳು ಇಲ್ಲದಿದ್ದರೆ ಕತೆ ಮುಗಿದಂತೆ. ಇತ್ತೀಚೆಗೆ ಭಾರತದ ಎಲ್ಲಾ ಸ್ಟಾರ್ ನಟರಿಗೂ ಅವರದ್ದೇ ಆದ ಬಾಡಿ ಡಬಲ್ ಇದ್ದಾರೆ. ಆದರೆ ಜೂ ಎನ್‌ಟಿಆರ್ ಅವರ ಬಾಡಿ ಡಬಲ್ ಅವರಿಂದ ದೂರಾಗಿದ್ದಾರೆ ಎನ್ನಲಾಗುತ್ತಿದೆ. ಸ್ಟಾರ್ ನಟರುಗಳಿಗೆ ಡ್ಯೂಪ್‌ಗಳು ಇರುವುದು ಸಹಜ. ಆಕ್ಷನ್ ಸೀನ್‌ಗಳನ್ನು ನಟರ ಬದಲಿಗೆ ಡ್ಯೂಪ್‌ಗಳು ಮಾಡುತ್ತಾರೆ, ನಟರು ಕೇವಲ ಪೋಸು ಕೊಡುತ್ತಾರೆ. ಸಿನಿಮಾ ನಿರ್ಮಾಣದಲ್ಲಿ ವಿಶೇಷವಾಗಿ ಆಕ್ಷನ್ ಸೀನ್ ಶೂಟಿಂಗ್ ವೇಳೆ ಡ್ಯೂಪ್‌ಗಳ ಅಗತ್ಯತೆ ಬಹಳ ಇರುತ್ತದೆ. ಭಾರತದ ಬಹುತೇಕ ಸ್ಟಾರ್ ನಟರಿಗೆ ಅವರದ್ದೇ ಆದ ಖಾಸಗಿ ಡ್ಯೂಪ್‌ಗಳಿದ್ದಾರೆ. ಈ ಡ್ಯೂಪ್‌ಗಳು ತಮ್ಮ ನಟರ ಹೊರತಾಗಿ ಇತರರಿಗೆ ಡ್ಯೂಪ್ ಮಾಡುವುದಿಲ್ಲ. ನಟರ ದೇಹದ ಆಕಾರ, ಹೈಟ್, ಮುಖಚಹರೆ ಬಹುತೇಕ ಹೊಂದುವವರನ್ನೇ ಡ್ಯೂಪ್‌ಗಳನ್ನಾಗಿ ಬಳಸಲಾಗುತ್ತದೆ. ಸಾಮಾನ್ಯವಾಗಿ ಈ ಡ್ಯೂಪ್‌ಗಳು ಹೊರಗೆ ಕಾಣಿಸಿಕೊಳ್ಳುವುದಿಲ್ಲ. ನಟ ಜೂ ಎನ್‌ಟಿಆರ್‌ಗೂ ಸಹ ಒಬ್ಬ ಡ್ಯೂಪ್ ಇದ್ದಾರೆ. ಆದರೆ ಇದೀಗ ಈ ಡ್ಯೂಪ್, ಜೂ ಎನ್‌ಟಿಆರ್ ಇಂದ ದೂರಾಗಿದ್ದಾರೆ ಎನ್ನಲಾಗುತ್ತಿದೆ. ಜೂ ಎನ್‌ಟಿಆರ್ ಅವರ ಡ್ಯೂಪ್ ಅಥವಾ ಬಾಡಿ ಡಬಲ್ ಹೆಸರು ಈಶ್ವರ್ ಹ್ಯಾರಿಸ್. ಹಲವು ವರ್ಷಗಳಿಂದಲೂ ಇವರು ಜೂ ಎನ್‌ಟಿಆರ್ ಅವರ ಡ್ಯೂಪ್ ಕೆಲಸ ಮಾಡುತ್ತಿದ್ದಾರೆ. ಜೂ ಎನ್‌ಟಿಆರ್‌ಗೆ ಮಾಡಲಾಗದ ಅಥವಾ ರಿಸ್ಕಿ ಆಗಿರುವ ಸ್ಟಂಟ್ ಗಳನ್ನು ಈಶ್ವರ್ ಹ್ಯಾರಿಸ್ ಮಾಡುತ್ತಾರೆ. ಮಾಡಿದ್ದಾರೆ.



ಜೂ ಎನ್ ಟಿಆರ್ ಸಿನಿಮಾದಿಂದ ಹೊರಬಂದ ಡ್ಯೂಪ್

## ಜವಾಬ್ದಾರಿ ಮುಗಿಯಿತು.. ನಟನೆಗೆ ಮರಳಲು ರೆಡಿ

ಹಲವು ವರ್ಷಗಳ ನಂತರ ಪ್ರಸಿದ್ಧ ನಟಿ ರಂಭಾ ಅವರು ಚಿತ್ರರಂಗಕ್ಕೆ ಮರಳಲು ನಿರ್ಧರಿಸಿದ್ದಾರೆ. ತಮ್ಮ ಮಕ್ಕಳನ್ನು ಬೆಳೆಸುವ ಜವಾಬ್ದಾರಿಯನ್ನು ನಿಭಾಯಿಸಿದ ನಂತರ, ಅವರು ತಮ್ಮ ನಟನಾ ವೃತ್ತಿಗೆ ಮರಳುತ್ತಿದ್ದಾರೆ. ಇದು ಅವರ ಅಭಿಮಾನಿಗಳಿಗೆ ಸಂತೋಷದ ಸುದ್ದಿಯಾಗಿದೆ. ಅವರು ತಮ್ಮ ಕುಟುಂಬದ ಬೆಂಬಲದೊಂದಿಗೆ ಚಿತ್ರರಂಗದಲ್ಲಿ ಹೊಸ ಅಧ್ಯಾಯವನ್ನು ಪ್ರಾರಂಭಿಸಲು ಸಿದ್ಧರಾಗಿದ್ದಾರೆ. ನಟಿ ರಂಭಾ ಅವರು ಚಿತ್ರರಂಗದಿಂದ ದೂರ ಸರಿದು ಹಲವು ವರ್ಷಗಳು ಕಳೆದಿವೆ. ಅವರು ಬಣ್ಣದ ಲೋಕಕ್ಕೆ ಮರಳಲಿ ಎಂದು ಫ್ಯಾನ್ಸ್ ಬಯಸುತ್ತಾ ಇದ್ದರು. ಆದರೆ ಅದು ಸಾಧ್ಯವೇ ಆಗಿರಲಿಲ್ಲ. ಕೊನೆಗು ಅಭಿಮಾನಿಗಳ ಆಸೆ ಈಡೇರುವಂತಾಗಿದೆ. ಅವರು ಈಗ ಬಣ್ಣದ ಲೋಕಕ್ಕೆ ಮರಳಲು ನಿರ್ಧರಿಸಿದ್ದಾರೆ.

ಅಲ್ಲದೆ ಚಿತ್ರರಂಗದಿಂದ ದೂರ ಇರಲು ಕಾರಣವೇನು ಎಂಬುದನ್ನು ಅವರು ವಿವರಿಸಿದ್ದಾರೆ. ಈ ವಿಚಾರ ತಿಳಿದು ರಂಭಾ ಅವರ ಫ್ಯಾನ್ಸ್ ಖುಷಿಪಟ್ಟಿದ್ದಾರೆ. ರಂಭಾ ಚಿತ್ರರಂಗಕ್ಕೆ ಬಂದಾಗ ಅವರಿಗೆ ಕೇವಲ 15 ವರ್ಷ. ಅವರು ಸಣ್ಣ ವಯಸ್ಸಿನಲ್ಲೇ ಖ್ಯಾತಿ ಪಡೆದುಕೊಂಡರು. ನಟಿಯಾಗಿ ಗುರುತಿಸಿಕೊಂಡ ಬಳಿಕ ಅವರ ಜನಪ್ರಿಯತೆಗೆ ಪಾರವೇ ಇಲ್ಲದಂತೆ ಆಯಿತು. 1993ರಲ್ಲಿ 'ಸರ್ವರ್ ಸೋಮಣ್ಣ' ಸಿನಿಮಾ ರಿಲೀಸ್ ಆಯಿತು. ಇದು ಅವರ ನಟನೆಯ ಮೊದಲನೇ ಕನ್ನಡ ಸಿನಿಮಾ. ಆ ಬಳಿಕ ಅವರು 8 ಕನ್ನಡ ಸಿನಿಮಾಗಳಲ್ಲಿ ನಟಿಸಿದರು. ತಮಿಳಿನಲ್ಲಿ ರಂಭಾ ಬೇಡಿಕೆಯ ನಟಿಯಾದ ಹೊರತಾಗಿಯೂ ಅವರು ನಟನೆಯಿಂದ ದೂರ ಆಗುವ ನಿರ್ಧಾರಕ್ಕೆ ಬಂದರು.



# ಮಹೇಶ್ ಬಾಬುಗೆ ಇಡಿ ನೋಟಿಸ್

ಟಾಲಿವುಡ್ ನಟ ಮಹೇಶ್ ಬಾಬು ಅವರಿಗೆ ಜಾರಿ ನಿರ್ದೇಶನಾಲಯ (ಇಡಿ) ನೋಟಿಸ್ ಜಾರಿ ಮಾಡಿದೆ. ಸುರಾನ ಗ್ರೂಪ್ ಮತ್ತು ಸಾಯಿಸೂರ್ಯ ಡೆವಲಪರ್ಸ್ ಪ್ರಕರಣಕ್ಕೆ ಸಂಬಂಧಿಸಿದಂತೆ ಏಪ್ರಿಲ್ 28 ರಂದು ವಿಚಾರಣೆಗೆ ಹಾಜರಾಗುವಂತೆ ಸೂಚಿಸಲಾಗಿದೆ. 3.4 ಕೋಟಿ ರೂಪಾಯಿಗಳ ಪ್ರಚಾರದ ಹಣ ಪಡೆದ ಆರೋಪ ಮೇಲೆ ತನಿಖೆ ನಡೆಯುತ್ತಿದೆ. ಟಾಲಿವುಡ್‌ನ ಸ್ಟಾರ್ ನಟ ಮಹೇಶ್ ಬಾಬುಗೆ ಜಾರಿ ನಿರ್ದೇಶನಾಲಯ (ಇಡಿ) ನೋಟಿಸ್ ಕೊಟ್ಟಿದೆ. ಇದರಿಂದ ಸ್ಟಾರ್ ಹೀರೋಗೆ ತೊಂದರೆ ಎದುರಾಗಿದೆ. ಸುರಾನ ಗ್ರೂಪ್ ಮತ್ತು ಸಾಯಿಸೂರ್ಯ ಡೆವಲಪರ್ಸ್ ಪ್ರಕರಣದಲ್ಲಿ ಇದೇ 28ರಂದು ವಿಚಾರಣೆಗೆ ಹಾಜರಾಗುವಂತೆ ನೋಟಿಸ್‌ನಲ್ಲಿ ತಿಳಿಸಲಾಗಿದೆ. ಈ ಸಂಸ್ಥೆಯ ಪ್ರಚಾರಕ್ಕಾಗಿ ಮಹೇಶ್ ಬಾಬು ಅವರು 5.9ಕೋಟಿ ರೂ.ಗಳನ್ನು ತೆಗೆದುಕೊಂಡಿದ್ದರು ಎನ್ನಲಾಗಿದೆ. ಏಪ್ರಿಲ್ 16ರಂದು ಇಡಿ ಅಧಿಕಾರಿಗಳು ಹೈದರಾಬಾದ್‌ನಲ್ಲಿ ಶೋಧ ನಡೆಸಿದ್ದರು. ಸುರಾನ ಗ್ರೂಪ್ ಮತ್ತು ಸಾಯಿಸೂರ್ಯ ಡೆವಲಪರ್ಸ್ ಕಚೇರಿಗಳು ಹಾಗೂ ಈ ಕಂಪನಿಗಳ ಮುಖ್ಯಸ್ಥರ ಮನೆಗಳ ಮೇಲೆ ದಾಳಿ ನಡೆಸಿತ್ತು. ಅದಾದ ನಂತರ ಈ ಬೆಳವಣಿಗೆ ನಡೆದಿದೆ. ಏಪ್ರಿಲ್ 28ರ ಬೆಳಿಗ್ಗೆ 10:30ಕ್ಕೆ ಮಹೇಶ್ ಬಾಬು ಹೈದರಾಬಾದ್‌ನಲ್ಲಿ ವಿಚಾರಣೆಗೆ ಹಾರಜಿ ಹಾಕಬೇಕಿದೆ. ಮಹೇಶ್ ಬಾಬು ತಮ್ಮ ಪತ್ನಿ ಮತ್ತು ಮಕ್ಕಳೊಂದಿಗೆ ಸಾಯಿಸೂರ್ಯ ಡೆವಲಪರ್ಸ್ ಜಾಹೀರಾತಿನಲ್ಲಿ ನಟಿಸಿದ್ದರು. ಮಹೇಶ್ ಬಾಬು ಪ್ರಸ್ತುತ ರಾಜಮೌಳಿ ಅವರ ಚಿತ್ರದ ಚಿತ್ರೀಕರಣದಲ್ಲಿ ನಿರತರಾಗಿದ್ದಾರೆ. ಈ ಚಿತ್ರದ ಚಿತ್ರೀಕರಣ ವೇಗವಾಗಿ ನಡೆಯುತ್ತಿದೆ. ಇದರ ಮಧ್ಯೆ ಅವರಿಗೆ ತೊಂದರೆ ಎದುರಾಗಿದೆ. ಸುರಾನ್ ಗ್ರೂಪ್ ಮತ್ತು ಸಾಯಿಸೂರ್ಯ ಡೆವಲಪರ್ಸ್‌ನಲ್ಲಿ ಸಾಕಷ್ಟು ಅಕ್ರಮಗಳು ನಡೆದಿರೋದು ಬೆಳಕಿಗೆ ಬಂದಿದೆ. ರಿಯಲ್ ಎಸ್ಟೇಟ್ ಡೀಲಿಂಗ್ ವೇಳೆ ಈ ಅಕ್ರಮ ಎಸಗಲಾಗಿದೆ. ಇದರಲ್ಲಿ ಮಹೇಶ್ ಬಾಬು ಅವರ ಶಾಮೀಲಾಗಿದ್ದಾರಾ ಎಂಬ ಬಗ್ಗೆ ತನಿಖೆ ನಡೆಯಲಿದೆ.

ಖ್ಯಾತ ನಟನಿಗೆ ಸಂಕಷ್ಟ

# ರಾಜಸ್ಥಾನ್ ರಾಯಲ್ಸ್ ವಿರುದ್ಧ ಮ್ಯಾಚ್ ಫಿಕ್ಸಿಂಗ್ ಆರೋಪ

ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ಸೋಲಿನ ಬೆನ್ನಲ್ಲೇ ರಾಜಸ್ಥಾನ್ ರಾಯಲ್ಸ್ ವಿರುದ್ಧ ಮ್ಯಾಚ್ ಫಿಕ್ಸಿಂಗ್ ಆರೋಪ ಕೇಳಿ ಬಂದಿದೆ. ಇಂತಹದೊಂದು ಆರೋಪ ಮಾಡಿರುವುದು ರಾಜಸ್ಥಾನ ಕ್ರಿಕೆಟ್ ಅಸೋಸಿಯೇಷನ್ ತಾತ್ಕಾಲಿಕ ಸಮಿತಿಯ ಸಂಚಾಲಕ ಜೈದೀಪ್ ಬಿಹಾನಿ ಎಂಬುದು ವಿಶೇಷ. ಐಪಿಎಲ್‌ನ 36ನೇ ಪಂದ್ಯದಲ್ಲಿ ಲಕ್ನೋ ಸೂಪರ್ ಜೈಂಟ್ಸ್ ವಿರುದ್ಧ ರಾಜಸ್ಥಾನ್ ರಾಯಲ್ಸ್ ತಂಡವು ಕೇವಲ 2 ರನ್‌ಗಳಿಂದ ಸೋಲನುಭವಿಸಿತ್ತು.

ಈ ಸೋಲಿನ ಬಗ್ಗೆ ಅನುಮಾನಗಳಿವೆ ಎಂದಿರುವ ಆರ್‌ಸಿಎ ತಾತ್ಕಾಲಿಕ ಸಮಿತಿಯ ಸಂಚಾಲಕ ಜೈದೀಪ್ ಬಿಹಾನಿ, ರಾಜಸ್ಥಾನ್ ರಾಯಲ್ಸ್ ತಂಡ ಮ್ಯಾಚ್ ಫಿಕ್ಸಿಂಗ್ ಮಾಡಿರುವ ಸಾಧ್ಯತೆಗಳಿವೆ. ಈ ಬಗ್ಗೆ ತನಿಖೆ ನಡೆಸಬೇಕೆಂದು ಆಗ್ರಹಿಸಿದ್ದಾರೆ. ಶ್ರೀಗಂಗಾನಗರದ ಬಿಜೆಪಿ ಶಾಸಕರು ಕೂಡ ಆಗಿರುವ ಜೈದೀಪ್ ಬಿಹಾನಿ ಅವರ ಆರೋಪವು ಇದೀಗ ಮಹತ್ವ ಪಡೆದುಕೊಂಡಿದೆ.

ರಾಜಸ್ಥಾನ್ ಸರ್ಕಾರವು ತಾತ್ಕಾಲಿಕ ಸಮಿತಿಯನ್ನು ಸ್ಥಾಪಿಸಿರುವುದನ್ನು ಪ್ರಶ್ನಿಸಿರುವ ಜೈದೀಪ್ ಬಿಹಾನಿ, ಐಪಿಎಲ್‌ಗೆ ಸಂಬಂಧಿಸಿದಂತೆ ರಾಜಸ್ಥಾನ್ ರಾಯಲ್ಸ್‌ನ ಹಿತಾಸಕ್ತಿಗಳ ಮೇಲೆ ನಿಯಂತ್ರಣವಿಲ್ಲದಿದ್ದರೆ ಏನು ಪ್ರಯೋಜನ. ರಾಜ್ಯ ಸರ್ಕಾರವು ಒಂದು ತಾತ್ಕಾಲಿಕ ಸಮಿತಿಯನ್ನು ರಚಿಸಿ ಇದೀಗ ಈ ಸಮಿತಿಯ 5ನೇ ಅವಧಿಗೆ ವಿಸ್ತರಿಸಿದೆ. ಈ ಸಮಿತಿಯನ್ನು ಸ್ಥಾಪಿಸುವ ಉದ್ದೇಶ ಎಲ್ಲಾ ಸ್ಪರ್ಧೆಗಳನ್ನು ಸರಿಯಾಗಿ ಆಯೋಜಿಸುವುದಾಗಿದೆ. ಆದರೆ ಪ್ರಸ್ತುತ ರಾಜಸ್ಥಾನ್ ರಾಯಲ್ಸ್ ತಂಡದ ಪ್ರದರ್ಶನ ನೋಡಿದರೆ ಮ್ಯಾಚ್ ಫಿಕ್ಸಿಂಗ್ ಮಾಡಿಕೊಂಡಿರುವಂತೆ ಕಾಣುತ್ತಿದೆ ಎಂದು ಆರೋಪಿಸಿದ್ದಾರೆ.



ಜೈದೀಪ್ ಬಿಹಾನಿ ಗಂಭೀರ ಆರೋಪ

ಜೈಪುರದ ಸವಾಯಿ ಮಾನ್‌ಸಿಂಗ್ ಸ್ಟೇಡಿಯಂನಲ್ಲಿ ನಡೆದ ಈ ಪಂದ್ಯದಲ್ಲಿ ಮೊದಲು ಬ್ಯಾಟ್ ಮಾಡಿದ ಲಕ್ನೋ ಸೂಪರ್ ಜೈಂಟ್ಸ್ ತಂಡವು 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 180 ರನ್ ಕಲೆಹಾಕಿತು.

ಈ ಗುರಿಯನ್ನು ಬೆನ್ನತ್ತಿದ ರಾಜಸ್ಥಾನ್ ರಾಯಲ್ಸ್ ತಂಡ 19 ಓವರ್‌ಗಳಲ್ಲಿ 172 ರನ್ ಕಲೆಹಾಕಿದ್ದರು. ಅದರಂತೆ ಕೊನೆಯ ಓವರ್‌ನಲ್ಲಿ ಗೆಲ್ಲಲು ಕೇವಲ 9 ರನ್‌ಗಳ ಅವಶ್ಯಕತೆಯಿತ್ತು. ಈ ಹಂತದಲ್ಲಿ ನಾಯಕ ರಿಷಭ್ ಪಂತ್ ಚೆಂಡನ್ನು ಅವೇಶ್ ಖಾನ್ ಅವರ ಕೈಗಿತ್ತರು.

20ನೇ ಓವರ್ ಎಸೆದ ಅವೇಶ್ ಖಾನ್, ಮೊದಲ ಎಸೆತದಲ್ಲಿ ಕೇವಲ 1 ರನ್ ನೀಡಿದರು. 2ನೇ ಎಸೆತದಲ್ಲಿ ಶಿಮ್ರೋನ್ ಹೆಟ್ಮೆಯರ್ 2 ರನ್ ಕಲೆಹಾಕಿದರು. ಇನ್ನು 3ನೇ ಎಸೆತದಲ್ಲಿ ಹೆಟ್ಮೆಯರ್ ಕ್ಯಾಚ್ ನೀಡಿ ಔಟಾದರು. 4ನೇ ಎಸೆತದಲ್ಲಿ ಶುಭಂ ದುಬೆ ಯಾವುದೇ ರನ್ ಕಲೆಹಾಕಿಲಿಲ್ಲ.

5ನೇ ಎಸೆತದಲ್ಲಿ ದುಬೆ 2 ರನ್ ಓಡಿದರು. ಪರಿಣಾಮ ಕೊನೆಯ ಎಸೆತದಲ್ಲಿ 4 ರನ್‌ಗಳ ಬೇಕಿತ್ತು. ಅಂತಿಮ ಎಸೆತದಲ್ಲಿ ಕೇವಲ 1 ರನ್ ಮಾತ್ರ ನೀಡುವ ಮೂಲಕ ಅವೇಶ್ ಖಾನ್ ಲಕ್ನೋ ಸೂಪರ್ ಜೈಂಟ್ಸ್ ತಂಡಕ್ಕೆ 2 ರನ್‌ಗಳ ರೋಚಕ ಗೆಲುವು ತಂದುಕೊಟ್ಟರು. ರಾಜಸ್ಥಾನ್ ರಾಯಲ್ಸ್ ತಂಡದ ಈ ಸೋಲಿನ ಬಗ್ಗೆ ಜೈದೀಪ್ ಬಿಹಾನಿ ಮ್ಯಾಚ್ ಫಿಕ್ಸಿಂಗ್ ಗಂಭೀರ ಆರೋಪ ಮಾಡಿದ್ದಾರೆ.

# ಹೀಗಿದೆ ಆರ್‌ಸಿಬಿ ತಂಡದ ಪ್ಲೇಆಫ್ ಲೆಕ್ಕಾಚಾರ

ಇಂಡಿಯನ್ ಪ್ರೀಮಿಯರ್ ಲೀಗ್ ಸೀಸನ್ 18ರ ಮೊದಲಾರ್ಧ ಮುಗಿದು ದ್ವಿತೀಯಾರ್ಧದ ಪಂದ್ಯಗಳು ಶುರುವಾಗಿದೆ. ದ್ವಿತೀಯಾರ್ಧದ ಮೊದಲ ಪಂದ್ಯದಲ್ಲೇ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ಬಲಿಷ್ಠ ಪಂಜಾಬ್ ಕಿಂಗ್ಸ್ ತಂಡವನ್ನು ಬಗ್ಗು ಬಡಿದಿದೆ. ಈ ಗೆಲುವಿನೊಂದಿಗೆ ಆರ್‌ಸಿಬಿ ತಂಡವು ಅಂಕ ಪಟ್ಟಿಯಲ್ಲಿ 3ನೇ ಸ್ಥಾನಕ್ಕೇರಿದೆ.

ಸದ್ಯ ಮೂರನೇ ಸ್ಥಾನದಲ್ಲಿರುವ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡಕ್ಕೆ ಮುಂದಿನ 6 ಪಂದ್ಯಗಳು ಬಹಳ ಮುಖ್ಯ. ಏಕೆಂದರೆ ಈ ಆರು ಮ್ಯಾಚ್‌ಗಳಲ್ಲಿ ಭರ್ಜರಿ ಜಯ ಸಾಧಿಸಿದರೆ ಆರ್‌ಸಿಬಿ ನೇರವಾಗಿ ಪ್ಲೇಆಫ್‌ಗೆ ಎಂಟ್ರಿ ಕೊಡಬಹುದು. ಸಾಮಾನ್ಯವಾಗಿ ಪ್ಲೇಆಫ್ ಪ್ರವೇಶಿಸಲು 16 ಅಂಕಗಳನ್ನು ಪಡೆದರೆ ಸಾಕು. ಇದೀಗ ಆರ್‌ಸಿಬಿ ತಂಡವು ಒಟ್ಟು 10 ಅಂಕಗಳನ್ನು ಹೊಂದಿದೆ. ಇನ್ನುಳಿದ 6 ಮ್ಯಾಚ್‌ಗಳಲ್ಲಿ 3 ರಲ್ಲಿ ಗೆದ್ದರೆ 16 ಅಂಕಗಳು ಆಗಲಿದೆ. ಆದರೆ ಆರ್‌ಸಿಬಿ ತಂಡವು ಮುಂದಿನ 6 ಪಂದ್ಯಗಳಲ್ಲಿ 4 ಮ್ಯಾಚ್‌ಗಳನ್ನು ತವರಿನಲ್ಲಿ ಆಡಬೇಕಿದೆ. ಇಲ್ಲಿ ಗಮನಿಸಬೇಕಾದ ಮುಖ್ಯ ಅಂಶವೆಂದರೆ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡ ತವರಿನಲ್ಲಿ ಈವರೆಗೆ ಒಂದೇ ಒಂದು ಪಂದ್ಯ ಗೆದ್ದಿಲ್ಲ ಎಂಬುದು. ಈ ಬಾರಿ ತವರಿನಲ್ಲಿ ಆಡಿದ 3 ಪಂದ್ಯಗಳಲ್ಲಿ ಆರ್‌ಸಿಬಿ ತಂಡ ಸೋಲನುಭವಿಸಿದೆ. ಇದಾಗ್ಯೂ ಎದುರಾಳಿಗಳ ತವರು ಮೈದಾನದಲ್ಲಿ 5 ಗೆಲುವು ದಾಖಲಿಸಿ 10 ಪಾಯಿಂಟ್ಸ್‌ಗಳನ್ನು ಕಲೆಹಾಕಿರುವುದು ವಿಶೇಷ. ಇದೀಗ 4+2 ಪಂದ್ಯಗಳನ್ನು ಆಡಬೇಕಿರುವ ಆರ್‌ಸಿಬಿಗೆ ತವರಿನಲ್ಲಿ ನಡೆಯಲಿರುವ ಪಂದ್ಯಗಳೇ ನಿರ್ಣಾಯಕ. ಅಂದರೆ ತವರು ಮೈದಾನದಲ್ಲಿ ಆರ್‌ಸಿಬಿ ಆಡಲಿರುವ 4 ಮ್ಯಾಚ್‌ಗಳಲ್ಲಿ ಕನಿಷ್ಠ 2 ಗೆಲುವು ಅತ್ಯವಶ್ಯಕ. ಇನ್ನುಳಿದ 2 ಪಂದ್ಯಗಳಲ್ಲಿ 1 ಗೆಲುವು ದಾಖಲಿಸಿದರೂ ರಾಯಲ್ ಚಾಲೆಂಜರ್ಸ್ ಬೆಂಗಳೂರು ತಂಡವು 16 ಅಂಕಗಳನ್ನು ಪಡೆಯಲಿದೆ. ಈ ಮೂಲಕ ಆರ್‌ಸಿಬಿ ಪ್ಲೇಆಫ್ ಹಂತಕ್ಕೇರಬಹುದು. ಇನ್ನು ಆರ್‌ಸಿಬಿ ತಂಡದ ಮುಂದಿನ ಎದುರಾಳಿಗಳು ಯಾರೆಂದು ನೋಡುವುದಾದರೆ.... ರಾಜಸ್ಥಾನ್ ರಾಯಲ್ಸ್ (ಬೆಂಗಳೂರಿನಲ್ಲಿ ಪಂದ್ಯ), ಡೆಲ್ಲಿ ಕ್ಯಾಪಿಟಲ್ಸ್ (ದೆಹಲಿಯಲ್ಲಿ ಪಂದ್ಯ), ಚೆನ್ನೈ ಸೂಪರ್ ಕಿಂಗ್ಸ್ (ಬೆಂಗಳೂರಿನಲ್ಲಿ ಪಂದ್ಯ), ಲಕ್ನೋ ಸೂಪರ್ ಜೈಂಟ್ಸ್ (ಲಕ್ನೋನಲ್ಲಿ ಪಂದ್ಯ), ಸನ್‌ರೈಸರ್ಸ್ ಹೈದರಾಬಾದ್ (ಬೆಂಗಳೂರಿನಲ್ಲಿ ಪಂದ್ಯ), ಕೊಲ್ಕತ್ತಾ ನೈಟ್ ರೈಡರ್ಸ್ (ಬೆಂಗಳೂರಿನಲ್ಲಿ ಪಂದ್ಯ). ಈ ಮ್ಯಾಚ್‌ಗಳ ಮೂಲಕ ಆರ್‌ಸಿಬಿ ತಂಡದ ಪ್ಲೇಆಫ್ ಭವಿಷ್ಯ ನಿರ್ಧಾರವಾಗಲಿದೆ.



# ರಾಹುಲ್ ಪರಾಕ್ರಮಕ್ಕೆ ಒಲಿದ ದಿಗ್ವಿಜಯ

## ಅವಮಾನಿಸಿದ ಜಾಗದಲ್ಲೇ ಸೇಡು ತೀರಿಸಿಕೊಂಡ ಕನ್ನಡಿಗ!

160 ರನ್‌ಗಳ ಗುರಿ ಬೆನ್ನಟ್ಟಿದ ಡೆಲ್ಲಿ ಕೇವಲ 17.5 ಓವರ್‌ಗಳಲ್ಲಿ ಚೇಸ್ ಮಾಡುವ ಮೂಲಕ ಗೆದ್ದು ಬೀಗಿತು. ಮಾತ್ರವಲ್ಲ ಈ ಪಂದ್ಯದಲ್ಲಿ ಕನ್ನಡಿಗ ಕೆಎಲ್ ರಾಹುಲ್ ಅಜೇಯ ಅರ್ಧಶತಕ ಸಿಡಿಸಿ ಲಖನೌ ವಿರುದ್ಧ ಸೇಡು ತೀರಿಸಿಕೊಂಡಿದ್ದಾರೆ.

ಡೆಲ್ಲಿ ಕ್ಯಾಪಿಟಲ್ಸ್ ಹಾಗೂ ಲಖನೌ ಸೂಪರ್ ಜೈಂಟ್ಸ್ ನಡುವಿನ 2025ನೇ ಸಾಲಿನ 40ನೇ ಪಂದ್ಯದಲ್ಲಿ ಲಖನೌನ ಏಕ'ನಾ ಕ್ರಿಕೆಟ್ ಮೈದಾನದಲ್ಲಿ ನಡೆಯಿತು. ಟಾಸ್ ಸೋತು ಮೊದಲು ಬ್ಯಾಟಿಂಗ್ ಮಾಡಿದ ಲಖನೌ ನಿಗದಿತ 20 ಓವರ್ಗಳಲ್ಲಿ 159 ರನ್‌ಗಳ ಸಾಧಾರಣ ಮೊತ್ತ ಕಲೆಹಾಕಿತು. 160 ರನ್‌ಗಳ ಗುರಿ ಬೆನ್ನಟ್ಟಿದ ಡೆಲ್ಲಿ ಕೇವಲ 17.5 ಓವರ್‌ಗಳಲ್ಲಿ ಚೇಸ್ ಮಾಡುವ ಮೂಲಕ ಗೆದ್ದು ಬೀಗಿತು. ಮಾತ್ರವಲ್ಲ ಈ ಪಂದ್ಯದಲ್ಲಿ ಕನ್ನಡಿಗ ಕೆಎಲ್ ರಾಹುಲ್ ಅಜೇಯ ಅರ್ಧಶತಕ ಸಿಡಿಸಿ ಲಖನೌ ವಿರುದ್ಧ ಸೇಡು ತೀರಿಸಿಕೊಂಡಿದ್ದಾರೆ.

**ಮಾರ್ಕ್ರಾಮ್ ಅಬ್ಬರದ ಬ್ಯಾಟಿಂಗ್**

ತವರಿನಲ್ಲಿ ನಡೆಯುತ್ತಿರುವ ಐಪಿಎಲ್ ಪಂದ್ಯದಲ್ಲಿ ಡೆಲ್ಲಿ ಕ್ಯಾಪಿಟಲ್ಸ್ ವಿರುದ್ಧ ಲಕ್ನೋ ಸೂಪರ್ ಜೈಂಟ್ಸ್ ತಂಡದ ಓಪನರ್ ಐಡೆನ್ ಮಾರ್ಕ್ರಾಮ್ ಮತ್ತೊಂದು ಅಮೋಘವಾದ ಅರ್ಧಶತಕ ಬಾರಿಸಿದ್ದಾರೆ.

ಲಕ್ನೋದ ಅಟಲ್ ಬಿಹಾರಿ ವಾಜಪೇಯಿ ಏಕನಾ ಕ್ರಿಕೆಟ್ ಸ್ಟೇಡಿಯಂನಲ್ಲಿ ನಡೆಯುತ್ತಿರುವ ಐಪಿಎಲ್ ಪಂದ್ಯದಲ್ಲಿ ಡೆಲ್ಲಿ ನಾಯಕ ಅಕ್ಷರ್ ಪಟೇಲ್ ಅವರು ಟಾಸ್ ಗೆದ್ದು ಫೀಲ್ಡಿಂಗ್ ಆಯ್ಕೆ ಮಾಡಿಕೊಂಡರು. ಲಕ್ನೋ ತಂಡವನ್ನು ಮೊದಲ ಬ್ಯಾಟಿಂಗ್‌ಗೆ ಆಹ್ವಾನ ಮಾಡಿದರು. ಲಕ್ನೋ ಪರವಾಗಿ ಆರಂಭಿಕ ಬ್ಯಾಟ್ಸ್‌ಮನ್‌ಗಳಾಗಿ ಕಣಕ್ಕೆ ಇಳಿದ ಐಡೆನ್ ಮಾರ್ಕ್ರಾಮ್ ಹಾಗೂ ಮಿಚೆಲ್ ಮಾರ್ಷ್ (38★) ಬೌಲರ್‌ಗಳನ್ನ ಕಾಡಿದರು.



ಕನ್ನಡಿಗ ರಾಹುಲ್ ಅಜೇಯ ಅರ್ಧಶತಕ


ಆರಂಭದಿಂದಲೇ ಅಬ್ಬರ ಬ್ಯಾಟಿಂಗ್ ಮಾಡುತ್ತಿದ್ದ ಮಾರ್ಕ್ರಾಮ್ ಡೆಲ್ಲಿ ಕ್ಯಾಪಿಟಲ್ಸ್ ಬೌಲರ್‌ಗಳಿಗೆ ಮನ ಬಂದಂತೆ ಚಚ್ಚಿದರು.

ಇದರಿಂದ ಕೇವಲ 31 ಎಸೆತಗಳಲ್ಲಿ 2 ಬೌಂಡರಿ ಹಾಗೂ 3 ಭರ್ಜರಿ ಸಿಕ್ಸರ್‌ಗಳಿಂದ 51 ರನ್‌ಗಳನ್ನು ಪೂರೈಸಿದರು.

ಈ ಮೂಲಕ ಮಾರ್ಕ್ರಾಮ್ ಅವರು ಲಕ್ನೋ ತಂಡಕ್ಕೆ ಉತ್ತಮವಾದ ಆರಂಭವನ್ನು ಒದಗಿಸಿಕೊಟ್ಟರು ಎನ್ನಬಹುದು.

# ಹೊಸ ಕ್ರಿಕೆಟ್ ಲೀಗ್ ಶುರು ಮಾಡಿದ ಯುವರಾಜ್

ಟಿ20 ಕ್ರಿಕೆಟ್ ನಡುವೆ ಇದೀಗ ಟಿ10 ಲೀಗ್ ಕೂಡ ಜನಪ್ರಿಯತೆ ಪಡೆದುಕೊಳ್ಳುತ್ತಿದೆ. ಅಬುಧಾಬಿ ಟಿ10 ಲೀಗ್‌ನೊಂದಿಗೆ ಶುರುವಾದ ಈ ಟ್ರೆಂಡ್ ಇದೀಗ ಕೆನಡಾದಲ್ಲೂ ಮುಂದುವರೆಯುವ ಸಾಧ್ಯತೆಯಿದೆ. ಅಂದರೆ ಕೆನಡಾದಲ್ಲಿ ಸೂಪರ್-60 ಹೆಸರಿನಲ್ಲಿ ಹೊಸ ಲೀಗ್ ಆರಂಭಿಸಲು ಯೋಜನೆ ರೂಪಿಸಲಾಗಿದೆ.



ಕ್ರಿಕೆಟ್ ಅಂಗಳಕ್ಕೆ ಹೊಸ ಲೀಗ್ ಪರಿಚಯಿಸಲು ಟೀಮ್ ಇಂಡಿಯಾದ ಮಾಜಿ ಆಟಗಾರ ಯುವರಾಜ್ ಸಿಂಗ್ ಮುಂದಾಗಿದ್ದಾರೆ. ಯುವರಾಜ್ ಸಿಂಗ್ ಹಾಗೂ 333, ಕೆನಡಾ ಕ್ರಿಕೆಟ್ ಅಸೋಸಿಯೇಷನ್ ಸಹಯೋಗದಲ್ಲಿ ಸೂಪರ್-60 ಹೆಸರಿನಲ್ಲಿ ಟಿ10 ಶುರು ಮಾಡಲು ಸಜ್ಜಾಗಿದ್ದಾರೆ. ಇದಕ್ಕಾಗಿ ಈಗಾಗಲೇ ಆಟಗಾರರ ನೋಂದಣಿ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಕೆನಾಡದಲ್ಲಿ ನಡೆಯಲಿರುವ ಈ ಟಿ10 ಲೀಗ್‌ಗಾಗಿ ಈಗಾಗಲೇ 1300 ಕ್ಕೂ ಅಧಿಕ ಪ್ಲೇಯರ್ಸ್ ಹೆಸರು ನೋಂದಾಯಿಸಿಕೊಂಡಿದ್ದಾರೆ. ಸ್ಲ್ಯಾಮ್-ಬ್ಯಾಂಗ್ ಟಿ10 ಸ್ವರೂಪದಲ್ಲಿ ನಡೆಯಲಿರುವ ಲೀಗ್‌ಗಾಗಿ 1135 ಪುರುಷ ಮತ್ತು 235 ಮಹಿಳಾ ಆಟಗಾರ್ತಿಯರು ಹೆಸರು ರಿಜಿಸ್ಟರ್ ಮಾಡಿಕೊಂಡಿದ್ದು, ಶೀಘ್ರದಲ್ಲೇ ಡ್ರಾಫ್ಟ್ ಪ್ರಕ್ರಿಯೆ ನಡೆಯಲಿದೆ ಎಂದು ಆಯೋಜಕರು ತಿಳಿಸಿದ್ದಾರೆ. ಹೀಗೆ ಹೆಸರು ನೋಂದಾಯಿಸಿಕೊಂಡಿರುವ ಪ್ರಮುಖ ಆಟಗಾರರ ಪಟ್ಟಿ ಈ ಕೆಳಗಿನಂತಿದೆ. ಫಿನ್ ಅಲೆನ್, ಸಿಕಂದರ್ ರಾಝ, ನಸೀಮ್ ಶಾ, ಅಲೆಕ್ಸ್ ಹೇಲ್ಸ್, ಶಮರ್ ಜೋಸೆಫ್, ಜೇಸನ್ ರಾಯ್, ಕೇಶವ್ ಮಹಾರಾಜ್, ಟಿಮ್ ಸೀಫರ್ಟ್, ಟಿಮ್ ಸೌಥಿ, ಜಿಮ್ಮಿ ನೀಶಮ್, ಆಝಂ ಖಾನ್, ಲುಂಗಿ ಎನ್‌ಗಿಡಿ, ರಿಲೀ ರೊಸ್ಸೌ, ಕ್ರಿಸ್ ಲಿನ್, ಜೇಸನ್ ಹೋಲ್ಡರ್, ಆಂಡ್ರೆ ಫ್ಲೆಚರ್, ಕೈಲ್ ಮೇಯರ್ಸ್, ತಬ್ರೇಝ್ ಶಮ್ಸಿ, ಭಾನುಕ ರಾಜಪಕ್ಸೆ, ಮಾರ್ಟಿನ್ ಗುಪ್ಟಿಲ್, ಡೇವಿಡ್ ಮಲಾನ್, ಮೆಹಿದಿ ಹಸನ್ ಮಿರಾಝ್, ತಂಝಿದ್ ಹಸನ್ ತಮೀಮ್, ಚಾಡ್ ಬೋವ್ಸ್ ಮತ್ತು ಗುಡಕೇಶ್ ಮೋಟಿ.

ಮಹಿಳಾ ಕ್ರಿಕೆಟಿಗರಲ್ಲಿ ಮ್ಯಾಡಿ ಗ್ರೀನ್, ಫ್ರಾನ್ ಜೋನಾಸ್, ರೋಸ್ಮರಿ ಮೈರ್, ಈಡನ್ ಕಾರ್ಸನ್, ಟಾಜ್ಮಿನ್ ಬ್ರಿಟ್ಸ್, ಆಮಿ ಸ್ಮಿತ್, ಲಾರೆನ್ ವಿನ್‌ಫೀಲ್ಡ್-ಹಿಲ್, ಜೆಸ್ ಜೊನಾಸ್ಸೆನ್, ಶಬ್ನಮ್ ಇಸ್ಮಾಯಿಲ್, ಲಾರಾ ಹ್ಯಾರಿಸ್, ಡಿಯಾಂಡ್ರಾ ಡಾಟಿನ್, ಶಿನೆಲ್ಲೆ ಹೆನ್ರಿ, ಸಿನಾಲೊ ಜಾಫ್ತಾ, ನೊನ್‌ಕುಲುಲೆಕೊ ಮ್ಲಾಬಾ, ಫಾತಿಮಾ ಸನಾ ಮತ್ತು ಲಿಯಾ ತಹುಹು ಹೆಸರುಗಳು ಕಾಣಿಸಿಕೊಂಡಿದೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966